ಬೆಂಗಳೂರು ಸಂಪುಟ: 16 ಸಂಚಿಕೆ: 30 ಪುಟ: 06 ಶನಿವಾರ 21-12-2024

Mail:mussanje2010@gmail.com www.mussanjenews.com

ಮುಸ್ಸಂಜೆ
ಪ್ರಭಾವಶಾಲಿ ಕನ್ನಡ ಸಂಜೆ ದಿನ ಪತ್ರಿಕೆ
Managing Editor: N.Veerendra Babu (MBA, LLB)
Executive Editor: L P Babu
Honourary Editor: Venkatesh



## ಜನವರಿಯಿಂದ ಬದಲಾಗಲಿದೆ ಪ್ರೈಮ್ ರೂಲ್

## ಕಣ್ಣೀರು ಹಾಕಿದ ಕೊಹ್ಲಿ!

ನಾಳೆ 'ಮ್ಯಾಕ್ಸ್' ಟ್ರೈಲರ್ ಬಿಡುಗಡೆ ↘ ಪುಟ 6

# 9 ಮಂದಿ ದುರ್ಮರಣ





ಬೆಂಗಳೂರು: ರಾಜ್ಯದ ಎರಡು ಕಡೆಗಳಲ್ಲಿ ಇಂದು ನಡೆದಿರುವ ಭೀಕರ ರಸ್ತೆ ಅಪಘಾತದಲ್ಲಿ 9 ಮಂದಿ ದುರ್ಮರಣ ಹೊಂದಿದ್ದು, ಮತ್ತೋರ್ವನ ಸ್ಥಿತಿ ಚಿಂತಾಜನಕವಾಗಿದೆ.

ನೆಲಮಂಗಲ ಮತ್ತು ಮಳವಳ್ಳಿ ಸಮೀಪ ಇಂದು ಬೆಳಿಗ್ಗೆ ನಡೆದ ಎರಡೂ ಪ್ರತ್ಯೇಕ ಅಪಘಾತಗಳಲ್ಲಿ ಒಂಭತ್ತು ಮಂದಿ ಸಾವನ್ನಪ್ಪಿದ್ದಾರೆ.

ನೆಲಮಂಗಳಲ್ಲಿ ನಡೆದ ಅಪಘಾತದಲ್ಲಿ ಸಾಫ್ಟ್‌ವೇರೆ ಉದ್ಯಮಿಯೊಬ್ಬರ ಇಡೀ ಕುಟುಂಬವೇ ದುರ್ಮರಣಕ್ಕೀಡಾದರೆ, ಮಳವಳ್ಳೀ ಸಮೀಪದ ನಡೆದ ಅಪಘಾತದಲ್ಲಿ ಮೂವರು ವಿದ್ಯಾರ್ಥಿಗಳು ಸಾವನ್ನಪ್ಪಿದ್ದಾರೆ.

ಸಾಫ್ಟ್‌ವೇರ್ ಉದ್ಯಮಿ ಚಂದ್ರಮ್ ಏಗಪ್ಪಗೋಳ್(46), ಪತ್ನಿ ಧೋರಾಬಾಯಿ(40), ಪುತ್ರ ಗ್ಯಾನ್(16), ಪುತ್ರಿಯರಾದ ದೀಕ್ಷಾ(10), ಆರ್ಯ(6) ಸಹೋದರನ




ಪತ್ನಿ ವಿಜಯಲಕ್ಷ್ಮೀ(35) ಮೃತ ದುರ್ದೈವಿಗಳು.

ಇವರೆಲ್ಲರೂ ಮಹಾರಾಷ್ಟ್ರದ ಸಾಂಗ್ವಿ ಜಿಲ್ಲೆಯವರಾಗಿದ್ದು, ಬೆಂಗಳೂರಿನ ಹೆಚ್‌ಎಸ್‌ಆರ್ ಲೇಔಟ್‌ನಲ್ಲಿ ವಾಸವಾಗಿದ್ದರು. ಚಂದ್ರಮ್ ಅವರು ಸಾಫ್ಟ್‌ವೇರ್ ಕಂಪನಿ ಮಾಲೀಕರಾಗಿದ್ದು, ಕುಟುಂಬದ ಜತೆ ವಿಜಯಪುರಲಕ್ಕೆ ತೆರಳುತ್ತಿದ್ದ ಸಮಯದಲ್ಲಿ ಈ ಘಟನೆ ಸಂಭವಿಸಿದೆ.

ಲಾರಿ ತುಮಕೂರಿನಿಂದ ಬೆಂಗಳೂರಿಗೆ ಬರುತ್ತಿತ್ತು. ಮುಂದೆ ಬಂದ ಕಾರಿಗೆ ಡಿಕ್ಕಿಯಾಗುವುದನ್ನ ತಪ್ಪಿಸಲು ಚಾಲಕ ಲಾರಿಯನ್ನು ರೈಟ್‌ಸೈಡ್‌ಗೆ ತೆಗೆದುಕೊಂಡಿದ್ದಾನೆ. ಈ ವೇಳೆ ಚಾಲಕನ ನಿಯಂತ್ರಣ ತಪ್ಪಿ ಲಾರಿ ಕಾರಿನ ಮೇಲೆ ಪಲ್ಟಿಯಾಗಿದ್ದು, ಕಾರು ಸಂಪೂರ್ಣ ಜಖಂಗೊಂಡಿದೆ.

ಘಟನೆ ನಂತರ ರಾಷ್ಟ್ರೀಯ ಹೆದ್ದಾರಿ 4ರಲ್ಲಿ ಸುಮಾರು 1 ಕಿಲೋ ಮೀಟರ್‌ವರೆಗೆ ಟ್ರಾಫಿಕ್ ಜಾಮ್ ಉಂಟಾಗಿದ್ದು, ಸವಾರು ಹರಸಾಹಸ ಪಡುವಂತಾಯಿತು.

ಸ್ಥಳಕ್ಕೆ ಬೆಂಗಳೂರು ಗ್ರಾಮಾಂತರ ಖಕ ಸಿ.ಕೆ ಬಾಬಾ ಸೇರಿದಂತೆ ಇತರೆ ಪೊಲೀಸರು ದೌಡಾಯಿಸಿ ಪರಿಶೀಲನೆ ನಡೆಸಿದರು. ನೆಲಮಂಗಲ ಟ್ರಾಫಿಕ್ ಪೊಲೀಸರು ದೌಡಾಯಿಸಿದ್ದು, ಪೊಲೀಸರು ಸಾರ್ವಜನಿಕರ ನೆರವಿನಿಂದ ಕಾರಿನಲ್ಲಿ ಸಿಲುಕಿದ್ದ ಮೃತದೇಹಗಳನ್ನು ಹೊರತೆಗೆದಿದ್ದಾರೆ.

ಮಂಡ್ಯ ಜಿಲ್ಲೆ ಮಳವಳ್ಳಿ ತಾಲ್ಲೂಕಿನ ಬೋಸೇಗೌಡನ ದೊಡ್ಡಿ ಗ್ರಾಮದ ಬಳಿ ಸಂಭವಿಸಿರುವ ಅಪಘಾತದಲ್ಲಿ

ಮೂವರು ವಿದ್ಯಾರ್ಥಿಗಳು ಸ್ಥಳದಲ್ಲೇ ಸಾವನ್ನಪ್ಪಿ, ಮತ್ತೊರ್ವನ ಸ್ಥಿತಿ ಗಂಭೀರವಾಗಿದೆ ಎಂದು ತಿಳಿದುಬಂದಿದೆ,

ಬೆಂಗಳೂರಿನ ಪ್ರಣವ್, ಆಕಾಶ್, ಆದರ್ಶ್ ಮೃತ ವಿದ್ಯಾರ್ಥಿಗಳು. ಪೃಥ್ವಿ ಎಂಬ ಮತ್ತೊಬ್ಬ ವಿದ್ಯಾರ್ಥಿಗೆ ಗಂಭೀರ ಗಾಯಗಳಾಗಿದ್ದು, ಚಿಕಿತ್ಸೆ ನೀಡಲಾಗುತ್ತಿದೆ.

ಮೃತರು ಮೈಸೂರು ಜಿಲ್ಲೆ ತಲಕಾಡು ಪ್ರವಾಸಕ್ಕೆ ಕಾರಿನಲ್ಲಿ ತೆರಳುತ್ತಿದ್ದರು ಎಂದು ವರದಿಯಾಗಿದ್ದು, ಮೃತದೇಹಗಳನ್ನ ಮಳವಳ್ಳಿ ಸಾರ್ವಜನಿಕ ಆಸ್ಪತ್ರೆ ಶವಗಾರಕ್ಕೆ ಶಿಫ್ಟ್ ಮಾಡಲಾಗಿದೆ.

ಈ ಸಂಬಂಧ ಮಳವಳ್ಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿಸಿಕೊಂಡಿರುವ ಪೊಲೀಸರು ತನಿಖೆ ಮುಂದುವರೆಸಿದ್ದಾರೆ.



ಕೃಷಿ ಸಚಿವರಾದ ಎನ್ ಚಲುವರಾಯಸ್ವಾಮಿ ಅವರು ಇಂದು ಮಂಡ್ಯ ನಗರದಲ್ಲಿ ಕೃಷಿ ಇಲಾಖೆ ವತಿಯಿಂದ ಆಯೋಜಿಸಿದ್ದ ಸಿರಿಧಾನ್ಯ ನಡಿಗೆ ಕಾರ್ಯಕ್ರಮ ಉದ್ಘಾಟಿಸಿದರು. ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿ ಮಲ್ಲಿಕಾರ್ಜುನ ಬಾಲದಂಡಿ ಜಂಟಿ ಕೃಷಿ ನಿರ್ದೇಶಕರಾದ ಅಶೋಕ್ , ಯುವ ಮುಖಂಡರು ಹಾಗೂ ಕಾಲವಿದರಾದ ಸಚ್ಚಿನ್ ಚಲುವರಾಯಸ್ವಾಮಿ ಮತ್ತಿತರರು ಈ ಸಂದರ್ಭದಲ್ಲಿ ಹಾಜರಿದ್ದರು.

## ಸಾಹಿತ್ಯ ಸಮ್ಮೇಳನ ರಾಜಕೀಯ ವೇದಿಕೆ

**ಬೆಂಗಳೂರು:** ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನವನ್ನು ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರು ರಾಜಕೀಯ ವೇದಿಕೆ ಮಾಡಿಕೊಂಡು ನಾಡಿಗೆ ಘೋರ ಅಪಮಾನ ಮಾಡಿದ್ದಾರೆ ಎಂದು ಪ್ರತಿಪಕ್ಷ ನಾಯಕ ಆರ್. ಅಶೋಕ್ ಆರೋಪಿಸಿದ್ದಾರೆ.

ಈ ಬಗ್ಗೆ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಟ್ವೀಟ್ ಮಾಡಿರುವ ಅವರು, ನಾಡಿನ ಕನ್ನಡ ನುಡಿ- ಪರಂಪರೆ- ಶ್ರೀಮಂತ ಸಾಹಿತ್ಯ-ಇತಿಹಾಸ- ಸಂಸ್ಕೃತಿಯನ್ನು ಸಂಭ್ರಮಿಸುವ ವೇದಿಕೆಯಾಗಬೇಕಿದ್ದ ಅಖಿಲ ಭಾರತ ಸಾಹಿತ್ಯ ಸಮ್ಮೇಳನವನ್ನು ರಾಜಕೀಯ ವೇದಿಕೆ ಮಾಡಿಕೊಂಡಿರುವ ಮುಖ್ಯಮಂತ್ರಿ ಸಿದ್ಧರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ತಾಯಿ ಕನ್ನಡಾಂಭೆಗೆ, ಪುಟ 2

## ಪೊಲೀಸರಿಂದ ಕಾನೂನು ಪ್ರಕಾರ ಸಿ.ಟಿ.ರವಿ ಬಂಧನ ಮಾಡಲಾಗಿದೆ



ಬೆಂಗಳೂರು: ಸಿ.ಟಿ.ರವಿ ಪ್ರಕರಣ ಕೋರ್ಟ್‌ನಲ್ಲಿದೆ. ಪೊಲೀಸರು ಕಾನೂನು ಪ್ರಕಾರ ಕೆಲಸ ಮಾಡಿದ್ದೇವೆ ಅಂದಿದ್ದಾರೆ ಎಂದು ಗೃಹ ಸಚಿವ ಜಿ.ಪರಮೇಶ್ವರ್ ತಿಳಿಸಿದ್ದಾರೆ.

ಸದಾಶಿವ ನಗರದಲ್ಲಿ ಮಾತನಾಡಿದ ಅವರು, ಸಿ.ಟಿ.ರವಿ ಪ್ರಕರಣದಲ್ಲಿ ಪೊಲೀಸರು ಕಾನೂನು ಪ್ರಕಾರ ನಿರ್ವಹಿಸಿಲ್ಲ ಎಂಬ ಆರೋಪ ವಿಚಾರವಾಗಿ ಪ್ರತಿಕ್ರಿಯಿಸಿ, 'ಪ್ರಕರಣವು ಕೋರ್ಟ್‌ನಲ್ಲಿದೆ. ಹಾಗಾಗಿ, ಯಾವುದೇ ಹೇಳಿಕೆ ನೀಡುವುದಿಲ್ಲ. ಈ ಬಗ್ಗೆ ಚರ್ಚೆ ಮಾಡೋದು ಸರಿಯಲ್ಲ. ಪೊಲೀಸರು ಸರಿಯಾದ ರೀತಿಯಲ್ಲಿ ಮಾಡಿದ್ದೇವೆ ಅಂತ ಹೇಳಿದ್ದಾರೆ. ಬೇರೆ ಬೇರೆ ರೀತಿಯಲ್ಲಿ ಮಾಹಿತಿ ಕೇಳಿದ್ದು, ಕೇಳದೇ ಜಡ್ಜ್‌ಮೆಂಟ್ ಬಂದಿದೆ ಅಂದಿದ್ದಾರೆ' ಎಂದರು.

ಸದನದ ಒಳಗಿನ ಪ್ರಕರಣ, ಹೊರಗೆ ಕಾನೂನು ಕ್ರಮ ಸರಿಚಿಯೇ ಎಂಬ ಪ್ರಶ್ನೆಗೆ, 'ಕೆಲವರು ಮಾಧ್ಯಮದಲ್ಲಿ ತಾವೇ ವಾದ ಮಾಡಿದ್ದಾರೆ. ಸದನದಲ್ಲಿ ಕಲಾಪ ಮುಂದೂಡಿದ್ದಾಗ ಮಾತನಾಡಿದ್ದಾರೆ. ಹಾಗಾಗಿ, ದಾಖಲಾಗಿಲ್ಲ ಅಂತ ಕೆಲವರು, ಇಲ್ಲ ಇನ್ನೂ ಸದನ ನಡೆಯುತ್ತಿತ್ತು ಅಂತ ಕೆಲವರ ವಾದವಾಗಿದೆ' ಎಂದು ಹೇಳಿದರು.

ನಾಲ್ಕು ಜಿಲ್ಲೆಗಳಲ್ಲಿ ಇಡೀ ರಾತ್ರಿ ಸುತ್ತಿಸಿದ ಆರೋಪ ವಿಚಾರವಾಗಿ ಮಾತನಾಡಿ, 'ಅದರ ಮಾಹಿತಿ ಇಲ್ಲ. ಅದನ್ನೇ ಪೊಲೀಸರಿಂದ ಮಾಹಿತಿ ಕೇಳುತ್ತಿದ್ದೇನೆ. ಮಾಹಿತಿ ಬಂದ ಬಳಿಕ ತಿಳಿಸುತ್ತೇನೆ" ಎಂದರು. 'ಸುವರ್ಣಸೌಧದಲ್ಲಿ ಹಲ್ಲೆ ಮಾಡಲು ಮುಂದಾದ 24 ಜನರನ್ನು ಅಂದೇ ಬಂಧನ ಮಾಡಲಾಯಿತು. ಬಳಿಕ ಅವರನ್ನು ಬಿಡುಗಡೆ ಮಾಡಲಾಗಿದೆ. ಯಾವುದೇ ಪ್ರಕರಣ ನಡೆಯಬಾರದು ಅಂತ ಮುನ್ನೆಚ್ಚರಿಕೆ ನೀಡಲಾಗಿದೆ. ಇಲ್ಲದಿದ್ದರೆ ಮತ್ತಷ್ಟು ದೊಡ್ಡ ಸಮಸ್ಯೆ ಆಗುತ್ತಿತ್ತು' ಎಂದು ತಿಳಿಸಿದರು. ಎಲ್ಲದಕ್ಕೂ ನಾವು ಫುಲ್ ಸ್ಟಾಪ್ ಇಡುತ್ತೇವೆ ಎಂಬ ಸಿ.ಟಿ. ರವಿ ಹೇಳಿಕೆ ಪುಟ 2

## ವಂಚನೆ ಆರೋಪ: ರಾಬಿನ್‌ಗೆ ವಾರಂಟ್ ಜಾರಿ

ಬೆಂಗಳೂರು: ತಮ್ಮ ಕಂಪೆನಿಯ ಉದ್ಯೋಗಿಗಳಿಗೆ ಮತ್ತು ಸರ್ಕಾರಕ್ಕೆ ವಂಚಿಸಿರುವ ಪ್ರಕರಣಕ್ಕೆ



ಸಂಬಂಧಿಸಿದಂತೆ ಟೀಮ್ ಇಂಡಿಯಾದ ಮಾಜಿ ಆಟಗಾರ ರಾಬಿನ್ ಉತ್ತಪ್ಪ ವಿರುದ್ಧ ಅರೆಸ್ಟ್ ವಾರಂಟ್ ಜಾರಿಯಾಗಿದೆ. ರಾಬಿನ್ ಉತ್ತಪ್ಪ ಸೆಂಚುರಿಸ್ ಲೈಫ್ ಸ್ಟೈಲ್ ಬ್ರಾಂಡ್ ಪ್ರೈವೆಟ್ ಲಿಮಿಟೆಡ್ ಎಂಬ ಖಾಸಗಿ ಕಂಪನಿ ನಡೆಸುತ್ತಿದ್ದರು. ಈ ಕಂಪನಿಯಲ್ಲಿ ಕೆಲಸ ಮಾಡುತ್ತಿದ್ದ ಹಲವರ ಪಿಎಫ್ ಹಣ ಪಾವತಿಸದೆ ವಂಚನೆ ಮಾಡಿದ್ದಾರೆ ಎಂಬ ಆರೋಪ ಕೇಳಿ ಬಂದಿದೆ. ರಾಬಿನ್ ಉತ್ತಪ್ಪ ಒಡೆತನದ ಕಂಪೆನಿಯು ಸಂಬಳದಲ್ಲಿ ಪಿಎಫ್ ಹಣ ಕಟ್ ಮಾಡಿದ್ದರೂ, ಉದ್ಯೋಗಿಗಳ ಖಾತೆಗೆ ಪುಟ 2

## ಹೀನ ಮಾತುಗಳೇ ನಮ್ಮ ಸಂಸ್ಕೃತಿ ಎಂದು ಬಿಜೆಪಿ ಒಪ್ಪಿಕೊಳ್ಳಲಿ



ಬೆಂಗಳೂರು: "ಮಹಿಳೆಯರಿಗೆ ಅಪಮಾನ, ಹೀನ ಮಾತುಗಳೇ ನಮ್ಮ ಸಂಸ್ಕೃತಿ ಎಂದು ಬಿಜೆಪಿ ಒಪ್ಪಿಕೊಳ್ಳಲಿ. ನಾವು ತಕರಾರು ಮಾಡುವುದಿಲ್ಲ" ಡಿಸಿಎಂ ಡಿ.ಕೆ. ಶಿವಕುಮಾರ್ ಆಗ್ರಹಿಸಿದರು.

ಸದಾಶಿವನಗರ ನಿವಾಸದ ಬಳಿ ಮಾಧ್ಯಮಗಳ ಪ್ರಶ್ನೆಗಳಿಗೆ ಶಿವಕುಮಾರ್ ಅವರು ಶನಿವಾರ ಪ್ರತಿಕ್ರಿಯೆ ನೀಡಿದರು.

"ಸಿ.ಟಿ. ರವಿ ಕೇವಲ ಲಕ್ಷ್ಮಿ ಹೆಬ್ಬಾಳ್ಕರ್ ಅವರ ಬಗ್ಗೆ ಮಾತ್ರ ಮಾತನಾಡಿಲ್ಲ. ಸಿದ್ದರಾಮಯ್ಯ ಅವರ ಬಗ್ಗೆಯೂ ಹೀನ ಮಾತು ಆಡಿದ್ದಾರೆ. ಸದನದಲ್ಲಿ ನಿತ್ಯ ಸುಮಂಗಲಿ ಎಂದು ಪದ ಬಳಕೆ ಮಾಡಿದ್ದಾರೆ. ರವಿ ಅವರ ಮಾತುಗಳು ಸರಿಯೋ ತಪ್ಪೋ ಎಂದು ಬಿಜೆಪಿ ನಾಯಕರು ಆತ್ಮಾವಲೋಕನ ಮಾಡಿಕೊಳ್ಳಲಿ" ಎಂದು ತಿಳಿಸಿದರು.

"ಚಿಕ್ಕಮಗಳೂರು ಜನ ಎಂದರೆ ಸುಸಂಸ್ಕೃತ ಜನ. ಅಂತಹವರ ನಡುವಿನಿಂದ ಇಂತಹ ವ್ಯಕ್ತಿ ಬಂದಿರುವುದು ದುರಂತ" ಎಂದರು.

"ನಮ್ಮ ಪಕ್ಷದ ಯಾವುದೇ ನಾಯಕರು ಈ ರೀತಿ ಮಾತನಾಡಿದ್ದರೆ ನಾನು ಖಂಡಿಸುತ್ತಿದ್ದೆ. ಆದರೆ ಬಿಜೆಪಿ ನಾಯಕರು ತಮ್ಮ ಪಕ್ಷದ ನಾಯಕರ ರಕ್ಷಣೆಗೆ ನಿಂತಿದ್ದಾರೆ. ಮುನಿರತ್ನ ಪ್ರಕರಣ ಇದೇ ಆರ್.ಅಶೋಕ್ ಏನು ಹೇಳಿದ್ದರು? ಎಫ್ ಎಸ್ ಎಲ್ ವರದಿಯಲ್ಲಿ ಸತ್ಯಾಂಶ ಬಂದ ನಂತರ ಪಕ್ಷದಿಂದ ಹೊರಹಾಕುವುದಾಗಿ ಹೇಳಿದ್ದರು. ಈ ಪ್ರಕರಣದಲ್ಲಿ ಅವರು ಒಂದು ಭಾಗವಾಗಿದ್ದರೂ ಆತನನ್ನು ಸಮರ್ಥಿಸಿಕೊಳ್ಳುತ್ತಿದ್ದಾರೆ. ಇದೇ ಅವರ ನಾಯಕತ್ವ. ಅವರ ಮುತ್ತು ರತ್ನಗಳನ್ನು ಅವರೇ ಇಟ್ಟುಕೊಳ್ಳಲಿ" ಎಂದು ಕಿಡಿಕಾರಿದರು.

ಸಿ. ಟಿ. ರವಿ ಅವರನ್ನು ರಾತ್ರಿಯಿಡೀ ಪೊಲೀಸರು ಸುತ್ತಾಡಿಸಿದರು ಎಂದು ನಿಮ್ಮ ವಿರುದ್ಧ ಬೆಟ್ಟು ಮಾಡಿ ತೋರುತ್ತಿದ್ದಾರೆ ಎಂದು ಕೇಳಿದಾಗ, "ಈ ವಿಚಾರದಲ್ಲಿ ನೀವುಂಟು, ಪೊಲೀಸ್ ಉಂಟು. ಅವರ ಮನೆಯಲ್ಲಿ ಏನಾದರೂ ನಾನೇ ಕಾರಣ. ಅವರ ಪಕ್ಷದಲ್ಲಿ ಏನಾದರೂ ನಾನೇ ಕಾರಣ. ಹೊರಗಡೆ ಏನಾದರೂ ನಾನೇ ಕಾರಣ. ನನ್ನ ಸ್ಮರಿಸದಿದ್ದರೆ ಅವರಿಗೆ ನಿದ್ದೆ ಬರುವುದಿಲ್ಲ" ಪುಟ 2

## ಕೊಹ್ಲಿ ಸಹ ಮಾಲೀಕತ್ವದ ಪಬ್‌ಗೆ ನೋಟಿಸ್

ಬೆಂಗಳೂರು: ಭಾರತ ಸ್ಟಾರ್ ಕ್ರಿಕೆಟರ್ ಮಾಜಿ ಕ್ಯಾಪ್ಟನ್ ವಿರಾಟ್ ಕೊಹ್ಲಿ ಸಹ ಮಾಲೀಕತ್ವದ ಬೆಂಗಳೂರಿನಲ್ಲಿರುವ ಒನ್ 8 ಕಮ್ಯೂನ್ ಬಾರ್ ಆಯಂಡ್ ರೆಸ್ಟೋರೆಂಟ್‌ಗೆ ಬೃಹತ್ ಬೆಂಗಳೂರು



ಮಹಾನಗರ ಪಾಲಿಕೆ ನೋಟಿಸ್ ನೀಡಿದೆ.

ಚಿನ್ನಸ್ವಾಮಿ ಸ್ಟೇಡಿಯಂ ಬಳಿ ಇರುವ ಒನ್ 8 ಕಮ್ಯೂನ್ ಬಾರ್ ಆಯಂಡ್ ರೆಸ್ಟೋರೆಂಟ್ ನಲ್ಲಿ ಅಗ್ನಿ ಸುರಕ್ಷತೆ ಅಳವಡಿಸಿಲ್ಲ ಮತ್ತು ಅಗ್ನಿಶಾಮಕ ದಳದ ಪ್ರಮಾಣ ಪತ್ರ ಪಡೆಯದೇ ಕಾನೂನು ಉಲ್ಲಂಘನೆ ಮಾಡಿದ ಆರೋಪದ ಮೇಲೆ ಬಿಬಿಎಂಪಿ ನೋಟಿಸ್ ನೀಡಿದೆ. ಸಾಮಾಜಿಕ ಕಾರ್ಯಕರ್ತ ವೆಂಕಟೇಶ್ ಎಂಬುವರು ಈ ಬಗ್ಗೆ ಪಾಲಿಕೆಗೆ ದೂರು ನೀಡಿದ್ದರು. ದೂರು ಆಧರಿಸಿ ಶಾಂತಿನಗರ ಪಾಲಿಕೆ ಅಧಿಕಾರಿಗಳು ನೋಟಿಸ್ ನೀಡಿದ್ದಾರೆ ಎನ್ನಲಾಗಿದೆ. ಈ ಹಿಂದೆ ಕೂಡ ಒಂದು ಬಾರಿ ನೋಟಿಸ್ ನೀಡಿದ್ದರೂ ಪುಟ 2

## ಪೊಲೀಸರ ವಿರುದ್ಧ ಸಿಟಿ ರವಿ ಆಕ್ರೋಶ

ಬೆಂಗಳೂರು: ಆಕ್ಷೇಪಾರ್ಹ ಪದ ಬಳಕೆಗೆ ಸಂಬಂಧಿಸಿದಂತೆ ಪೊಲೀಸರು ತಮ್ಮ ಬಂಧಿಸಿ



ಕರೆದೊಯ್ದಾಗ ತಮ್ಮನ್ನ ನಡೆಸಿಕೊಂಡ ರೀತಿಯ ಬಗ್ಗೆ ಎಂಎಲ್ ಸಿ ಸಿ.ಟಿ ರವಿ ಇಂದು ವಿವರಿಸಿದ್ದಾರೆ. ಇಂದು ಸುದ್ದಿಗೋಷ್ಠಿ ನಡೆಸಿ ಪೊಲೀಸರ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ ಸಿ.ಟಿ ರವಿ, ಅಂದು ರಾತ್ರಿ ನನ್ನನ್ನ ಪೊಲೀಸರು ಬಂಧಿಸಿದರು. ನಿಮಗೇನು ತೊಂದರೆ ಆಗಲ್ಲ ಎಂದು ಕರೆದೊಯ್ದರು. ಎಲ್ಲಿಗೆ ಕರೆದೊಯ್ಯುತ್ತೀದ್ದೀರಿ ಎಂದೆ. ಬೆಳಗಾವಿಗೆ ಅಂದ್ರು. ಆದರೆ ಧಾರವಾಡಕ್ಕೆ ಕರೆದೊಯ್ದರು. ಎಲ್ಲಾ ಕಡೆ ಸುತ್ತಾಡಿಸಿದರು. ನಮ್ಮ ವಕೀಲರನ್ನೂ ಸಹ ಒಳಗೆ ಬಿಡಲಿಲ್ಲ. ನನಗೆ ಕುಡಿಯಲು ನೀರು ಕೇಳಿದರೂ ಸಹ ಕೊಡಲಿಲ್ಲ ವಾಶ್ ರೂಂಗೆ ಪುಟ 2

# ಕೇಜ್ರಿ ವಿಚಾರಣೆಗೆ ಸಮ್ಮತಿ

**ನವದೆಹಲಿ:** ದೆಹಲಿ ಅಬಕಾರಿ ನೀತಿ ಪ್ರಕರಣದಲ್ಲಿ ಎಎಪಿ ರಾಷ್ಟ್ರೀಯ ಸಂಚಾಲಕ ಹಾಗು ಮಾಜಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ವಿಚಾರಣೆಗೆ ಒಳಪಡಿಸಲು ದೆಹಲಿ ಲೆಫ್ಟಿನೆಂಟ್ ಗವರ್ನರ್ ಸಮ್ಮತಿ ನೀಡಿದ್ದಾರೆ. ಹೀಗಾಗಿ ಮತ್ತೊಮ್ಮೆ ಸಂಕಷ್ಟಕ್ಕೆ ಸಿಲುಕುವಂತಾಗಿದೆ. ದೆಹಲಿ ಮಾಜಿ ಮುಖ್ಯಮಂತ್ರಿ ಅವರಿಂದ್ ಕೇಜ್ರಿವಾಲ್ ಅವರನ್ನು ಮಾರ್ಚ್ 21 ರಂದು ಬಂಧಿಸಲಾಗಿತ್ತು.6 ತಿಂಗಳ ಜೈಲಿನಿಂದ ಬಿಡುಗಡೆಯಾದ ಬಳಿಕ ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡಿದ್ದರು.

2021–22 ರ ಅಬಕಾರಿ ನೀತಿ– ಸಂಬಂಧಿತ ಮನಿ ಲಾಂಡರಿಂಗ್ ಪ್ರಕರಣದಲ್ಲಿ ಸೆಪ್ಟೆಂಬರ್‌ನಲ್ಲಿ ಜಾಮೀನಿನ ಮೇಲೆ ಬಿಡುಗಡೆಯಾಗಿದ್ದರು.ಅಬಕಾರಿ ನೀತಿ ಪ್ರಕರಣದಲ್ಲಿ ಎಎಪಿ ಮುಖ್ಯಸ್ಥ ಮತ್ತು ದೆಹಲಿ ಮಾಜಿ ಸಿಎಂ ವಿರುದ್ಧ ಕಾನೂನು ಕ್ರಮ ಜರುಗಿಸಲು ಜಾರಿ ನಿರ್ದೇಶನಾಲಯಕ್ಕೆ ಅನುಮತಿ ನೀಡಿದ್ದಾರೆ ಎಂದು ಎಲ್‌ಜಿ ಕಚೇರಿ ಮಾಹಿತಿ ನೀಡಿದೆ. ಕ್ರಿಮಿನಲ್ ಪ್ರಕರಣದಲ್ಲಿ ಸದ್ಯಕ್ಕೆ ವಿಚಾರಣಾ ನ್ಯಾಯಾಲಯದ ವಿಚಾರಣೆಗೆ ತಡೆ ನೀಡಲು ಹೈಕೋರ್ಟ್ ನಿರಾಕರಿಸಿದೆ.

ಅಕ್ರಮ ಹಣ ವರ್ಗಾವಣೆ ಪ್ರಕರಣದಲ್ಲಿ ಅರವಿಂದಗ ಕೇಜ್ರಿವಾಲ್‌ಗೆ ಜುಲೈ 12 ರಂದು ಸುಪ್ರೀಂ ಕೋರ್ಟ್ ಮಧ್ಯಂತರ ಜಾಮೀನು ನೀಡಿದರೆ, ಸುಪ್ರೀಂ ಕೋರ್ಟ್ ಅವರನ್ನು ಸೆಪ್ಟೆಂಬರ್ 13 ರಂದು ಸಿಬಿಐ ಪ್ರಕರಣದಲ್ಲಿ ಜಾಮೀನಿನ ಮೇಲೆ ಬಿಡುಗಡೆ ಮಾಡಿತ್ತು. ಸಿಬಿಐ ಮತ್ತು ಜಾರಿ ನಿರ್ದೇಶನಾಲಯದ ಪ್ರಕಾರ, ಅಕ್ರಮಗಳು ನಡೆದಿವೆ. ಪರವಾನಗಿ ಹೊಂದಿರುವವರಿಗೆ ನೀತಿ ಮತ್ತು ಅನಪೇಕ್ಷಿತ ಅನುಕೂಲಗಳನ್ನು ವಿಸ್ತರಿಸಲಾಗಿತ್ತು.

2021–22ರ ಅಬಕಾರಿ ನೀತಿ ಸಂಬಂಧಿತ ಮನಿ ಲಾಂಡರಿಂಗ್ ಪ್ರಕರಣದಲ್ಲಿ ಮಾಜಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್‌ಗೆ ಜಾಮೀನು ಮಂಜೂರು ಮಾಡುವುದರ ವಿರುದ್ಧ ಜಾರಿ ನಿರ್ದೇಶನಾಲಯುದ ಮನವಿಯನ್ನು ದೆಹಲಿ ಹೈಕೋರ್ಟ್ ಈಗ ಜನವರಿ 17,ರಂದು ವಿಚಾರಣೆ ನಡೆಸಲಿದೆ.

# ಸೂಕ್ಷ್ಮ ಪೋಷಕಾಂಶಗಳು ಕೊರತೆಯಾಗಿವೆ




ಶಿಡ್ಲಘಟ್ಟ : ತಿನ್ನಲು ಯೋಗ್ಯವಾದ 7 ಸಾವಿರ ಬೆಳೆಗಳಿದ್ದರೂ ನಮ್ಮ ದೇಶದಲ್ಲಿ ಬೆರಳೆಣಿಕೆಯಷ್ಟು ಬೆಳೆಗಳನ್ನು ಮಾತ್ರ ನಾವು ಆಹಾರ ಭದ್ರತೆಗೆ ಅಂಟಿಕೊಂಡಿದ್ದೇವೆ ಬೆಳೆಗಳ ವೈವಿಧ್ಯತೆ ಕಡಿಮೆಯಾಗಿರುವುದರಿಂದ,ಪ್ರೋಟೀನ್ ಹಾಗೂ ಸೂಕ್ಷ್ಮ ಪೋಷಕಾಂಶಗಳು ಕೊರತೆಯಾಗಿವೆ ಆಹಾರದ ಮೂಲಕ ಇವನ್ನು ಹೊಂದಲು ಕೆಲವಾರು ತಳಿಗಳನ್ನು ಪರಿಚಯಿಸಲಾಗುತ್ತಿದೆ ಎಂದು ಅಖಿಲ ಭಾರತ ಸುಸಂಘಟಿತ ಸಂಶೋಧನಾ ಯೋಜನೆ ಹಾಗು ಸಮರ್ಥ ಬೆಳೆಗಳ ವಿಭಾಗದ ವಿಜ್ಞಾನಿ ಎಸ್.ಆರ್. ಡಾ.ಆನಂದ ತಿಳಿಸಿದರು.

ತಾಲ್ಲೂಕಿನ ಬೋದಗೂರು ಗ್ರಾಮದಲ್ಲಿ ಕೃಷಿ ವಿಶ್ವವಿದ್ಯಾನಿಲಯ, ಸಂಶೋಧನಾ ನಿರ್ದೇಶನಾಲಯ, ಅಖಿಲ ಭಾರತ ಸುಸಂಘಟಿತ ಸಂಶೋಧನಾ ಯೋಜನೆ (ಕೃಷಿ ನಿರತ ಮಹಿಳೆಯರು) ಸಹಯೋಗದಲ್ಲಿ ಆಯೋಜಿಸಿದ್ದ ಸಾವಯವ ಕೃಷಿಕ ರೈತರಾದ ವೆಂಕಟಸ್ವಾಮಿರೆಡ್ಡಿ ಅವರು ಬೆಳೆದಿರುವ ಬೀಜದ ದಂಟಿನ ಬೆಳೆ ಕ್ಷೇತ್ರೋತ್ಸವದಲ್ಲಿ ಬಾಗವಹಿಸಿ ಅವರು ಮಾತನಾಡಿದರು.

ಆಹಾರ ಭದ್ರತೆಯನ್ನು ಯಶಸ್ವಿಯಾಗಿ ಸಾಧಿಸಿರುವ ನಾವು ಪೌಷ್ಠಿಕ ಭದ್ರತೆಯನ್ನು ಹೊಂದಿಲ್ಲ ಎಂದ ಅವರು

ಭವಿಷ್ಯದ ಬೆಳೆಗಳು ಎಂದು ಕೆಲವು ಸಮರ್ಥ ಬೆಳೆಗಳನ್ನು ಗುರುತಿಸಿ, ಜಿಕೆವಿಕೆ ಮೂಲಕ ಪ್ರಗತಿಪರ ರೈತರ ಮೂಲಕ ಇತರರಿಗೆ ಪರಿಚಯಿಸುತ್ತಿದೆ ಅದರ ಮೂಲಕ ವೆಂಕಟಸ್ವಾಮಿರೆಡ್ಡಿ ಅವರ ಒಂದೂವರೆ ಎಕರೆ ಹೊಲದಲ್ಲಿ ಬೀಜದ ದಂಟು ಎನ್ನುವ ಈ ಆಹಾರ ಧಾನ್ಯವನ್ನು ಬೆಳೆಯಲಾಗಿದೆ,ಹಿಂದಿಯಲ್ಲಿ ರಾಜಗೀರ, ರಾಮ್ ದಾನ್, ಇಂಗ್ಲಿಷಿನಲ್ಲಿ ಗ್ರೇನ್ ಅಮರಾಂಥ್ ಎಂದು ಕರೆಯುವರು ಎಂದರು.

ಸಾಮಾನ್ಯವಾಗಿ ದಂಟಿನ ಸೊಪ್ಪನ್ನು ತರಕಾರಿಯಾಗಿ ಬಳಕೆ ಮಾಡಲಾಗುತ್ತಿದೆ ಆದರೆ, ಜಿಕೆವಿಕೆ ಬಿಡುಗಡೆಗೊಳಿಸಿರುವ ನೂತನ ದಂಟಿನ ತಳಿಯ ಬೀಜಗಳು ಆಹಾರ ಧಾನ್ಯವಾಗಿ ಬಳಕೆಯಾಗುತ್ತಿದೆ , ಹೇರಳ ಪೌಷ್ಠಿಕಾಂಶವನ್ನ ಒಳಗೊಂಡಿರುವ ದಂಟಿನ ಸೊಪ್ಪಿನ ತಳಿ ರಾಗಿ, ಗೋಧಿ, ಸಿರಿಧಾನ್ಯಗಳಿಗಿಂತ ಶೇ 15 ರಷ್ಟು ಹೆಚ್ಚು ಪೌಷ್ಠಿಕಾಂಶವನ್ನ ಒಳಗೊಂಡಿದೆ. 90 ರಿಂದ 95 ದಿನಗಳಿಗೆ ಕೊಯ್ಲಿಗೆ ಬರುವ ಈ ದಂಟಿನ ಬೀಜದ ತಳಿಯು ಎಕರೆಗೆ 6 ರಿಂದ 7 ಕ್ವಿಂಟಲ್ ಇಳುವರಿಯನ್ನ ಕೊಡುತ್ತೆ ಮಿಶ್ರ ಹಾಗೂ ಅಂತರ ಬೆಳೆಯಾಗಿ ಬೆಳೆಯಬಹುದು ಎಂದು ವಿವರಿಸಿದರು.

ಹೂ ಗೊಂಚಲು ಗೋಳಾಕಾರದ ಕುಂಕುಮ ಮಿಶ್ರಿತ ಹಸಿರು ಬಣ್ಣವನ್ನು ಹೊಂದಿದ್ದು, ರೋಗಗಳು ಮತ್ತು ಕೀಟಗಳಿಗೆ ನಿರೋಧಕ ಶಕ್ತಿಯನ್ನು ಹೊಂದಿರುವುದು ಈ ತಳಿಯ ವಿಶೇಷತೆ ಪ್ರಮುಖ ಆಹಾರ ಧಾನ್ಯವಾಗಿ ಈ ದಂಟಿನ ಬೀಜದ ತಳಿಯನ್ನ ಬಳಸಬಹುದು ಎಂದರು. ಕ್ಯಾಲ್ಸಿಯಂ, ಸತು, ಪೋಟ್ಯಾಶಿಯಂ ಮತ್ತು ರಂಜಕದ ಪ್ರಮಾಣ ಇದರಲ್ಲಿ ಹೇರಳವಾಗಿದೆ ಯಾವುದೇ ಏಕದಳ ಧಾನ್ಯಗಳಲ್ಲಿ ಇರದ ಲೈಸಿನ್ ಎಂಬ ಅಮೈನೋ ಆಮ್ಲ ಈ ಬೀಜದ ದಂಟಿನಲ್ಲಿರುವುದು ವಿಶೇಷವಾಗಿದೆ ಎಂದು ಹೇಳಿದರು.

ಅಖಿಲ ಭಾರತ ಸುಸಂಘಟಿತ ಸಂಶೋಧನಾ ಯೋಜನೆ (ಕೃಷಿ ನಿರತ ಮಹಿಳೆಯರು) ವಿಭಾಗದ ವಿಜ್ಞಾನಿ ಡಾ.ಗೀತಾ ಎಂ.ಯಂಕಂಚಿ ಮಾತನಾಡಿ, ಪೌಷ್ಠಿಕಯುಕ್ತ ಬೆಳೆಗಳನ್ನು ರೈತರು ಬೆಳೆದು ತಾವು ಉಪಯೋಗಿಸಿ, ಹೆಚ್ಚಿನವುಗಳನ್ನು ಮಾರಾಟ ಮಾಡುವ ಮೂಲಕ ಆರ್ಥಿಕ, ಆರೋಗ್ಯ ಮತ್ತು ಸಾಮಾಜಿಕ ಸುಧಾರಣೆ ಮಾಡಿಕೊಳ್ಳಬಹುದಾಗಿದೆ ಎಂದರು.

ಅಖಿಲ ಭಾರತ ಸುಸಂಘಟಿತ ಸಂಶೋಧನಾ ಯೋಜನೆ (ಕೃಷಿ ನಿರತ ಮಹಿಳೆಯರು) ಯೋಜನಾ ಮುಖ್ಯಸ್ಥೆ ಡಾ.ಕಲ್ಪನಾ ಮಾತನಾಡಿ, ಬೀಜದ ದಂಟಿನ ಕೃಷಿ, ಸಂಸ್ಕರಣೆ ಮತ್ತು ಮೌಲ್ಯವರ್ಧನೆಯ ಮೂಲಕ ಕೃಷಿಕ ಮಹಿಳೆಯರು ಪ್ರಗತಿ ಸಾಧಿಸಲು ಸಾಕಷ್ಟು ಅವಕಾಶವಿದೆ ಎಂದು ನುಡಿದರು.

ಗ್ರಾಮದ ಮಹಿಳೆಯರು ಬೀಜದ ದಂಟಿನಿಂದ ತಾಯಾರಿಸಿರುವ ಮಿಕ್ಸ್ ಚರ್, ಲಡ್ಡು, ಚಿಕ್ಕಿ, ಪಕೋಡ, ಚಕ್ಕುಲಿ, ಕಜ್ಜಾಯ, ಶಾವಿಗೆ, ಪಾಯಸ, ಮಾಲ್ಟ್, ಚಟ್ನಿಪುಡಿ, ಚಪಾತಿ ಮಿಕ್ಸ್, ಅಕ್ಕಿ ದೋಸೆ ಮಿಕ್ಸ್, ಬರ್ಫಿ, ಪಡ್ಡು, ಶಾವಿಗೆ, ಮುದ್ದೆ, ದೋಸೆ, ಕಡುಬು ಮೊದಲಾದ ಆಹಾರ ಪದಾರ್ಥಗಳನ್ನು ತಾಯಾರಿಸಿ ಪ್ರದರ್ಶಿಸಿದ್ದರು.

ಈ ಸಂದರ್ಭದಲ್ಲಿ ಸಾವಯವ ಕೃಷಿಕ ರೈತರಾದ ವೆಂಕಟಸ್ವಾಮಿರೆಡ್ಡಿ, ರೈತರಾದ ಕುಚ್ಚಣ್ಣ,ನಾಗೇಶ್, ಅನಂತಪದ್ಮನಾಭ್,ಮುನಿರಾಜು, ರಾಮಮೂರ್ತಿ, ಬಾಲರಾಜು,ವಿಜಯಕುಮಾರ್, ಅರಿಕೆರೆ ನಾರಾಯಣಸ್ವಾಮಿ, ವೆಂಕಟಾದ್ರಿ ಮತ್ತಿತರರು ಹಾಜರಿದ್ದರು.

## ಮೊದಲ ಪುಟದಿಂದ

### ಬಂಧನ ಮಾಡಲಾಗಿದೆ

ವಿಚಾರವಾಗಿ ಪ್ರತಿಕ್ರಿಯಿಸುತ್ತ, 'ಆಗಬಹುದು' ಎಂದು ವ್ಯಂಗ್ಯವಾಡಿದರು.ಎಫ್‌ಐಆರ್ ಆಗದ್ದನ್ನು ವಿಚಾರ ಮಾಡೋಣ: ಲಕ್ಷ್ಮೀ ಹೆಬ್ಬಾಳ್ಕರ್, ಡಿ.ಕೆ.ಶಿವಕುಮಾರ್ ಪ್ರೇರಣೆಯಿಂದಲೇ ನನ್ನ ಕೊಲೆಗೆ ಯತ್ನ ನಡೆದಿದೆ ಎಂದು ಸಿ.ಟಿ.ರವಿ ಆರೋಪಿಸಿದ್ದು, ಆದರೆ ಎಫ್‌ಐಆರ್ ದಾಖಲಾಗಿಲ್ಲ ಎಂಬ ಪ್ರಶ್ನೆಗೆ, ದೂರು ಕೊಟ್ಟಿದ್ದಾರೆ. ನಾನೂ ಅವರ ಹೇಳಿಕೆ ಗಮನಿಸಿದ್ದೇನೆ. ಮಾಧ್ಯಮದಲ್ಲೂ ಕೊಲೆ ಬೆದರಿಕೆ ಬಗ್ಗೆ ಹೇಳಿದ್ದಾರೆ. ಎಫ್‌ಐಆರ್ ಆಗದಿರುವ ಬಗ್ಗೆ ವಿಚಾರ ಮಾಡೋಣ" ಎಂದು ಪ್ರತಿಕ್ರಿಯಿಸಿದರು. ಸೂಪರ್ ಸೀಡ್ ಮಾಡಿ ಆಪರೇಟ್ ಮಾಡುತ್ತಿದ್ದಾರಾ ಎಂಬ ಪ್ರಶ್ನೆಗೆ, 'ಆ ರೀತಿ ಮಾಡಲು ಸಾಧ್ಯವಿಲ್ಲ. ಮಾಡಲು ಸಾಧ್ಯವಾ?. ಮುಖ್ಯಮಂತ್ರಿಗಳು ಗೃಹ ಸಚಿವರ ಮೇಲಿದ್ದಾರೆ. ನಮ್ಮ ವ್ಯವಸ್ಥೆಯಲ್ಲಿ ಗೃಹ ಸಚಿವ ಅಥವಾ ಎಲ್ಲದರ ಮೇಲೆ ಅವರಿದ್ದಾರೆ' ಎಂದರು.

### ರಾಜಕೀಯ ವೇದಿಕೆ

ತಾಯ್ನಾಡಿಗೆ ಘೋರ ಅಪಮಾನ ಎಸಗಿದ್ದಾರೆ ಎಂದು ಕಿಡಿಕಾರಿದ್ದಾರೆ.ಮುಖ್ಯಮಂತ್ರಿಗಳು ಭಾಷಣದುದ್ದಕ್ಕೂ ರಾಜಕೀಯ ಕೆಸರೆರಚಾಟ ನಡೆಸಿದ್ದಾರೆ. ಜತೆಗೆ ಪುಸ್ತಕ ಮಳಿಗೆಗಳಲ್ಲಿ ರಾಜಕೀಯ ಪ್ರೇರಿತ ಪುಸ್ತಕಗಳ ಪ್ರದರ್ಶನ, ಮಾರಾಟ ನಡೆದಿದೆ. ಇದೆನಾ ಸಾಹಿತ್ಯ ಸಮ್ಮೇಳನದ ಉದ್ದೇಶ ಎಂದು ಅವರು ಪ್ರಶ್ನಿಸಿದ್ದಾರೆ. ಸಾಹಿತ್ಯ ಮಳಿಗೆಗಳಲ್ಲಿ ಇಟ್ಟಿರುವ ಎಲ್ಲ ರಾಜಕೀಯ ಪ್ರೇರಿತ ಪುಸ್ತಕಗಳನ್ನು ತೆರವು ಮಾಡಬೇಕು. ರಾಜಕೀಯ ಭಾಷಣಗಳಿಗೆ ಕಡಿವಾಣ ಹಾಕಬೇಕು ಎಂದು ಅವರು ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರನ್ನು ಒತ್ತಾಯಿಸಿದ್ದಾರೆ.

### ಆಕ್ರೋಶ

ತೆರಳಲು ಬಿಡದೆ ತೊಂದರೆ ಕೊಟ್ಟರು . ನಾನು ಯಾವುದೇ ಪ್ರಶ್ನೆ ಕೇಳಿದರೂ ಪೊಲೀಸರು ಉತ್ತರ ನೀಡಲಿಲ್ಲ ಎಂದು ಕಿಡಿಕಾರಿದರು. ಯಾರೋ ಫೋನ್ ನಲ್ಲಿ ಡೈರೆಕ್ಷನ್ ಕೊಡುತ್ತಿದ್ದರು. ಸವದತ್ತಿ ರಾಮದುರ್ಗ ಹೀಗೆ ಎಲ್ಲಾ ಕಡೆ ಸುತ್ತಾಡಿಸಿದರು . ಮೂತ್ರ ವಿಸರ್ಜನೆಗೂ ಅವಕಾಶ ನೀಡದೆ ಹಿಂಸೆ ಕೊಟ್ಟರು. ಪೊಲೀಸರು ಕರೆದೊಯ್ಯುವಾಗ ತಲೆಗೆ ಪಟ್ಟಾಯಿತು. ಬಲವಂತವಾಗಿ ಫೋನ್ ಕಿತ್ತುಕೊಂಡರು. ಯಾರೋ ಫೋನ್ ಮಾಡಿ ಪೊಲೀಸರಿಗೆ ಯಾಕೆ ಫೋನ್ ಕಿತ್ತುಕೊಂಡಿಲ್ಲ ಎಂದು ತರಾಟೆ ತೆಗೆದುಕೊಳ್ಳುತ್ತಿದ್ದರು ಎಂದು ಸಿ.ಟಿ ರವಿ ತಮಗಾದ ತೊಂದರೆ ಬಗ್ಗೆ ವಿವರಿಸಿದರು.

### ಪಬ್‌ಗೆನೋಟಿಸ್

ವಿರಾಟ್ ಕೊಹ್ಲಿ ಮಾಲೀಕತ್ವದ ಬಾರ್ ಂಡ್ ರೆಸ್ಟೋರೆಂಟ್ ಉತ್ತರಿಸದೇ ನಿರ್ಲಕ್ಷ್ಯ ವಹಿಸಿತ್ತು. ಇದೀಗ ಏಳು ದಿನದೊಳಗೆ ಸಮಜಾಯಿಸಿ ನೀಡದಿದ್ದರೆ ಕಾನೂನು ಕ್ರಮ ಕೈಗೊಳ್ಳುವುದಾಗಿ ಎಚ್ಚರಿಕೆ ನೀಡಿದೆ.

### ನಮ್ಮ ಸಂಸ್ಕೃತಿ

ಎಂದು ತಿಳಿಸಿದರು. ನಿಂದನಾತ್ಮಕ ಮಾತು ಆಡಿಯಾಗಿದೆ ಈಗ ಸರ್ಕಾರ ಹೇಗೆ ನ್ಯಾಯ ಕೊಡಿಸಲಿದೆ ಎಂದು ಕೇಳಿದಾಗ, "ಆತ್ಮಸಾಕ್ಷಿಯೇ ನ್ಯಾಯ ನೀಡುತ್ತದೆ" ಎಂದು ತಿಳಿಸಿದರು. ಇದಕ್ಕೆಲ್ಲ ಕೊನೆಯಾಡುತ್ತೇವೆ ಎಂಬ ಸಿ.ಟಿ ರವಿ ಹೇಳಿಕೆ ಬಗ್ಗೆ ಕೇಳಿದಾಗ, "ಇಂತಹ ಲೆಕ್ಕ ಚುಕ್ತಾಗಳನ್ನು ಬಹಳ ನೋಡಿದ್ದೇವೆ. ಬಹಳ ಸಂತೋಷ. ಅವರೊಬ್ಬರೇ ಲೆಕ್ಕ ಚುಕ್ತಾ ಮಾಡುತ್ತಾರ? ಎಲ್ಲರೂ ಅವರವರ ಸಾಮರ್ಥ್ಯಕ್ಕೆ ತಕ್ಕಂತೆ ಲೆಕ್ಕ ಚುಕ್ತಾ ಮಾಡುತ್ತಾರೆ" ಎಂದು ತಿರುಗೇಟು ನೀಡಿದರು. ಮಾನಹಾನಿಕರ ಪದ ಬಳಕೆ ವಿಚಾರ ಚರ್ಚೆಗೆ ಬದಲು ಬೇರೆ ತಿರುವು ಪಡೆಯಿತಾ ಎಂದು ಕೇಳಿದಾಗ, "ಬಿಜೆಪಿಯವರು ತಮ್ಮ ಹೇಳಿಕೆ ಮುಚ್ಚಿಕೊಳ್ಳಲು ಪೊಲೀಸರ ಮೇಲೆ ಆರೋಪ ಮಾಡುತ್ತಿದ್ದಾರೆ. ಇವರ ಆಡಳಿತದಲ್ಲಿ ಪೊಲೀಸರನ್ನು ಹೇಗೆ ಬಳಸಿಕೊಂಡಿದ್ದರು?" ಎಂದು ಮಾರ್ಮಿಕವಾಗಿ ಹೇಳಿದರು.

### ವಾರಂಟ್ ಜಾರಿ

ಹಾಕದೇ 23 ಲಕ್ಷ ರೂಪಾಯಿ ವಂಚಿಸಿದ್ದಾರೆ ಎಂದು ಆರೋಪಿಸಲಾಗಿದೆ. ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿರುವ ಪಿಎ□□□ ರಿಜಿನಲ್ ಕಮಿಷನರ್ ಷಡಾಕ್ಷರಿ ಗೋಪಾಲ ರೆಡ್ಡಿ ಅವರು, ರಾಬಿನ್ ಉತ್ತಪ್ಪ ಅವರನ್ನು ಬಂಧಿಸುವಂತೆ ಇದೇ ತಿಂಗಳು ನಾಲ್ಕರಂದು ಪುಲಕೇಶಿ ನಗರ ಪೊಲೀಸರಿಗೆ ಪತ್ರ ಬರೆದಿದ್ದಾರೆ.ಈ ಹಿನ್ನೆಲೆಯಲ್ಲಿ ರಾಬಿನ್ ಉತ್ತಪ್ಪ ಅವರಿಗೆ ನೊಟೀಸ್ ನೀಡಲು ಪೊಲೀಸರು ಅವರ ಮನೆಗೆ ತೆರಳಿದ್ದರು. ಆದರೆ ಆ ವಿಳಾಸದಲ್ಲಿ ಅವರು ವಾಸವಿಲ್ಲ. ಹೀಗಾಗಿ ಅರೆಸ್ಟ್ ವಾರೆಂಟ್ ಜಾರಿಗೊಳಿಸಲಾಗಿದೆ. ಸದ್ಯ ದುಬೈಯಲ್ಲಿ ನೆಲೆಸಿರುವ ರಾಬಿನ್ ಉತ್ತಪ್ಪ ವಿರುದ್ಧ ಪ್ರಕರಣ ದಾಖಲಾಗಿರುವ ಕಾರಣ ಬೆಂಗಳೂರಿಗೆ ಬರುವ ಸಾಧ್ಯತೆಯಿದೆ.

# 9 ತಿಂಗಳ ಗರ್ಭಿಣಿ ಬರ್ಬರವಾಗಿ ಹತ್ಯೆ

**ಬೆಳಗಾವಿ:** ಬೆಳಗಾವಿ ಜಿಲ್ಲೆಯ ಅಥಣಿ ತಾಲೂಕಿನ ಚಿಕ್ಕೂಡ ಗ್ರಾಮದಲ್ಲಿ ಮನಕಲಕುವ ಘಟನೆ ನಡೆದಿದೆ. ಯಾರೂ ಇಲ್ಲದ ವೇಳೆ ಮನೆಯೊಳಗೆ ನುಗ್ಗಿ 9 ತಿಂಗಳ ಗರ್ಭಿಣಿಯನ್ನು ಬರ್ಬರವಾಗಿ ಹತ್ಯೆ ಮಾಡಲಾಗಿದೆ. ಸುವರ್ಣಾ ಮಠಪತಿ (33) ಗರ್ಭಿಣಿ. ಮೃತ ಸುವರ್ಣಾ ಮಠಪತಿಗೆ ನಾಲ್ವರು ಹೆಣ್ಣು ಮಕ್ಕಳಿದ್ದಾರೆ. ಗರ್ಭಿಣಿ ಸುವರ್ಣಾ ಐದನೇ ಮಗುವಿನ ನಿರೀಕ್ಷೆಯಲ್ಲಿದ್ದರು. ವೈದ್ಯರು ಮುಂದಿನ ವಾರದಲ್ಲಿ ಹೆರಿಗೆಗೆ ದಿನಾಂಕ ನಿಗದಿಪಡಿಸಿದ್ದರು.

ಆದರೆ, ಒಂದು ವಾರದ ಹಿಂದೆ ಮನೆಯೊಳಗೆ ಯಾರೂ ಇಲ್ಲದ ಸಮಯದಲ್ಲಿ ಏಕಾಏಕಿ ನುಗ್ಗಿದ ದುಷ್ಕರ್ಮಿಗಳು ಗರ್ಭಿಣಿ ಸುವರ್ಣ ಅವರ ಮೇಲೆ ಮಾರಕಾಸ್ತ್ರಗಳಿಂದ ಹಲ್ಲೆ ಮಾಡಿದ್ದರು. ಗಂಭೀರವಾಗಿ ಗಾಯಗೊಂಡ ಸುವರ್ಣ ಅವರನ್ನು ಬಿಮ್ಸ್ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಆದರೆ, ಶುಕ್ರವಾರ ಸಂಜೆ ಚಿಕಿತ್ಸೆ ಫಲಕಾರಿಯಾಗದೆ ಮೃತಪಟ್ಟಿದ್ದಾರೆ. ಅಥಣಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

**ಘಟನೆ ವಿವರ:** ಕೊಲೆಯಾದ ಮಹಿಳೆಯದ್ದು ಬಡ ಕುಟುಂಬ. ಪತಿಯು ಗ್ರಾಮ ದೇವತೆಯ ಅರ್ಚಕರಾಗಿ ಕೆಲಸ ಮಾಡಿಕೊಂಡು ಜೀವನ ಸಲಹುತ್ತಿದ್ದರು. ಮಹಿಳೆಯ ಪತಿ ಮಧ್ಯಾಹ್ನ ಹಸುಗಳಿಗೆ ಮೇವು ತರಲು ತೋಟಕ್ಕೆ ಹೋಗಿದ್ದರು. ಮಕ್ಕಳು ಕೂಡ ಶಾಲೆಗೆ ಹೋಗಿದ್ದರಿಂದ ಮನೆಯಲ್ಲಿ ಯಾರೂ ಇರಲಿಲ್ಲ. ಈ ಸಮಯದಲ್ಲಿ ದುಷ್ಕರ್ಮಿಗಳು ಮಾರಕಾಸ್ತ್ರದಿಂದ ಮನಬಂದಂತೆ ಹಲ್ಲೆ ನಡೆಸಿ ಪರಾರಿಯಾಗಿದ್ದಾರೆ. ತೋಟದಿಂದ ಮೇವು ತಂದ ಪತಿಯು ತನ್ನ ಪತ್ನಿಯನ್ನು ಕರೆದರೂ ಮನೆಯಿಂದ ಹೊರಗೆ ಬಂದಿಲ್ಲ. ಆಗ ಸಮೀಪ ಬಂದು ನೋಡಿದಾಗ ಗರ್ಭಿಣಿಯು ರಕ್ತದ ಮಡಿಲಿನಲ್ಲಿ ಬಿದ್ದು ನರಳಾಡುತ್ತಿರುವುದು ಕಂಡುಬಂದಿದೆ.

ತಕ್ಷಣವೇ, ಪಕ್ಕದ ಹಾರೂಗೇರಿ ಖಾಸಗಿ ಆಸ್ಪತ್ರೆಗೆ ರವಾನಿಸಿದ್ದಾರೆ. ಆದರೆ ಗಂಭೀರವಾಗಿ ಗಾಯಗೊಂಡ ಮಹಿಳೆ ದಾರಿ ಮಧ್ಯದಲ್ಲೇ ಮೃತಪಟ್ಟಿದ್ದಾರೆ ಎಂದು ವೈದ್ಯರು ತಿಳಿಸಿದ್ದಾರೆ. ಕೊಲೆ ಆರೋಪಿಗಳು ಯಾರು, ನಿಖರ ಕಾರಣವೇನು ಎಂಬುದು ಇನ್ನೂ ತಿಳಿದು ಬಂದಿಲ್ಲ. ಈ ಸಂಬಂಧ ಅಥಣಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ಮುಂದುವರೆದಿದೆ.

# ಪರಸ್ಪರ ಗೆಳತಿಯರ ಬದಲಾವಣೆ ಸಹಕರಿಸದಿದ್ದಾಗ ಅತ್ಯಾಚಾರ: ಇಬ್ಬರ ಸೆರೆ

**ಬೆಂಗಳೂರು:** ಗೆಳತಿಯನ್ನು ಪಾರ್ಟಿಗೆ ಎಂದು ಕರೆದು ಸ್ನೇಹಿತನೊಂದಿಗೆ ಸೇರಿ ಅತ್ಯಾಚಾರವೆಸಗಿದ ಆರೋಪದಡಿ ಇಬ್ಬರು ಆರೋಪಿಗಳನ್ನು ನಗರದ ಸಿಸಿಬಿ ಪೊಲೀಸರು ಬಂಧಿಸಿದ್ದಾರೆ.

ಹರೀಶ್ ಹಾಗೂ ಹೇಮಂತ್ ಬಂಧಿತ ಆರೋಪಿಗಳು. ಇವರಿಬ್ಬರೂ ಪರಸ್ಪರ ಗರ್ಲ್ ಫ್ರೆಂಡ್ಸ್ ಅದಲು ಬದಲು ಮಾಡಿಕೊಂಡು ಸಹಕರಿಸುವಂತೆ ಒತ್ತಾಯಿಸಿದ್ದು, ಸಹಕರಿಸದಿದ್ದಾಗ ಅತ್ಯಾಚಾರ ಎಸಗಿದ್ದಾರೆ ಎಂದು ಯುವತಿಯೊಬ್ಬಳು ನೀಡಿದ್ದ ದೂರಿನ ಅನ್ವಯ ಸಿಸಿಬಿ ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದರು.

ಯುವತಿಯನ್ನು ಪರಿಚಯ ಮಾಡಿಕೊಂಡಿದ್ದ ಹರೀಶ್, ಆಕೆಯನ್ನು ಪ್ರೀತಿಸುವುದಾಗಿ ನಂಬಿಸಿ ಲೈಂಗಿಕವಾಗಿ ಬಳಸಿಕೊಂಡಿದ್ದ. ಬೆಂಗಳೂರು ಹೊರವಲಯದಲ್ಲಿ ಪಾರ್ಟಿಗೆಂದು ಕರೆದೊಯ್ದು ಸ್ನೇಹಿತನೊಂದಿಗೆ ಸಹಕರಿಸುವಂತೆ ಒತ್ತಾಯಿಸಿದ್ದ. ಆಕೆ ಒಪ್ಪದಿದ್ದಾಗ ಆರೋಪಿಗಳು ಅತ್ಯಾಚಾರವೆಸಗಿದ್ದಾರೆಂದು ದೂರು ನೀಡಲಾಗಿದೆ ಎಂದು ಪೊಲೀಸರು ಹೇಳಿದ್ದಾರೆ.

ಯುವತಿಯರ ಫೋಟೋಗಳು ಪತ್ತೆ: 'ಸ್ವಿಂಗರ್ಸ್' ಎನ್ನುವ ಹೆಸರಿನ ವಾಟ್ಸ್‌ಆ್ಯಪ್ ಗ್ರೂಪ್ ಮಾಡಿಕೊಂಡಿದ್ದ ಆರೋಪಿಗಳು, 'ಪಾರ್ಟಿ ಆಯೋಜಿಸಿ ಗೆಳತಿಯರೊಂದಿಗೆ ತೆರಳುತ್ತಿದ್ದರು. ಬಳಿಕ ಪಾರ್ಟಿಯಲ್ಲಿ ಪರಸ್ಪರ ಗೆಳತಿಯರನ್ನು ಬದಲಿಸಿಕೊಂಡು, ಲೈಂಗಿಕವಾಗಿ ಸಹಕರಿಸುವಂತೆ ಒತ್ತಾಯಿಸುತ್ತಿದ್ದರು. ಆರೋಪಿಗಳ ಹತ್ತಾರು ಯುವತಿಯರ ಬೆತ್ತಲೆ ಫೋಟೋಗಳು, ಏಕಾಂತದ ವಿಡಿಯೋಗಳು ಪತ್ತೆಯಾಗಿವೆ. ಅದೇ ವಿಡಿಯೋ, ಫೋಟೋಗಳನ್ನ ತೋರಿಸಿ ಆರೋಪಿಗಳು ಯುವತಿಯರಿಗೆ ಬೆದರಿಸುತ್ತಿದ್ದರು ಎಂಬುದು ತನಿಖೆ ವೇಳೆ ತಿಳಿದು ಬಂದಿದೆ.

ಘಟನೆಯಿಂದ ಬೇಸತ್ತ ಯುವತಿ ನೀಡಿದ ದೂರಿನ ಮೇರೆಗೆ ಪ್ರಕರಣ ದಾಖಲಿಸಿಕೊಂಡ ಸಿಸಿಬಿ ಪೊಲೀಸರು, ಸದ್ಯ ಇಬ್ಬರು ಆರೋಪಿಗಳನ್ನು ಬಂಧಿಸಿದ್ದಾರೆ. ವಿಚಾರಣೆ ನಡೆಸಲಾಗುತ್ತಿದೆ ಎಂದು ಬೆಂಗಳೂರು ನಗರ ಪೊಲೀಸ್ ಆಯುಕ್ತ ಬಿ.ದಯಾನಂದ್ ಮಾಹಿತಿ

# ಹೆರಿಗೆ ಮಾಡಿಸಲು ಲಂಚ: ಬಂಧನ

**ಬೆಂಗಳೂರು:** ಟಿ.ದಾಸರಹಳ್ಳಿಯ ಮಲ್ಲಸಂದ್ರ ಹೆರಿಗೆ ಆಸ್ಪತ್ರೆ ನರ್ಸ್ ಲೋಕಾಯುಕ್ತ ಬಲೆಗೆ ಬಿದ್ದಿದ್ದಾರೆ. ಲೋಕಾಯುಕ್ತ ಎಸ್‌ಪಿ ಶ್ರೀನಾಥ್ ಜೋಶಿ ನೇತೃತ್ವದಲ್ಲಿ ನಡೆದ ಕಾರ್ಯಾಚರಣೆಯಲ್ಲಿ ಹೆರಿಗೆ ಮಾಡಿಸಲು ಲಂಚ ಪಡೆಯುತ್ತಿದ್ದ ಮಲ್ಲಸಂದ್ರ ಹೆರಿಗೆ ಆಸ್ಪತ್ರೆಯ ನರ್ಸ್ ಗಂಗಲಕ್ಷ್ಮೀ ಸಿಕ್ಕಿದ್ದಿದ್ದಾರೆ. ಬೆಂಗಳೂರಿನ ಟಿ.ದಾಸರಹಳ್ಳಿಯ ಮಲ್ಲಸಂದ್ರ ಆಸ್ಪತ್ರೆಗೆ ಬಂದಿದ್ದ ಬಾಗಲಗುಂಟೆಯ ಕಮಲಮ್ಮ ಬಳಿ 6,500 ರೂಪಾಯಿ ಬೇಡಿಕೆ ಇಟ್ಟಿದ್ದಾರೆ. ಈ ಪೈಕಿ 5000 ಫೋನ್‌ಪೇ ಮೂಲಕ ಪಡೆದುಕೊಂಡಿದ್ದಾರೆ.


ಹೆರಿಗೆ ಮಾಡಿಸಲು ಬಾಗಲಗುಂಟೆಯ ಕಮಲಮ್ಮ ಎಂಬುವರಿಂದ ಲಂಚ ಪಡೆಯುತ್ತಿರುವಾಗಲೇ ನರ್ಸ್ ಗಂಗಲಕ್ಷ್ಮೀ ರೆಡ್‌ಹ್ಯಾಂಡ್ ಆಗಿ ಲೋಕಾಯುಕ್ತ ಬಲೆಗೆ ಬಿದ್ದಿದ್ದಾಳೆ. ಬಳಿಕ ಲೋಕಾಯಕ್ತ ಪೊಲೀಸರು ಗಂಗಾಲಕ್ಷ್ಮೀಯನ್ನು ಬಂಧಿಸಿ ವಿಚಾರಣೆಗೊಳಪಡಿಸಿದಾಗ ಈಕೆಯ ಕರ್ಮಕಾಂಡ ಬಗೆದಷ್ಟು ಬಯಲಾಗುತ್ತಿದೆ.

ಸಾರ್ವಜನಿಕ ಹೆರಿಗೆ ಆಸ್ಪತ್ರೆಯನ್ನ ಸ್ವಂತ ಆಸ್ಪತ್ರೆಯನ್ನಾಗಿ ಮಾಡಿಕೊಂಡಿದ್ದ ನರ್ಸ್ ಗಂಗಲಕ್ಷ್ಮೀ ಮೇಲಿನ ಆರೋಪ ಇದೇನು ಮೊದಲಲ್ಲ. ಈಕೆ ಭ್ರೂಣ ಹತ್ಯೆ ಕೇಸ್ ನಲ್ಲೂ ಭಾಗಿಯಾಗಿರುವ ಅರೋಪ ಕೇಳಿಬಂದಿದೆ. ಈಕೆಯ ಪತಿ ರಮೇಶ್ ನಿವೃತ್ತ ಪೊಲೀಸ್ ಅಧಿಕಾರಿ. ಹೀಗಾಗಿ ಈಕೆ ಏನು ಮಾಡಿದರೂ ಸಹ ನಡೆದುಕೊಂಡು ಹೋಗುತ್ತಿದೆ. ಆಸ್ಪತ್ರೆಯಲ್ಲಿ ಈಕೆ ಹೇಳಿದ್ದೆ ಅಂತಿಮ.

ಸತತ ನಾಲ್ಕು ಬಾರಿ ಈಕೆಯ ಮೇಲೆ ಗಂಭೀರ ಸ್ವರೂಪದ ಅರೋಪಗಳು ಇದ್ದರೂ ಸಹ ಇಲಾಖೆಯ ಕೆಲ ಅಧಿಕಾರಿಗಳಿಗೆ ಹಣ ಕೊಟ್ಟು ಸಾಕಷ್ಟು ವರ್ಷದಿಂದ ಒಂದೇ ಆಸ್ಪತ್ರೆಯಲ್ಲಿ ಠಿಕಾಣಿಹೂಡಿದ್ದಾಳೆ. ಆಸ್ಪತ್ರೆಯಲ್ಲಿ ಕಾರ್ಯ ನಿರ್ವಹಣೆ ಮಾಡುವ ಡಾಕ್ಟರ್ ಕೂಡ ಈ ನರ್ಸ್ ಹೇಳಿದ ರೀತಿಯಲ್ಲಿ ಕೆಲಸ ಮಾಡಬೇಕಿತ್ತು. ಈ ಹಿಂದೆಯೂ ಬಾಗಲಗುಂಟೆ ಪೊಲೀಸ್ ಠಾಣೆಯಲ್ಲಿ ಗಂಭೀರ ಪ್ರಕರಣದ ಕೇಸ್‌ಗಳು ದಾಖಲಾಗಿದ್ದರೂ ಯಾವುದೇ ಕ್ರಮವಾಗಿಲ್ಲ. ಹೀಗಾಗಿ ನರ್ಸ್ ಗಂಗಾಲಕ್ಷ್ಮೀ ಆಡಿದ್ದೇ ಆಟವಾಗಿತ್ತು.

# ಮಾಜಿ ಸಚಿವರ ಆಪ್ತೆ ಎಂದು ಚಿನ್ನ ಖರೀದಿ ನೆಪದಲ್ಲಿ ವಂಚನೆ:ಬಂಧನ

**ಬೆಂಗಳೂರು:** ಮಾಜಿ ಸಚಿವ ವರ್ತೂರು ಪ್ರಕಾಶ್ ಅವರ ಆಪ್ತೆ ಎಂದು ಪರಿಚಯಿಸಿಕೊಂಡು, ಚಿನ್ನ ಖರೀದಿ ನೆಪದಲ್ಲಿ ಜ್ಯುವೆಲ್ಲರಿ ಶಾಫ್ ಮಾಲೀಕರಿಗೆ ವಂಚಿಸಿದ ಆರೋಪದಡಿ ಮಹಿಳೆಯೊಬ್ಬರನ್ನು ಬೆಂಗಳೂರಿನ ಪುಲಿಕೇಶಿ ನಗರ ಉಪವಿಭಾಗದ ಪೊಲೀಸರು ಬಂಧಿಸಿದ್ದಾರೆ. ಬಾಗಲಗುಂಟೆ ನಿವಾಸಿ ಶ್ವೇತಾ ಗೌಡ ಬಂಧಿತ ಆರೋಪಿ. ಕಮರ್ಷಿಯಲ್ ಸ್ಟ್ರೀಟ್‌ನ ನವರತ್ನ ಜ್ಯುವೆಲ್ಲರ್ಸ್ ಮಾಲೀಕ ಸಂಜಯ್ ಭಾಫ್ನಾ ಅವರಿಂದ ಸುಮಾರು 2.945 ಕೆ.ಜಿ ಚಿನ್ನ ಪಡೆದು ವಂಚಿಸಿದ ಆರೋಪದಡಿ ಆರೋಪಿಯುನ್ನು ಬಂಧಿಸಲಾಗಿದೆ.



ನವರತ್ನ ಜ್ಯುವೆಲ್ಲರ್ಸ್ ಮಾಲೀಕ ಸಂಜಯ್ ಭಾಫ್ನಾ ಅವರ ಮಳಿಗೆಗೆ ಬರುತ್ತಿದ್ದ ಆರೋಪಿ, ಮಾಜಿ ಸಚಿವರ ಆಪ್ತೆ ಎಂದು ಪರಿಚಯಿಸಿಕೊಂಡಿದ್ದರು. ತಾನು 'ಚಿನ್ನಾಭರಣ ವ್ಯಾಪಾರ ಆರಂಭಿಸುತ್ತಿದ್ದು, ನಿಮ್ಮಿಂದಲೇ ಆಭರಣ ಖರೀದಿಸುತ್ತೇನೆ' ಎಂದಿದ್ದರು. ಸಂಜಯ್ ಸಹ ಇದಕ್ಕೆ ಒಪ್ಪಿದ್ದರು. ಆರೋಪಿ ಎರಡ್ಮೂರು ಬಾರಿ ಚಿನ್ನಾಭರಣಗಳನ್ನು ಮನೆಯವರಿಗೆ ತೋರಿಸಿಕೊಂಡು ಬರುವುದಾಗಿ ಅನುಮತಿ ಪಡೆದು ಕೊಂಡೊಯ್ದಿದ್ದರು. ಆದರೆ ಆ.26ರಿಂದ ಡಿ.8ರವರೆಗಿನ ಅವಧಿಯಲ್ಲಿ ಆರೋಪಿ ಹೇಳಿದ್ದ ವಿಳಾಸಕ್ಕೆ ಜ್ಯುವೆಲ್ಲರಿ ಶಾಫ್ ಸಿಬ್ಬಂದಿ ಸುಮಾರು 2.42 ಕೋಟಿ ರೂ. ಮೌಲ್ಯದ 2.945 ಕೆಜಿ ಚಿನ್ನ ಹಾಗೂ ವಜ್ರಾಭರಣಗಳನ್ನು ತಲುಪಿಸಿದ್ದರು.

ಆರೋಪಿ ಬಂಧಿಸಿದ ಪೊಲೀಸರು: ಆದರೆ ಆರೋಪಿ ಯಾವುದೇ ಚಿನ್ನಾಭರಣವನ್ನೂ ಹಿಂದಿರುಗಿಸಿರಲಿಲ್ಲ. ಚಿನ್ನ ಮರಳಿಸಿ ಇಲ್ಲ ಹಣ ಪಾವತಿಸಿ ಎಂದು ಕೇಳಿದಾಗ ಧಮ್ಕಿ ಹಾಕಿದ್ದಾಳೆ ಎಂದು ಜ್ಯುವೆಲರ್ಸ್ ಮಾಲೀಕ ಸಂಜಯ್ ಭಾಪ್ನಾ ಕಮರ್ಷಿಯಲ್ ಸ್ಟ್ರೀಟ್ ಠಾಣೆಗೆ ದೂರು ನೀಡಿದ್ದರು. ಪ್ರಕರಣ ದಾಖಲಾಗುತ್ತಿದ್ದಂತೆ ಮಾಜಿ ಶಾಸಕ ವರ್ತೂರು ಪ್ರಕಾಶ್ ಅವರಿಗೆ ಸೇರಿದ ಕಾರಿನಲ್ಲೇ ಆರೋಪಿ ಶ್ವೇತಾ ಗೌಡ ಮೈಸೂರಿಗೆ ತೆರಳಿದ್ದಳು.


ಇತ್ತ ಪ್ರಕರಣದ ತನಿಖೆ ಕೈಗೊಂಡ ಪುಲಕೇಶಿನಗರ ಉಪ ವಿಭಾಗದ ಎಸಿಪಿ ಗೀತಾ ನೇತೃತ್ವದ ತಂಡ ಮೈಸೂರಿಗೆ ತೆರಳಿ ಆರೋಪಿ ಶ್ವೇತಾ ಗೌಡಳನ್ನು ಬಂಧಿಸಿದೆ. ಆರೋಪಿಯಿಂದ ಚಿನ್ನ ಹಾಗೂ ಕಾರು ಸೇರಿದಂತೆ ಇತರ ವಸ್ತುಗಳನ್ನು ಜಪ್ತಿ ಮಾಡಲಾಗಿದೆ.

ಈ ಮೊದಲು ಇದೇ ರೀತಿ ಚಿನ್ನದ ವ್ಯಾಪಾರಿಗೆ ಮೋಸ ಮಾಡಿದ್ದ ಆರೋಪದಡಿ ಯಲಹಂಕ ಠಾಣೆ ಪೊಲೀಸರು ಆರೋಪಿಯನ್ನು ಬಂಧಿಸಿದ್ದರು. ಜಾಮೀನು ಪಡೆದು ಹೊರ ಬಂದ ಶ್ವೇತಾ ಗೌಡ ಮತ್ತೆ ತನ್ನ ಚಾಳಿ ಮುಂದುವರೆಸಿದ್ದರು ಎಂದು ತಿಳಿದು ಬಂದಿದೆ.

**ವರ್ತೂರು ಪ್ರಕಾಶ್ ವಿಚಾರಣೆಗೆ ನೋಟಿಸ್:** ಡಾಲರ್ಸ್ ಕಾಲೊನಿಯಲ್ಲಿರುವ ಮಾಜಿ ಶಾಸಕ ವರ್ತೂರು ಪ್ರಕಾಶ್ ಅವರ ಮನೆ ವಿಳಾಸ ನೀಡಿ ಆರೋಪಿ 2.945 ಕೆಜಿ ಚಿನ್ನ ಪಡೆದಿದ್ದಳು. ಆದ್ದರಿಂದ ಪ್ರಕರಣದಲ್ಲಿ ವರ್ತೂರು ಪ್ರಕಾಶ್ ಅವರಿಗೂ ಸಹ ತನಿಖೆ ಸಂಕಷ್ಟ ಎದುರಾಗಿದೆ. ಪ್ರಕರಣದಲ್ಲಿ ವರ್ತೂರು ಪ್ರಕಾಶ್ ಅವರಿಗೆ ಕಮರ್ಷಿಯಲ್ ಸ್ಟ್ರೀಟ್ ಪೊಲೀಸರು ನೋಟಿಸ್ ನೀಡಿದ್ದಾರೆ.

**ವರ್ತೂರು ಪ್ರಕಾಶ್ ಸ್ಪಷ್ಟನೆ:** ಆರೋಪಿ ಮಹಿಳೆ 3–4 ತಿಂಗಳ ಮುಂಚೆ ನಮ್ಮ ಮನೆಗೆ ಬಂದು, ಸಮಾಜ ಸೇವಕಿ ಎಂದು ಪರಿಚಯಿಸಿಕೊಂಡಿದ್ದರು. ಆಕೆಯೂ ನನಗೆ ತಿಳಿಸಿ ಒಡವೆ ಖರೀದಿಸಿಲ್ಲ. ಜ್ಯುವೆಲ್ಲರಿ ಮಾಲೀಕರು ನನಗೆ ತಿಳಿಸಿಲ್ಲ. ಆಕೆಯ ಬ್ಯುಸಿನೆಸ್, ಬಂಗಾರದ ಬಗ್ಗೆ ನನ್ನ ಬಳಿ ಪ್ರಸ್ತಾಪ ಮಾಡಿಯೇ ಇಲ್ಲ. ನನಗೂ ನಿನ್ನೆಯೇ ಗೊತ್ತಾಗಿದೆ. ನಮ್ಮ ಮನೆ ಬಳಿ ಬೇರೆ ಜನ ಬಂದ ಹಾಗೆ ಆಕೆಯೂ ಬಂದಿದ್ದಾಳೆ. ದೂರು ನೀಡಿರುವ ವಿಚಾರ ಪೊಲೀಸರಿಂದ ನಿನ್ನೆ ತಿಳಿಯಿತು. ಸೋಮವಾರ ವಿಚಾರಣೆಗೆ ಹೋಗಲಿದ್ದೇನೆ ಎಂದು ಮಾಜಿ ಶಾಕವ ವರ್ತೂರು ಪ್ರಕಾಶ್ ತಿಳಿದ್ದಾರೆ.

# ಸಿ.ಟಿ ರವಿ ಬಿಡುಗಡೆ ವಿಚಾರ: ಸರ್ಕಾರಕ್ಕೆ ಇದೇನು ಮುಖಭಂಗ ಅಲ್ಲ: ಸಚಿವ ಖರ್ಗೆ



**ಕಲ್ಬುರ್ಗಿ:** ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಬಗ್ಗೆ ಆಕ್ಷೇಪಾರ್ಹ ಪದ ಬಳಕೆ ಆರೋಪ ಪ್ರಕರಣ ಸಂಬಂಧ ಎಂಎಲ್ ಸಿ ಸಿಟಿ ರವಿ ಅವರನ್ನ ಬಿಡುಗಡೆ ಮಾಡುವಂತೆ ಹೈಕೋರ್ಟ್ ಸೂಚನೆ ಕುರಿತು ಪ್ರತಿಕ್ರಿಯಿಸಿದ ಸಚಿವ ಪ್ರಿಯಾಂಕ್ ಖರ್ಗೆ, ಇದು ಜಾಮೀನು ಕೊಡಬಹುದಾದಂತ ಪ್ರಕರಣ ಸರ್ಕಾರಕ್ಕೆ ಇದೇನು ಮುಖಭಂಗ ಅಲ್ಲ ಎಂದರು.

ಇಂದು ಮಾಧ್ಯಮಗಳ ಜೊತೆ ಮಾತನಾಡಿದ ಸಚಿವ ಪ್ರಿಯಾಂಕ್ ಖರ್ಗೆ, ಪ್ರಕರಣದಲ್ಲಿ ಬೇಲ್ ಆಗಿದೆ ಅಷ್ಟೆ ಮಾಧ್ಯಮದಲ್ಲಿ ಪ್ರಸಾರ ಮಾಡಿದ್ದನ್ನ ತಿರಸ್ಕಾರ ಮಾಡಿದ್ದಾರೆ ಇವರಿಗೆ ಎಷ್ಟು ದುರಹಂಕಾರ ಇರಬೇಕು. ಅದರಲ್ಲೇನು ಸತ್ಯಕ್ಕೆ ಜಯ ಅನ್ನೋದು . ನಾಚಿಕೆ ಆಗಲ್ವಾ ಈ ಘಟನೆಯಿಂದ ಒಗ್ಗಾಟ್ಟಾಗಿದ್ದಾರೆ ಅಂದ್ರೆ ದುಶ್ಯಾಸನಗಳು ಅಲ್ವಾ ಎಂದು ಕಿಡಿಕಾರಿದರು.

ಪೊಲೀಸರು ಕಾನೂನು ಪ್ರಕಾರ ಮಾಡಿದ್ದಾರೆ ಸಿಟಿ ರವಿ ಆರೋಪಿ. ಅವರನ್ನ ಪೊಲೀಸರ ಅರೆಸ್ಟ್ ಮಾಡಿದ್ರೆ ಉಳಿದವರಿಗೇನು ಕೆಲಸ. ಸುಮ್ಮನೆ ಬಿಟ್ಟರೇ ವಿಐಪಿ ಟ್ರೀಟ್ ಮೆಂಟ್‌ಎಂದು ಹೇಳುತ್ತಾರಿ ಕಾನೂನ ಪ್ರಕಾರ ಕೈಗೊಂಡರೇ ಹೀಗೆ ಮಾತಾನಾಡುತ್ತೀರಿ ಎಂದರು.

# ಬೀದಿನಾಯಿಗಳ ದಾಳಿ: ಮಗುವಿಗೆ ಗಾಯ

**ಮೈಸೂರು:** ಬೀದಿ ನಾಯಿಗಳ ದಾಳಿಯಿಂದಾಗಿ ಮಗುವಿಗೆ ಗಂಭೀರ ಗಾಯವಾಗಿರುವ ಘಟನೆ ಮೈಸೂರು ತಾಲ್ಲೂಕು ಜಯಪುರ ಗ್ರಾಮದಲ್ಲಿ ನಡೆದಿದೆ.

ಬರಡನಪುರ ಗ್ರಾಮದ ಗುರುಸ್ವಾಮಿ ಪುತ್ರಿ ತ್ರಿಷಿಕಾ ಬೀದಿನಾಯಿಗಳ ದಾಳಿಯಿಂದ ಗಂಭೀರವಾಗಿ ಗಾಯಗೊಂಡಿದ್ದಾಳೆ. ಬೀದಿನಾಯಿಗಳ ಹಿಂಡು ತ್ರಿಷಿಕಾ ಮೇಲೆ ದಾಳಿ ನಡೆಸಿದ್ದು ಕೈ ಸೇರಿ ದೇಹದ ವಿವಿಧ ಭಾಗಗಳಿಗೆ ಗಾಯಗೊಳಿಸಿವೆ.

ಈ ವೇಳೆ ಗ್ರಾಮಸ್ಥರು ಮಗುವಿನ ಕೂಗಾಟ ಕೇಳಿ ತಕ್ಷಣ ಅಲ್ಲಿಗೆ ಬಂದು ನಾಯಿಗಳನ್ನು ಓಡಿಸಿ ಮಗುವನ್ನ ರಕ್ಷಿಸಿದ್ದಾರೆ. ಗಂಭೀರ ಗಾಯಗೊಂಡ ತ್ರಿಷಿಕಾಳನ್ನ



ಮೈಸೂರಿನ ಖಾಸಗಿ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ. ಇನ್ನು ಗ್ರಾಮದಲ್ಲಿ ಬೀದಿ ನಾಯಿಗಳ ಹಾವಳಿ ಹೆಚ್ಚಾಗಿದ್ದು ಈ ಬಗ್ಗೆ ಗ್ರಾಮ ಪಂಚಾಯಿತಿಗೆ ದೂರು ನೀಡಿದರೂ ಯಾವುದೇ ಪ್ರಯೋಜನವಾಗಿಲ್ಲ ಎಂದು ಜಯಪುರ ಗ್ರಾಮಸ್ಥರ ಅಳಲು ತೋಡಿಕೊಂಡಿದ್ದಾರೆ.

# ಅತುಲ್ ಆತ್ಮಹತ್ಯೆ: ಕರ್ನಾಟಕ ಸೇರಿ 3 ರಾಜ್ಯಗಳಿಗೆ ಸುಪ್ರೀಂ ನೋಟಿಸ್?

**ಬೆಂಗಳೂರು/ನವದೆಹಲಿ:** ಉತ್ತರ ಪ್ರದೇಶ ಟೆಕ್ಕಿ ಅತುಲ್ ಸುಭಾಷ್ ಆತ್ಮಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ಕರ್ನಾಟಕ ಸೇರಿದಂತೆ ಮೂರು ರಾಜ್ಯಗಳಿಗೆ ಸುಪ್ರೀಂಕೋರ್ಟ್ ನೋಟಿಸ್ ನೀಡಿದೆ. ಅತುಲ್ ಸುಭಾಷ್ ಅವರ ತಾಯಿ ಅಂಜು ಮೋದಿಯವರು 4 ವರ್ಷದ ಮೊಮ್ಮಗನನ್ನು ನನ್ನ ಸುಪರ್ಧಿಗೆ ನೀಡಿ ಎಂದು ಸುಪ್ರೀಂ ಕೋರ್ಟ್‌ನಲ್ಲಿ ಹೇಬಿಯಸ್ ಕಾರ್ಪಸ್ ಅರ್ಜಿ ಸಲ್ಲಿಸಿದ್ದರು.

ಅರ್ಜಿ ವಿಚಾರಣೆ ನಡೆಸಿದ ನ್ಯಾ.ಬಿ.ವಿ.ನಾಗರತ್ನ ಮತ್ತು ನ್ಯಾ.ಎನ್. ಕೋಟೀಶ್ವರ್ ಸಿಂಗ್ ಅವರನ್ನೊಳಗೊಂಡ ಪೀಠವು ಪರಿಸ್ಥಿತಿಯ ಬಗ್ಗೆ ಸ್ಪಷ್ಟನೆ ನೀಡುವಂತೆ ಉತ್ತರ ಪ್ರದೇಶ, ಹರಿಯಾಣ, ಕರ್ನಾಟಕ ಸರ್ಕಾರಗಳಿಗೆ ನೋಟಿಸ್ ನೀಡಿದೆ. ಮುಂದಿನ ವಿಚಾರಣೆ ಜನವರಿ 7ಕ್ಕೆ ನಿಗದಿಪಡಿಸಿದೆ.

ಅತುಲ್ ಅವರ ಪತ್ನಿ ಮತ್ತು ಅವರ ತಾಯಿ ಮತ್ತು ಸಹೋದರನನ್ನು ಪೊಲೀಸರು ಬಂಧಿಸಿದ್ದಾರೆ. ಆದರೆ, ನಿಖಿತಾ ಸಿಂಘಾನಿಯಾ ಅವರು ಮಗು ಎಲ್ಲಿದೆ ಎಂಬುವುದನ್ನು ಬಹಿರಂಗಪಡಿಸಿಲ್ಲ ಎಂದು ಅರ್ಜಿಯಲ್ಲಿ ಹೇಳಿದ್ದಾರೆ. ಮಗುವನ್ನು ಫರಿದಾಬಾದ್ ಬೋರ್ಡಿಂಗ್ ಶಾಲೆಗೆ ದಾಖಲಿಸಲಾಗಿದೆ ಮತ್ತು ನನ್ನ ಚಿಕ್ಕಪ್ಪ ಸುಶೀಲ್ ಸಿಂಘಾನಿಯಾ ಅವರ ಬಳಿ ಇದೆ ಎಂದು ನಿಖಿತಾ ಪೊಲೀಸರಿಗೆ ತಿಳಿಸಿದ್ದಾರೆ ಎಂದು ವರದಿಯಾಗಿದೆ. ಆದರೆ, ಆದರೆ ಮಗು ಇರುವ ಸ್ಥಳದ ಬಗ್ಗೆ ಮಾಹಿತಿ ಇಲ್ಲ ಎಂದು ಸುಶೀಲ್ ಹೇಳಿದ್ದಾರೆ.

ಡಿ.9ರಂದು ಬೆಂಗಳೂರಿನಲ್ಲಿ ಅತುಲ್ ಸುಭಾಷ್ ಆತ್ಮಹತ್ಯೆ ಮಾಡಿಕೊಂಡಿದ್ದರು. ಇದಕ್ಕೂ ಮುನ್ನ 24 ಪುಟಗಳ ಪತ್ರ ಹಾಗೂ ಒಂದು ಗಂಟೆ ಅವಧಿಯ ವಿಡಿಯೋ ರೆಕಾರ್ಡ್ ಮಾಡಿದ್ದರು. ವಿಡಿಯೋದಲ್ಲಿ ತಾವು ಎದುರಿಸಿದ್ದ ಕಷ್ಟಗಳನ್ನು ಬಹಿರಂಗಪಡಿಸಿದ್ದರು.

ಪತ್ನಿ ತನ್ನನ್ನು ಸುಳ್ಳು ಪ್ರಕರಣದಲ್ಲಿ ಸಿಲುಕಿಸಿದ್ದಾರೆ ಎಂದು ಆರೋಪಿಸಿದ್ದರು. ಈ ಪ್ರಕರಣದಲ್ಲಿ ಅತುಲ್ ಪತ್ನಿ ನಿಖಿತಾ ಸಿಂಘಾನಿಯಾ ಮತ್ತು ತಾಯಿ ನಿಶಾ ಸಿಂಘಾನಿ ಮತ್ತು ಸಹೋದರ ಅನುರಾಗ್ ಸಿಂಘಾನಿಯಾ ಅವರನ್ನು ಡಿಸೆಂಬರ್ 16 ರಂದು ಬಂಧಿಸಲಾಗಿದೆ. ಮೂವರ ವಿರುದ್ಧ ಆತ್ಮಹತ್ಯೆ ಪ್ರಚೋದನೆ ಕಾಯ್ದೆಯಡಿ ಪ್ರಕರಣ ದಾಖಲಾಗಿದೆ.




## ಹನುಮ ಜಯಂತಿ: ಪೊಲೀಸರಿಂದ ಪಥಸಂಚಲನ

**ಚಾಮರಾಜನಗರ:** ನಗರದಲ್ಲಿ ಇಂದು ನಡೆಯುವ ಹನುಮ ಜಯಂತ್ಯೋತ್ಸವ ಪ್ರಯುಕ್ತ ಚಾಮರಾಜನಗರ ಜಿಲ್ಲಾ ಪೊಲೀಸರು ಪಥಸಂಚಲನ ನಡೆಸಿದರು.

ಚಾಮರಾಜನಗರ ಜಿಲ್ಲಾ ಪೊಲೀಸ್ ಕವಾಯತು ಮೈದಾನದಿಂದ ಹೊರಟ ಪಥಸಂಚಲನ ಜೋಡಿರಸ್ತೆ, ಸತ್ತಿ ರಸ್ತೆ, ಸುಲ್ತಾನ್ ಷರೀಫ್ ವೃತ್ತ, ದೊಡ್ಡಂಗಡಿಬೀದಿ, ಚಿಕ್ಕಂಗಡಿ ಬೀದಿ ಸಂತೆಮರಳ್ಳಿ ವೃತ್ತ ಜೋಡಿರಸ್ತೆ ಮೂಲಕ ಸಾಗಿ ಮತ್ತೆ ಕವಾಯತು ಮೈದಾನ ತಲುಪಿತು.


ಮೂರನ ವರ್ಷದ ಹನುಮ ಜಯಂತಿ ಕಾರ್ಯಕ್ರಮದ ಮೆರವಣಿಗೆ ನಡೆಯುವುದರಿಂದ ಯಾವುದೆ ಅಹಿತಕರ ಘಟನೆ ನಡೆಯದಂತೆ ಮುಂಜಾಗ್ರತವಾಗಿ ಜಿಲ್ಲಾ ಪೊಲೀಸ್ ವರೀಷ್ಠಾದಿಕಾರಿ ಬಿಟಿ ಕವಿತಾ ಅವರ ನೇತೃತ್ವದಲ್ಲಿ 200 ಕ್ಕೂ ಹೆಚ್ಚು ಪೊಲೀಸರು ಪಥಸಂಚಲನ ನಡೆಸಿದರು.

## ಅಂಬೇಡ್ಕರ್ ಪುತ್ಥಳಿ ನಿರ್ಮಿಸುವಂತೆ ಒತ್ತಾಯ

**ಕೆ.ಆರ್.ಪುರ:** ರಾಜ್ಯದಲ್ಲಿ 200 ಮೀಟರ್ ಎತ್ತರದ ಡಾ.ಬಿ.ಆರ್. ಅಂಬೇಡ್ಕರ್ ಅವರ ಪುತ್ಥಳಿ ನಿರ್ಮಿಸಿಕೊಡುವಂತೆ ಒತ್ತಾಯಿಸಿ ಭೀಮ ಪ್ರಜಾ ಸಂಘದ ರಾಜ್ಯಾಧ್ಯಕ್ಷ ವೈಟ್‌ಫೀಲ್ಡ್ ಮುರುಗೇಶ್ ಸಚಿವ ಎಚ್.ಸಿ ಮಹದೇವಪ್ಪ ಅವರಿಗೆ ಮನವಿ ಸಲ್ಲಿಸಿದ್ದಾರೆ.

ನಂತರ ಮಾತನಾಡಿದ ಅವರು, ದೇಶದ ಏಕತೆ ಮತ್ತು ಸಮಾನತೆಯ ಮಹತ್ವವನ್ನು ತಿಳಿಸುವಂತೆ ಮಾಡಿದ ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ 200 ಮೀಟರ್‌ಗಳ ಎತ್ತರ ಪುತ್ಥಳಿ ನಿರ್ಮಿಸುವಂತೆ ರಾಜ್ಯ ಸರ್ಕಾರಕ್ಕೆ ಸಚಿವರ ಮೂಲಕ ಮನವಿ ಸಲ್ಲಿಸಲಾಗಿದೆ ಎಂದು ತಿಳಿಸಿದರು.

ಈ ವೇಳೆ ಮನವಿ ಸ್ವೀಕರಿಸಿ ಮಾತನಾಡಿದ ಸಚಿವ ಎಚ್.ಸಿ ಮಹದೇವಪ್ಪ, ಅಮೇರಿಕ ಸೇರಿದಂತೆ ಆಂಧ್ರಪ್ರದೇಶ ಮತ್ತು ತೆಲಂಗಾಣ ರಾಜ್ಯಗಳಲ್ಲಿ ಅಂಬೇಡ್ಕರ್ ಅವರ ಪ್ರತಿಮೆ ಕಂಡಿರುವೆ, ಅದರಂತೆಯೇ ಕರ್ನಾಟಕದಲ್ಲೂ ಸಹ ಪ್ರತಿಮೆ ನಿರ್ಮಿಸವ ಬಗ್ಗೆ ಮುಖ್ಯಮಂತ್ರಿಗಳೊಂದಿಗೆ ಚರ್ಚಿಸುವುದಾಗಿ ಬರವಸೆ ನೀಡಿದರು.



## ಮುಳಬಾಗಿಲು ನಗರದಲ್ಲಿ ಅಪರಾಧ ತಡೆ ಮಾಸಾಚರಣೆ: ವಿದ್ಯಾರ್ಥಿಗಳಿಂದ ಜಾಥಾ




**ಮುಳಬಾಗಿಲು:** ನಗರದ ಅಪರಾಧ ತಡೆ ಮಾಸಾಚರಣೆ ಅಂಗವಾಗಿ ಸ್ಥಳೀಯ ಪೊಲೀಸ್ ನಗರ ಠಾಣೆಯಿಂದ ಸರ್ಕಾರಿ ಬಾಲಕರ ಬಾಲಕಿಯರ ಕಾಲೇಜು ವಿದ್ಯಾರ್ಥಿಗಳಿಂದ ಜಾಥಾ ಮಾಡಿದರು. ಬಸ್ ನಿಲ್ದಾಣದಲ್ಲಿ ಶುಕ್ರವಾರ ಸಾರ್ವಜನಿಕರಿಗೆ ಅಪರಾಧ ಪ್ರಕರಣಗಳ ಬಗ್ಗೆ ಸುರಕ್ಷತೆ ಹಾಗೂ ಕಾನೂನು ಪಾಲನೆ ಕುರಿತು ಜಾಗೃತಿ ಮೂಡಿಸಲಾಯಿತು.

ಪೊಲೀಸ್ ಸುರೇಶ್ ಮಾತನಾಡಿ,'ದಿನನಿತ್ಯದ ಬದುಕಿನಲ್ಲಿ ಕಾನೂನು ನಿಯಮಗಳನ್ನು ಅಳವಡಿಸಿಕೊಂಡು ಸಾಗಬೇಕಾದ ಅನಿವಾರ್ಯತೆ ಇದೆ. ಸಾರ್ವಜನಿಕ ಸ್ಥಳಗಳಲ್ಲಿ ನಡೆಯುವಂತಹ ಅಪರಾಧಗಳು ಕಣ್ಣಿಗೆ ಬಿದ್ದರೆ ಹತ್ತಿರದ ಪೊಲೀಸ್ ಠಾಣೆಗೆ ಮಾಹಿತಿ ನೀಡಬೇಕಾಗಿರುವುದು ನಾಗರಿಕರ ಕರ್ತವ್ಯವಾಗಿದೆ' ಎಂದು ಹೇಳಿದರು.

'ಪಾಲಕರು ಮನೆಯಲ್ಲಿ ತಮ್ಮ ಮಕ್ಕಳ ಚಲನವಲನದ ಬಗ್ಗೆ ಗಮನ ನೀಡಿ. ದುಶ್ಚಟಗಳಿಂದ ದೂರವಿರಲು ಪಾಲಕರು ಜಾಗೂರಕತೆ ವಹಿಸಬೇಕು. ಅಪ್ರಾಪ್ತರಿಗೆ ಬೈಕ್ ಓಡಿಸಲು ಕೊಡಬೇಡಿ. ಸಂಚಾರಿ ನಿಯಮಗಳನ್ನು ಪಾಲನೆ ಮಾಡದೆ ಅಪಘಾತ ಸಂಭವಿಸಿದರೆ ಪಾಲಕರೇ ನೇರ ಹೊಣೆಗಾರರನ್ನಾಗಿ ಮಾಡಲಾಗುವುದು' ಎಂದು ಹೇಳಿದರು.

ಪೊಲೀಸ್ ಸಿಬ್ಬಂದಿ ಮೂರ್ತಿ ಇದ್ದರು. ಸರ್ಕಾರಿ ಬಾಲಕರ ಬಾಲಕಿಯರ ಪದವಿ ಪೂರ್ವ ಕಾಲೇಜು ವಿದ್ಯಾರ್ಥಿಗಳು ಸೇರಿದ್ದರು.

## ಅರ್ಹ ಫಲಾನುಭವಿಗಳಿಗೆ ಯೋಜನೆ ತಲುಪಿಸಲು ಪ್ರಯತ್ನ

**ಕೊರಟಗೆರೆ:** ಸರ್ಕಾರದ ಗ್ಯಾರಂಟಿ ಯೋಜನೆಗಳನ್ನುತಾಲ್ಲೂಕಿನ ಪ್ರತಿಅರ್ಹ ಪಲಾನುಭವಿಗಳಿಗೂ ತಲುಪಿಸುವ ಕೆಲಸವನ್ನು ಪ್ರಾಮಾಣಿಕತೆಯಿಂದ ಮಾಡಲಾಗುವುದು ಎಂದುಕೊರಟಗೆರೆತಾಲ್ಲೂಕು ಮಟ್ಟದಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ನೂತನಅಧ್ಯಕ್ಷ ಬಿ.ಸಿ.ವೆಂಕಟೇಶ್‌ಮೂರ್ತಿ ತಿಳಿಸಿದರು.

ಅವರುಕೊರಟಗೆರೆ ಪಟ್ಟಣದತಾಲ್ಲೂಕು ಪಂಚಾಯಿತಿಯಲ್ಲಿ ಸಮಿತಿಯ ನೂತನ



ಆಡಳಿತ ಕಛೇರಿಯನ್ನು ಪ್ರಾರಂಭಿಸಿ ಮಾತನಾಡಿ ಸರ್ಕಾರದ ಗೃಹ ಸಚಿವರು ಹಾಗು ಕ್ಷೇತ್ರದ ಶಾಸಕರಾದ ಡಾ.ಜಿ ಪರಮೇಶ್ವರ್‌ರವರ ಮಾರ್ಗದರ್ಶನದಲ್ಲಿ ಈ ಅನುಷ್ಠಾನ ಸಮಿತಿಯು ಕಾರ್ಯನಿರ್ವಹಿಸಲಿದ್ದು ನನ್ನೊಂದಿಗೆ 15 ಉಪಾದ್ಯಕ್ಷರನ್ನು ಈ ಸಮಿತಿಯಲ್ಲಿ ನೇಮಕ ಮಾಡಿದ್ದು ನಾವೆಲ್ಲರು ಒಟ್ಟುಗೂಡಿ ಈ ಕಾರ್ಯಕ್ರಮಕ್ಕೆ ಯಾವುದೇಕುಂದುಕೊರತೆ ಬಾರದಂತೆ ನಿಷ್ಟೆಯಿಂದ ಕೆಲಸ ಮಾಡುತ್ತೇವೆಎಂದರು.

ತಹಶೀಲ್ದಾರ್ ಮಂಜುನಾಥ್ ಮಾತನಾಡಿ ಸರ್ಕಾರವು ಜಾರಿಗೊಳಿಸಿರುವ 5 ಗ್ಯಾರಂಟಿಗಳನ್ನು ಅನುಷ್ಠಾನ ಮಾಡಲು ವೆಂಕಟೇಶ್‌ಮೂರ್ತಿರವರಅಧ್ಯಕ್ಷತೆಯಲ್ಲಿ 15 ಉಪಾದ್ಯಕ್ಷರ ಸಮಿತಿಯನ್ನುಸರ್ಕಾರವುರಚನೆ ಮಾಡಿದ್ದು ಈ ಸಮಿತಿಗೆತಾಲ್ಲೂಕು ಆಡಳಿತ ಸೇರಿದಂತೆ ವಿವಿದ ಇಲಾಖೆಗಳು ಸಹಕಾರ ನೀಡಲಿದ್ದು ಸಮಾಜದಕಟ್ಟಕಡೆಯ ವ್ಯಕ್ತಿಗೂ ಸಹ ಈ ಯೋಜನೆಯ ಫಲವನ್ನುತಲುಪಿಸುವ ಕೆಲಸ ಮಾಡಲಾಗುವುದುಎಂದರು.

ಬ್ಲಾಕ್‌ಕಾಂಗ್ರೆಸ್‌ಅಧ್ಯಕ್ಷಅರೆಕೆರೆಶಂಕರ್ ಮಾತನಾಡಿಗೃಹಸಚಿವರಾದಡಾ.ಜಿ ಪರಮೇಶ್ವರ್ ನೇತೃತ್ವದಲ್ಲಿ ಈ ಕಮಿಟಿಯನ್ನುರಚನೆ ಮಾಡಿದ್ದು ಸಮಾಜದ ಬಡ ಮತ್ತುದುರ್ಬಲ ವರ್ಗದವರಿಗೆ ಈ ಯೋಜನೆಯನ್ನುತಲುಪಿಸುವ ಕಾರ್ಯವನ್ನು ಸಮಿತಿ ಮಾಡಬೇಕಿದೆ. ವಿಶೇಷವೆಂದರೆ ವಿಧಾನಸಭೆಚುನಾವಣೆ ಸಂಧರ್ಭದಲ್ಲಿಗ್ಯಾರಂಟಿ ಸಮಿತಿಯಅಧ್ಯಕ್ಷತೆಯನ್ನುಗೃಹಸಚಿವರಾದಡಾ.ಜಿ.ಪರಮೇಶ್ವರ್‌ರವರು ವಹಿಸಿಕೊಂಡಿದ್ದರು ಇಂದುಅವರಗ್ಯಾರಂಟಿಯೋಜನೆಯ ಆಲೋಚನೆ ಇತರ ರಾಜ್ಯಗಳಲ್ಲಿ ಎಲ್ಲಾ ಪಕ್ಷಗಳ ಆಡಳಿತ ಸರ್ಕಾರಗಳು ಜಾರಿಗೆತಂದಿವೆ ಎಂದರು.

ಈ ಸಂದರ್ಭದಲ್ಲಿಗೃಹಸಚಿವರ ವಿಶೇಷಅಧಿಕಾರಿ ನಾಗಣ್ಣ, ತಾ.ಪಂ.ಇ.ಓ.ಅಪೂರ್ವ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಅಶ್ವತ್‌ನಾರಾಯಣ ಮುಖಂಡರುಗಳಾದ ಮಹಾಲಿಂಗಯ್ಯ, ಎ.ಡಿ.ಬಲರಾಮಯ್ಯ, ಎಲ್.ರಾಜಣ್ಣ, ಈಶ್ವರಯ್ಯ, ಮಹಿಳಾ ಅಧ್ಯಕ್ಷೆ ಜಯಮ್ಮ, ಕವಿತ, ಸಮಿತಿ ಉಪಾಧ್ಯಕ್ಷರುಗಳಾದ ಗೋಪಾಲಕೃಷ್ಣ, ರಿಯಾಜ್‌ಅಹಮದ್, ಕಿಶೋರ್, ವೀರಣ್ಣಗೌಡ, ರೋಹಿತ್, ಚಂದ್ರಶೇಖರ್, ಶ್ರೀ ವಿದ್ಯಾ, ರಾಘವೇಂದ್ರ, ಪುಟ್ಟಸ್ವಾಮಿ, ಪವನ್‌ಕುಮಾರ್, ಆನಂದ್, ಚಂದ್ರಕಲಾ, ಗುರುಶಾಂತಪ್ಪ, ಶಿವಕುಮಾರ್ ಸೇರಿದಂತೆ ಇತರರು ಹಾಜರಿದ್ದರು.

## ಕನ್ನಡ ಮಾತನಾಡುವವರ ಸಂಖ್ಯೆ ಕಡಿಮೆ ಆಗುತ್ತಿದೆ



**ಶಿಡ್ಲಘಟ್ಟ:** ಕನ್ನಡ ಭಾಷೆಗೆ ಅಂತ್ಯವೆಂಬುದಿಲ್ಲ ಬದಲಿಗೆ ವರ್ಷಗಳು ಕಳೆದಂತೆ ಕನ್ನಡ ಪ್ರವರ್ಧಮಾನಕ್ಕೆ ಬರುತ್ತಿದೆ ಕನ್ನಡ ಭಾಷೆಯು ನಶಿಸುತ್ತಿದೆ ಮಾತನಾಡುವವರ ಸಂಖ್ಯೆ ಕಡಿಮೆ ಆಗುತ್ತಿದೆ ಎಂಬುದೆಲ್ಲವೂ ಸುಳ್ಳು ಎಂದು ಕೆಪಿಸಿಸಿ ಸಂಯೋಜಕರು ಹಾಗು ಮುಖಂಡ ರಾಜೀವ್‌ಗೌಡ ಅಭಿಪ್ರಾಯಪಟ್ಟರು.

ತಾಲ್ಲೂಕಿನ ಎಚ್.ಕ್ರಾಸ್(ಕುಂಭಿಗಾನಹಳ್ಳಿ) ನ ಶ್ರೀಸೀತಾರಾಮ ದೇವಾಲಯದ ವೃತ್ತದಲ್ಲಿ ಸ್ಥಳೀಯ ನಾನಾ ಕನ್ನಡಪರ ಸಂಘಟನೆಗಳಿಂದ ಹಮ್ಮಿಕೊಂಡಿದ್ದ ಕನ್ನಡ ರಾಜ್ಯೋತ್ಸವದಲ್ಲಿ ಕನ್ನಡ ಧ್ವಜಾರೋಹಣ ನೆರವೇರಿಸಿ ನೆರೆದಿದ್ದವರನ್ನು ಉದ್ದೇಶಿಸಿ ಅವರು ಮಾತನಾಡಿದರು.

ದಿನಗಳು ಕಳೆದಂತೆ ಕನ್ನಡ ಭಾಷೆ ನೆಲ ಜಲದ ಮೇಲಿನ ಪ್ರಜ್ಞೆ ಹೆಚ್ಚುತ್ತಿದೆ. ರಾಜ್ಯದಲ್ಲಿ ಬೇರೆಲ್ಲಾ ಭಾಷೆಗಳ ನಡುವೆ ಕನ್ನಡ ಮೇರು ಸ್ಥಾನದಲ್ಲಿದ್ದು ಆ ಸ್ಥಾನವನ್ನು ಕಸಿದುಕೊಳ್ಳುವ ಕೆಲಸ ಯಾವ ಭಾಷೆಯಿಂದಲೂ ಯಾರಿಂದಲೂ ಸಾಧ್ಯವಿಲ್ಲ ಎಂದು ಹೇಳಿದರು.

ಕನ್ನಡನಾಡಿನ ನಾವು ವ್ಯಾಪಾರ ವ್ಯವಹಾರ ಜ್ಞಾನಾರ್ಜನೆಗಾಗಿ ಯಾವೆಲ್ಲಾ ಭಾಷೆಗಳನ್ನಾದರೂ ಕಲಿಯೋಣ, ಆದರೆ ನಮ್ಮೆಲ್ಲರ ಹೃದಯ ಮತ್ತು ಬದುಕಿನ ಭಾಷೆ ಮಾತ್ರ ಕನ್ನಡವೇ ಆಗಿರಲಿ ಎಂದು ಆಶಿಸಿದರು.

ನವೆಂಬರ್‌ನಲ್ಲಿ ಕನ್ನಡ ರಾಜ್ಯೋತ್ಸವ ಆಚರಿಸುವುದು ಸಾಂಕೇತಿಕವಾಗಿದ್ದು ಸಹಜವಾಗಿ ವರ್ಷದ ಉದ್ದಕ್ಕೂ ಕನ್ನಡ ನಾಡಿನ ಉತ್ಸವವನ್ನು ನಾವೆಲ್ಲರೂ ಮಾಡುತ್ತಿದ್ದೇವೆ. ಕನ್ನಡ ಭಾಷೆಯನ್ನು ಉಳಿಸುವ ಬೆಳೆಸುವ ಕೆಲಸ ನಿರಂತರವಾಗಿ ನಡೆಯುತ್ತಿದ್ದು ನಮ್ಮೆಲ್ಲರ ಹೆಮ್ಮೆ ಎಂದರು.

ಪಿಎಲ್‌ಡಿ ಬ್ಯಾಂಕ್ ಮಾಜಿ ಅಧ್ಯಕ್ಷ ಕೆ.ಎಂ.ಭೀಮೇಶ್ ಮಾತನಾಡಿ, ಕನ್ನಡ ರಾಜ್ಯೋತ್ಸವ ನವೆಂಬರ್ ತಿಂಗಳಿಗೆ ಸೀಮಿತವಾಗದೆ ವರ್ಷದ ಉದ್ದಕ್ಕೂ ಕನ್ನಡದ ಉತ್ಸವ ನಡೆಯಬೇಕು, ಕನ್ನಡ ಕೇವಲ ಭಾಷೆಯಲ್ಲಿ ಅದು ನಮ್ಮ ಬದುಕು, ಭವಿಷ್ಯ ಎಂದರು.

ಕನ್ನಡ ಭಾಷೆಯ ಅಳಿವು ಎಂದರೆ ಕೇವಲ ಭಾಷೆ ನಶಿಸುವುದಿಲ್ಲ ಬದಲಿಗೆ ನಮ್ಮ ಬದುಕು ನಶಿಸಿದಂತೆ , ಹಾಗಾಗಿ ನಮ್ಮ ಮಕ್ಕಳ ಬದುಕು ಕನ್ನಡಮಯ ಆಗಿರುವಂತೆ ನಾವು ಎಚ್ಚರಿಕೆವಹಿಸಿ ಕನ್ನಡವನ್ನು ಪ್ರೀತಿಸಬೇಕು, ಬಳಸುವ ಮೂಲಕ ಉಳಿಸಿ ಬೆಳಸಬೇಕು ಎಂದು ಹೇಳಿದರು.

ಇದೇ ವೇಳೆ ಕನ್ನಡಾಂಬೆ ದೇವಿ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಪುಷ್ಪ ನಮನ ಸಲ್ಲಿಸಲಾಯಿತು,ಎಲ್ಲರಿಗೂ ಸಿಹಿ ಹಂಚಲಾಯಿತು,ಸಾಮೂಹಿನ ಅನ್ನ ಸಂತರ್ಪಣೆ ಏರ್ಪಡಿಸಲಾಗಿತ್ತು ಶ್ರೀಸೀತಾರಾಮ ದೇವಾಲಯದಲ್ಲಿ ಪೂಜೆಯಲ್ಲಿ ಎಲ್ಲರೂ ಭಾಗವಹಿಸಿದ್ದರು.

ಈ ಸಂದರ್ಭದಲ್ಲಿ ಒಕ್ಕಲಿಗರ ಸಂಘದ ನಿರ್ದೇಶಕ ಬೆಂಡಿಗಾನಹಳ್ಳಿ ರಾಜಶೇಖರ್‌ಗೌಡ, ಚಿಕ್ಕಬಳ್ಳಾಪುರ ಜಿಲ್ಲಾ ಯೂನಿಯನ್ ನಿರ್ದೇಶಕ ಕಾಳನಾಯಕನಹಳ್ಳಿ ಭಿಮೇಶ್, ಹಿರಿಯ ಮುಖಂಡ ಅಯ್ಯಪ್ಪಣ್ಣ, ಯುವ ಮುಖಂಡ ಮೇಲೂರು ಬಿ.ಎನ್.ಸಚಿನ್, ಜಿಲ್ಲಾ ಪಂಚಾಯತಿ ಮಾಜಿ ಅಧ್ಯಕ್ಷೆ ಸವಿತಗೋಪಾಲ್, ಎಚ್.ಕ್ರಾಸ್ ಅಂಬರೀಶ್, ಕಾಳನಾಯಕನಹಳ್ಳಿ ಮಂಜಯ್ಯ, ಮುನೇಗೌಡ, ಗ್ರಾ.ಪಂ. ಅಧ್ಯಕ್ಷ ಹೇಮರ್ಲಹಳ್ಳಿ ನಾಗರಾಜ್, ಸಿದ್ದಲಿಂಗಮೂತಿ, ಶಿವಕುಮಾರ್, ಆದಿ ಜಾಂಬವ ಸಂಘದ ಅಧ್ಯಕ್ಷ ಕೆ.ಎಂ.ನರಸಿಂಹಮೂರ್ತಿ, ಶ್ರೀನಿವಾಸ್‌ಮೂರ್ತಿ ಮತ್ತಿತರರು ಭಾಗವಹಿಸಿದ್ದರು.

## ಹುಲಿ ಉಗುರುಗಳನ್ನು ಬೈಕಿನಲ್ಲಿ ಅಕ್ರಮವಾಗಿ ಸಾಗಾಣಿಕೆ ಮಾಡುತ್ತಿದ್ದ ಇಬ್ಬರ ಬಂಧನ

**ಚಾಮರಾಜನಗರ:** ಜಿಲ್ಲೆಯ ಕೊಳ್ಳೇಗಾಲ ಹನೂರು ಮುಖ್ಯರಸ್ತೆಯಲ್ಲಿನ ಲೊಕ್ಕನಹಳ್ಳಿ ಬಳಿ ನಾಲ್ಕು ಹುಲಿ ಉಗುರುಗಳನ್ನು ಬೈಕಿನಲ್ಲಿ ಅಕ್ರಮವಾಗಿ ಸಾಗಾಣಿಕೆ ಮಾಡುತ್ತಿದ್ದ ಇಬ್ಬರನ್ನು ಅರಣ್ಯ ಸಂಚಾರ ದಳದ ಪೊಲೀಸರು ಬಂದಿಸಿದ್ದಾರೆ.



ಮೈಸೂರು ಜಿಲ್ಲೆಯ ಪಿರಿಯಾಪಟ್ಟಣ ತಾಲ್ಲೂಕಿನ ದೂಡ್ಡ ಹರವೆ ಗ್ರಾಮದ ನವೀನ್ ಕುಮಾರ್ ಬಿನ್ ಮಂಜು, (24), ಹೆಚ್.ಡಿ ಕೋಟೆ ತಾಲ್ಲೂಕಿನ ಆಲನಹಳ್ಳಿ ಗ್ರಾಮದ ಕುಮಾರನಾಯಕ ಬಿನ್ ಚೆಲುವನಾಯಕ, (32) ಎಂಬಾತರೆ ಬಂಧಿರಾಗಿದ್ದಾರೆ ಘಟನೆ ವಿವರ: ಕೊಳ್ಳೇಗಾಲ–ಹನೂರು ಮುಖ್ಯ ರಸ್ತೆಯಿಂದ ಲೊಕ್ಕನಹಳ್ಳಿ ಕಡೆಗೆ ಹೋಗುವ ರಸ್ತೆಯ ಜಂಕ್ಷನ್ ಬಳಿ ಹುಲಿಯ 04 ಉಗುರುಗಳನ್ನು ಬೈಕಿನಲ್ಲಿ ಅಕ್ರಮವಾಗಿ ಸಾಗಾಣಿಕೆ ಮಾಡುತ್ತಿದ್ದಾರೆ ಎಂಬ ಖಚಿತ ಮಾಹಿತಿ ಮೇರೆಗೆ ಎಸ್ ಎಸ್ ಕಾಶಿ ಪೊಲೀಸ್ ಅಧೀಕ್ಷಕರು ಸಿಐಡಿ ಅರಣ್ಯ ಸಂಚಾರಿ ಘಟಕ ಮಡಕೇರಿ ರವರ ಮಾರ್ಗದರ್ಶನದಲ್ಲಿ ಸಿಐಡಿ ಅರಣ್ಯ ಸಂಚಾರಿ ದಳ ಕೊಳ್ಳೇಗಾಲದ ಪಿಎಸ್‌ಐ ವಿಜಯ್ ರಾಜ್ ನೇತ್ರತ್ವದ ತಂಡ ಧಾಳಿ ನೆಡೆಸಿದಾಗ ಈ ಪ್ರಕರಣ ಬೆಳಕಿಗೆ ಬಂದಿದ್ದು ಕೂಡಲೆ ಹುಲಿ ಉಗುರನ್ನು ವಶಕ್ಕೆ ಪಡೆದು ಇಬ್ಬರನ್ನು ಬಂಧಿಸಿ ವನ್ಯಜೀವಿ ಸಂರಕ್ಷಾಣಾ ಕಾಯ್ದೆಯಡಿ ಪ್ರಕರಣ ದಾಖಲಿಸಿದ್ದಾರೆ

ಈ ಕಾರ್ಯಚರಣೆಯಲ್ಲಿ ಅರಣ್ಯಸಂಚಾರಿ ಧಳದ ಸಿಬ್ಬಂದಿಗಳಾದ ಶಂಕರ್ ಬಸವರಾಜು ರಾಮಚಂದ್ರ ಸ್ವಾಮಿ ಲತಾ ಬಸವರಾಜು ಚಾಲಕ ಪ್ರಭಾಕರ್ ಭಾಗವಹಿಸಿದ್ದರು

## ಅಥಣಿ: 8 ತಿಂಗಳ ಗರ್ಭಿಣಿ ಕೊಲೆ ಮಾಡಿ ದುಷ್ಕರ್ಮಿಗಳು ಪರಾರಿ

**ಚಿಕ್ಕೋಡಿ:** ಎಂಟು ತಿಂಗಳ ಗರ್ಭಿಣಿಯನ್ನು ದುಷ್ಕರ್ಮಿಗಳು ಬರ್ಬರವಾಗಿ ಹತ್ಯೆ ಮಾಡಿ ಪರಾರಿಯಾಗಿರುವ ಘಟನೆ ಜಿಲ್ಲೆಯ ಅಥಣಿ ತಾಲೂಕಿನ ಚಿಕ್ಕೂಡ ಗ್ರಾಮದಲ್ಲಿ ಶುಕ್ರವಾರ ಮಧ್ಯಾಹ್ನ ಸಂಭವಿಸಿದೆ.

ಗ್ರಾಮದ ಮಹಿಳೆ ಸುವರ್ಣ ಮಠಪತಿ (37) ಕೊಲೆಯಾದ ತುಂಬು ಗರ್ಭಿಣಿ. ಮಹಿಳೆಗೆ ಈಗಾಗಲೇ ನಾಲ್ವರು ಹೆಣ್ಣು ಮಕ್ಕಳಿದ್ದು, ಐದನೇ ಮಗುವಿನ ನಿರೀಕ್ಷೆಯಲ್ಲಿದ್ದರು. ಕೊಲೆಯಿಂದಾಗಿ ಕುಟುಂಬಕ್ಕೆ ಬರಸಿಡಿಲು ಬಡದಂತಾಗಿದೆ. ಹೆತ್ತ ತಾಯಿಯನ್ನು ಕಳೆದುಕೊಂಡ ಮಕ್ಕಳ ಆಕ್ರಂದನ ಮುಗಿಲು ಮುಟ್ಟಿತ್ತು. ಸ್ಥಳಕ್ಕೆ ಅಥಣಿ ಪೊಲೀಸರು ಹಾಗೂ ಬೆಳಗಾವಿ ಹೆಚ್ಚುವರಿ ಎಸ್‌ಪಿ ಶ್ರುತಿ ಎಸ್. ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

**ಘಟನೆ ವಿವರ:** ಕೊಲೆಯಾದ ಮಹಿಳೆಯದ್ದು ಬಡ ಕುಟುಂಬ. ಪತಿಯು ಗ್ರಾಮ ದೇವತೆಯ ಅರ್ಚಕರಾಗಿ ಕೆಲಸ ಮಾಡಿಕೊಂಡು ಜೀವನ ಸಲಹುತ್ತಿದ್ದರು. ಮಹಿಳೆಯ ಪತಿ ಮಧ್ಯಾಹ್ನ ಹಸುಗಳಿಗೆ ಮೇವು ತರಲು ತೋಟಕ್ಕೆ ಹೋಗಿದ್ದರು. ಮಕ್ಕಳು ಕೂಡ ಶಾಲೆಗೆ ಹೋಗಿದ್ದರಿಂದ ಮನೆಯಲ್ಲಿ ಯಾರೂ ಇರಲಿಲ್ಲ. ಈ ಸಮಯದಲ್ಲಿ ದುಷ್ಕರ್ಮಿಗಳು ಮಾರಕಾಸ್ತ್ರದಿಂದ ಮನಬಂದಂತೆ ಹಲ್ಲೆ ನಡೆಸಿ ಪರಾರಿಯಾಗಿದ್ದಾರೆ. ತೋಟದಿಂದ ಮೇವು ತಂದ ಪತಿಯು ತನ್ನ ಪತ್ನಿಯನ್ನು ಕರೆದರೂ ಮನೆಯಿಂದ ಹೊರಗೆ ಬಂದಿಲ್ಲ. ಆಗ ಸಮೀಪ ಬಂದು ನೋಡಿದಾಗ ಗರ್ಭಿಣಿಯು ರಕ್ತದ ಮಡಿಲಿನಲ್ಲಿ ಬಿದ್ದು ನರಳಾಡುತ್ತಿರುವುದು ಕಂಡುಬಂದಿದೆ.

ತಕ್ಷಣವೇ, ಪಕ್ಕದ ಹಾರೂಗೇರಿ ಖಾಸಗಿ ಆಸ್ಪತ್ರೆಗೆ ರವಾನಿಸಿದ್ದಾರೆ. ಆದರೆ ಗಂಭೀರವಾಗಿ ಗಾಯಗೊಂಡ ಮಹಿಳೆ ದಾರಿ ಮಧ್ಯದಲ್ಲೇ ಮೃತಪಟ್ಟಿದ್ದಾರೆ ಎಂದು ವೈದ್ಯರು ತಿಳಿಸಿದ್ದಾರೆ. ಕೊಲೆ ಆರೋಪಿಗಳು ಯಾರು? ನಿಖರ ಕಾರಣವೇನು ಎಂಬುದು ಇನ್ನೂ ತಿಳಿದು ಬಂದಿಲ್ಲ. ಈ ಸಂಬಂಧ ಅಥಣಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ಮುಂದುವರೆದಿದೆ.

## ಗ್ಯಾರಂಟಿ ಯೋಜನೆ ಶೇ.100 ರಷ್ಟು ಅನುಷ್ಠಾನಕ್ಕೆ ಪ್ರಯತ್ನ: ಸಂಗಮೇಶ್ ಗುತ್ತಿ

**ಕುಕನೂರು:** ರಾಜ್ಯ ಕಾಂಗ್ರೆಸ್ ಸರ್ಕಾರದ ಮಹತ್ವಕಾಂಕ್ಷೀ ಯೋಜನೆಗಳಾದ ಪಂಚ ಗ್ಯಾರಂಟಿಗಳ ಶೇ. 100 ರಷ್ಟು ಅನುಷ್ಠಾನಕ್ಕೆ ಎಲ್ಲಾ ಅಧಿಕಾರಿಗಳು ಪ್ರಯತ್ನಿಸಬೇಕಿದೆ ಎಂದು ಕುಕನೂರು ತಾಲೂಕು ಗ್ಯಾರಂಟಿ ಅನುಷ್ಠಾನ ಸಮಿತಿಯ ಅಧ್ಯಕ್ಷ ಸಂಗಮೇಶ್ ಗುತ್ತಿ ಹೇಳಿದರು.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ಇಂದು ನಡೆದ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯಿಂದ ಯಲಬುರ್ಗಾ ಮತ್ತು ಕುಕನೂರು ತಾಲೂಕಿನ ಪ್ರಗತಿ ಪರಿಶೀಲನಾ ಸಭೆಯಲ್ಲಿ ಅವರು ಮಾತನಾಡಿದರು. ಕೆಲವೊಂದು ತಾಂತ್ರಿಕ ಕಾರಣಗಳನ್ನು ಹೊರತುಪಡಿಸಿದರೆ ಅವಳಿ ತಾಲೂಕಿನಲ್ಲಿ ಗ್ಯಾರಂಟಿಯ 5 ಯೋಜನೆಗಳು ಸಮರ್ಪಕವಾಗಿ ಜಾರಿಯಾಗಿವೆ, ಮಹತ್ವಕಾಂಕ್ಷಿ ಯೋಜನೆ ಗಳನ್ನು ಜನರಿಗೆ ತಲುಪಿಸುವಲ್ಲಿ ಅಧಿಕಾರಿಗಳು ಮಹತ್ವದ ಪಾತ್ರ ವಹಿಸುತ್ತಿದ್ದಾರೆ ಎಂದು ಸಂಗಮೇಶ್ ಗುತ್ತಿ ಹೇಳಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಧಿಕಾರಿ ಬೆಟದಪ್ಪ ಮಾಳೆಕೊಪ್ಪ ಮಾತನಾಡಿ, ಒಟ್ಟು ತಾಲೂಕಿನಲ್ಲಿ 59783 ಕುಟುಂಬಗಳು ನೊಂದಣಿಯಾಗಿದ್ದು 328 ಫನಾನುಭವಿಗಳಿಗೆ ಮಾತ್ರ ಸಮಸ್ಯೆ ಆಗಿದೆ ಅದರಲ್ಲಿ 39 ಕುಟುಂಬದ ಮುಖ್ಯಸ್ಥರು ಮರಣ ಹೊಂದಿದ್ದಾರೆ, 42 ಜಿ.ಎಸ್.ಟಿ ಪಾವತಿದಾರರು, 61 ಫಲಾನುಭವಿಗಳಿಗೆ ಬ್ಯಾಂಕ್ ಅಕೌಂಟ್ ಸಮಸ್ಯೆ ಇದೆ ಸುಮಾರು 186 ಫಲಾನುಭವಿಗಳ ಸಮಸ್ಯೆ ಬಗೆ ಹರಿದಿದೆ ಎಂದರು.

ಅನ್ನಭಾಗ್ಯ ಯೋಜನೆಯ ಬಗ್ಗೆ ಚರ್ಚಿಸಿದಾಗ ಅವಳಿ ತಾಲೂಕಿನಲ್ಲಿ 53849 ಕಾರ್ಡಗಳು ಇದ್ದು 2,08,804 ಫಲಾನುಭವಿಗಳು ಇದ್ದು ಪ್ರತೀ ಸದಸ್ಯರಿಗೆ 5 ಇಾರ ಅಕ್ಕಿ 5 ಇಾರ ಅಕ್ಕಿಯ ಮೊತ್ತ ರೂ 172 ಅನ್ನು ಕುಟುಂಬದ ಮುಖ್ಯಸ್ಥರಿಗೆ ಪಾವತಿಸಲಾಗುತ್ತಿದೆ. 918 ಪಡಿತರ ಜೀಟಿಗಳು ಮಾತ್ರ ಸಮಸ್ಯೆ ಇದೆ. ಅದರಲ್ಲಿ 52 ಪಡಿತರ ಚೀಟಿ ಮುಖ್ಯಸ್ಥರು ಮರಣ ಹೊಂದಿದ್ದಾರೆ, 638 ಪ.ಚೀ ಆಧಾರ ನಂಬರ್ ಸಮಸ್ಯೆ, 228 ಎನ್ .ಪಿ.ಸಿ.ಆಯ್ ಸಮಸ್ಯೆ ಇದೆ ಎಂದು ಆಹಾರ ಇಲಾಖೆ ಅಧಿಕಾರಿಗಳು ಸಭೆಗೆ ತಿಳಿಸಿದರು.



ಗೃಹ ಜ್ಯೋತಿ ಯೋಜನೆಯನ್ನು ನಿಯಮಾನುಸಾರ ಅನುಷ್ಠಾನ ಮಾಡಲಾಗುತ್ತಿದೆ ಎಂದು ಕೆಪಿ.ಟಿ.ಸಿಎಲ್ ಅಧಿಕಾರಿಗಳು ಸಭೆಗೆ ತಿಳಿಸಿದರು. ಶಕ್ತಿ ಯೋಜನೆಯಲ್ಲಿ ಕುಕನೂರ 64.62 ಲಕ್ಷ ಮಹಿಳಾ ಫಲಾನುಭವಿಗಳು ಸಂಚಾರ ಮಾಡುದ್ದಾರೆ ಎಂದು ಕೆ.ಕೆ.ಆರ್.ಟಿ.ಸಿಅಧಿಕಾರಿಗಳು ತಿಳಿಸಿದರು. ಯುವ ನಿಧಿ ಯಲ್ಲಿ ಈ 2023 ರ ನಂತರ ಪದವಿ ಮುಕ್ತಾಯವಾದ 3011 ಯುವಕರು ನೊಂದಣಿಯಾಗಿದ್ದು ನಿಯಮಾನುಸಾರ ಪ್ರತಿ ತಿಂಗಳು ನಿರುದ್ಯೋಗ ಭತ್ಯೆ ಪಾವತಿ ಮಾಡಲಾಗುತ್ತಿದೆ ಎಂದು ಕೌಶಲ್ಯ ಯುವ ನಿಧಿ ಅಧಿಕಾರಿಗಳು ಸಭೆಗೆ ತಿಳಿಸದರು.

ಸಭೆಯಲ್ಲಿ ಗ್ಯಾರಂಟಿ ಯೋಜನೆ ಸಮಿತಿಯ ಜಿಲ್ಲಾ ಉಪಾಧ್ಯಕ್ಷ ಖಾಸಿಂ ಸಾಬ್ ತಳಕಲ್, ಯಲಬುರ್ಗಾ ಅಧ್ಯಕ್ಷ ಸುಧೀರ್ ಕೊರ್ಲಹಳ್ಳಿ, ತಾ. ಪಂ. ಇ ಓ ಸಂತೋಷ್ ಬಿರಾದಾರ್ ಸೇರಿದಂತೆ

ತಾಲೂಕ 5 ಗ್ಯಾರಂಟಿ ಯೋಜನೆಗಳ ಸಮಿತಿ ಸದಸ್ಯರು, ಅನುಷ್ಠಾನ ಇಲಾಖೆ ಅಧಿಕಾರಿಗಳು ತಾಲೂಕ ಪಂಚಾಯತಿ ಸಿಬ್ಬಂದಿಗಳು ಹಾಜರಿದ್ದರು.

## ಪ್ರತಿಷ್ಠಿತ ಐಐಎಂಬಿ ಪ್ರಾಧ್ಯಾಪಕರಿಗೆ ಜಾತಿ ನಿಂದನೆ ಆರೋಪ: 8 ಮಂದಿ ವಿರುದ್ಧ ಎಫ್‌ಐಆರ್

**ಬೆಂಗಳೂರು:** ಇಂಡಿಯನ್ ಇನ್‌ಸ್ಟಿಟ್ಯೂಟ್ ಆಫ್ ಮ್ಯಾನೇಜ್‌ಮೆಂಟ್ ಬೆಂಗಳೂರು (ಐಐಎಂಬಿ) ಸಂಸ್ಥೆಯಲ್ಲಿ ಕೆಲಸ ಮಾಡುತ್ತಿರುವ ಪ್ರಾಧ್ಯಾಪಕರಿಗೆ ಜಾತಿ ನಿಂದನೆ ಮಾಡಿದ ಆರೋಪದಡಿ ಸಹದ್ಯೋಗಿಗಳ ವಿರುದ್ಧ ಮೈಕೋಲೇಔಟ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಬಿಳೇಕನಹಳ್ಳಿಯಲ್ಲಿರುವ ಐಎಂಎಬಿ ಸಂಸ್ಥೆಯ ಮಾರ್ಕೆಟಿಂಗ್ ವಿಭಾಗದಲ್ಲಿ ಕಾರ್ಯನಿರ್ವಹಿಸುತ್ತಿರುವ ಸಹಾಯಕ ಪ್ರಾಧ್ಯಾಪಕ ಗೋಪಾಲ್ ದಾಸ್ ನೀಡಿದ ದೂರಿನ ಮೇರೆಗೆ ಪ್ರೊಫೆಸರ್ ಹಾಗೂ ಡೀನ್ ರಿಷಿಕೇಶ್ ಟಿ.ಕೃಷ್ಣನ್, ಸಹದ್ಯೋಗಿಗಳಾದ ದಿನೇಶ್ ಕುಮಾರ್, ಸೈನೇಶ್, ಶ್ರೀನಿವಾಸ ಪ್ರಕ್ಯಾ, ಚೇತನ್ ಸುಬ್ರಮಣ್ಯ, ಆಶ್ರಿಶ್ ಮಿಶ್ರಾ ಸೇರಿದಂತೆ 8 ಮಂದಿ ವಿರುದ್ಧ ಪೊಲೀಸರು ಎಫ್‌ಐಆರ್ ದಾಖಲಿಸಿಕೊಂಡಿದ್ದಾರೆ. ಉದ್ದೇಶಪೂರ್ವಕವಾಗಿ ಜಾತಿಯನ್ನು ಹೇಳಿ ಪ್ರಚಾರ ಮಾಡುತ್ತಿದ್ದಾರೆ. ಕೆಲಸ ಮಾಡುವ ವಾತಾವರಣದಲ್ಲಿ ಸಮಾನ ಅವಕಾಶ ನೀಡದೇ ಜಾತಿ ಭೇದ ಮಾಡಿ ವೈಷಮ್ಯ ಮೂಡಿಸಿದ್ದಾರೆ. ಕೆಲಸ ಮಾಡಲು ಅಡಚಣೆ ನೀಡಿ ಬೆದರಿಕೆ ಹಾಕುವ ಮೂಲಕ ಮಾನಸಿಕ ಹಿಂಸೆ ನೀಡಿದ್ದಾರೆ ಎಂದು ಆರೋಪಿತರ ವಿರುದ್ಧ ದೂರಿನಲ್ಲಿ ಗೋಕುಲ್ ದಾಸ್ ವಿವರಿಸಿದ್ದಾರೆ.

## ತರಬೇತಿಗಾಗಿ ಅರ್ಜಿ ಆಹ್ವಾನ

**ಗದಗ:** ಸರ್ಕಾರದ ಆದೇಶದನ್ವಯ 2024-25 ನೇ ಸಾಲಿನಲ್ಲಿ ಪ್ರವಾಸೋದ್ಯಮ / ಆತಿಥ್ಯ ಕ್ಷೇತ್ರದಲ್ಲಿ ಕೌಶಲ್ಯಾಭಿವೃದ್ಧಿ ತರಬೇತಿ ಕಾರ್ಯಕ್ರಮವನ್ನು ಪರಿಶಿಷ್ಟ ಜಾತಿಗೆ ಸೇರಿದ 292 ಅಭ್ಯರ್ಥಿಗಳಿಗೆ ಹಾಗೂ ಪರಿಶಿಷ್ಟ ಪಂಗಡಕ್ಕೆ ಸೇರಿದ 162 ಅಭ್ಯರ್ಥಿಗಳಿಗೆ ರಾಜ್ಯ ಹಾಗೂ ಕೇಂದ್ರ ಸರ್ಕಾರದ ಆತಿಥ್ಯ ಕ್ಷೇತ್ರದ ಸಂಸ್ಥೆಗಳಾದ ಫುಡ್ ಕ್ರಾಫ್ಟ್ ಇನ್‌ಸ್ಟಿಟ್ಯೂಟ್, ಮೈಸೂರು ಹಾಗೂ ಇನಸ್ಟಿಟ್ಯೂಟ್ ಆಫ್ ಹೋಟೆಲ್ ಮ್ಯಾನೇಜಮೆಂಟ್ (ಐಎಚ್‌ಎಂ) ರವರ ಮೂಲಕ ವಸತಿ ಸಹಿತ ಕಾರ್ಯಕ್ರಮವನ್ನು ಜಾರಿಗೊಳಿಸಲು ಉದ್ದೇಶಿಸಲಾಗಿದೆ.

ಫುಡ್ ಮತ್ತು ಬೆವರೇಜ್ ಸರ್ವಿಸ್ ಸ್ಟೇವರ್ಡ, ರೂಮ್ ಅಟೆಂಡೆಂಟ್, ಫ್ರಂಟ್ ಆಫೀಸ್ ಅಸೊಸಿಯೇಟ್, ಮಲ್ಟಿ ಕ್ಯೂಸಿನ್ ಕುಕ್ ಈ ವಿಷಯಗಳ ತರಬೇತಿ ಕಾರ್ಯಕ್ರಮಕ್ಕೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ತರಬೇತಿಗಳನ್ನು ಪಡೆಯಲು ಇಚ್ಛಿಸುವವರು ಸಹಾಯಕ ನಿರ್ದೇಶಕರ ಕಚೇರಿ, ಪ್ರವಾಸೋದ್ಯಮ ಇಲಾಖೆ, ಗದಗ ಕಚೇರಿಯಲ್ಲಿ ಅರ್ಜಿಗಳನ್ನು ಪಡೆದು ಅರ್ಜಿಗಳನ್ನು ಡಿಸೆಂಬರ್ 28 ರೊಳಗೆ ಸಲ್ಲಿಸಬಹುದಾಗಿದೆ. ತರಬೇತಿ ಕಾರ್ಯಕ್ರಮಗಳಿಗೆ ಸಂಬಂಧಿಸಿದಂತೆ ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರ ಕಚೇರಿ, ಪ್ರವಾಸೋದ್ಯಮ ಇಲಾಖೆ, ಎ.ಸಿ. ಕಚೇರಿ ಕಟ್ಟಡ, ಗದಗ ಜಿಲ್ಲೆ, ಗದಗ ದೂರವಾಣಿ ಸಂಖ್ಯೆ 08372-233017 ಸಂಪರ್ಕಿಸಬಹುದಾಗಿದೆ.

## ಫೆಬ್ರವರಿ 2 ರವರೆಗೆ ಅರ್ಜಿ ಸಲ್ಲಿಸುವ ಅವಧಿ ವಿಸ್ತರಣೆ

**ಗದಗ:** 2024-25 ನೇ ಸಾಲಿನ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಶುಲ್ಕ ಮರುಪಾವತಿ ಕಾರ್ಯಕ್ರಮದ ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕವನ್ನು15-2-2025 ರವರೆಗೆ ವಿಸ್ತರಿಸಲಾಗಿದೆ. ವೆಬ್‌ಸೈಟ್ ವಿಳಾಸ https://ssp.postmatric.karnataka.gov.in ಮೂಲಕ ಅರ್ಜಿ ಸಲ್ಲಿಸಬಹುದಾಗಿದ್ದು , ಕಾರ್ಯಕ್ರಮಗಳ ವಿವರ, ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳು ಹಾಗೂ ವಿದ್ಯಾರ್ಥಿ ವೇತನಕ್ಕೆ ಸಂಬಂಧಿಸಿದ ಸರ್ಕಾರಿ ಆದೇಶಗಳ ಬಗ್ಗೆ ಮಾಹಿತಿಗಾಗಿ ಭೇಟಿ ನೀಡಬೇಕಾದ ವೆಬ್‌ಸೈಟ್ ವಿಳಾಸ https://bcwd.karnataka.gov.in ಸಂಪರ್ಕಿಸಬಹುದಾಗಿದೆ.

## ದರಪಟ್ಟಿ ಆಹ್ವಾನ

**ಗದಗ:** ಗದಗ ಜಿಲ್ಲಾ ಪಂಚಾಯತ್ ಅನಿರ್ಬಂಧಿತ ಅನುದಾನದಡಿಯಲ್ಲಿ ವಸತಿ ನಿಲಯಗಳಿಗೆ ವಾಷಿಂಗ್ ಮಿಷನ್ ಸಾಮಗ್ರಿಗಳನ್ನು ಖರೀದಿಸಲು ಅರ್ಹ ಸರಬರಜುದಾರರಿಂದ ದರಪಟ್ಟಿಯನ್ನು ಆಹ್ವಾನಿಸಲಾಗಿದೆ.

ಆಸಕ್ತಿಯುಳ್ಳ ಪೂರೈಕೆದಾರರು ಡಿಸೆಂಬರ್ 24 ರ ಮಧ್ಯಾಹ್ನ 3 ಗಂಟೆಯೊಳಗೆ (ರಜೆ ದಿನಗಳನ್ನು ಹೊರತುಪಡಿಸಿ) ದರಪಟ್ಟಿಯನ್ನು ಸಲ್ಲಿಸತಕ್ಕದ್ದು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾದಿಕಾರಿಗಳ ಮೊಬೈಲ್ ಸಂಖ್ಯೆ 9480865004 ನ್ನು ಸಂಪರ್ಕಿಸಬಹುದಾಗಿದೆ ಎಂದು ಜಿ.ಪಂ. ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಯು.ಪಿ.ಎಸ್. ಖರೀದಿಸಲು ಅರ್ಹ ಸರಬರಾಜುದಾರರಿಂದ ದರಪಟ್ಟಿ ಆಹ್ವಾನ

**ಗದಗ:** ಗದಗ ಜಿಲ್ಲಾ ಪಂಚಾಯತ್ ಅನಿರ್ಬಂಧಿತ ಅನುದಾನದಡಿಯಲ್ಲಿ ವಸತಿ ನಿಲಯಗಳಿಗೆ ಯು.ಪಿ.ಎಸ್. ಖರೀದಿಸಲು ಅರ್ಹ ಸರಬರಾಜುದಾರರಿಂದ ದರಪಟ್ಟಿಯನ್ನು ಆಹ್ವಾನಿಸಲಾಗಿದೆ. ಆಸಕ್ತಿಯುಳ್ಳ ಪೂರೈಕೆದಾರರು ಡಿಸೆಂಬರ್ 24 ರ ಮಧ್ಯಾಹ್ನ 3 ಗಂಟೆಯೊಳಗೆ (ರಜೆ ದಿನಗಳನ್ನು ಹೊರತುಪಡಿಸಿ) ದರಪಟ್ಟಿಯನ್ನು ಸಲ್ಲಿಸತಕ್ಕದ್ದು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾದಿಕಾರಿಗಳ ಮೊಬೈಲ್ ಸಂಖ್ಯೆ 9480865004 ನ್ನು ಸಂಪರ್ಕಿಸಬಹುದಾಗಿದೆ ಎಂದು ಜಿ.ಪಂ. ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಆಹಾರ ಸೇವಿಸುವ ಪಾತ್ರೆಗಳನ್ನು ಖರೀದಿಸಲು ದರಪಟ್ಟಿ ಆಹ್ವಾನ

**ಗದಗ:** ಗದಗ ಜಿಲ್ಲಾ ಪಂಚಾಯತ್ ಅನಿರ್ಭಂಧಿತ ಅನುದಾನದಡಿಯಲ್ಲಿ ವಸತಿ ನಿಲಯಗಳ ವಿದ್ಯಾರ್ಥಿಗಳಿಗೆ ಆಹಾರ ಸೇವಿಸುವ ಪಾತ್ರೆಗಳು (ಲೋಟ, ತಟ್ಟೆ, ಚಮಚ, ಬಟ್ಟಲುಗಳು ಹಾಗೂ ಇತರೆ ಪರಿಕರಗಳನ್ನು) ಸಾಮಗ್ರಿಗಳನ್ನು ಖರೀದಿಸಲು ಅರ್ಹ ಸರಬರಾಜುದಾರರಿಂದ ದರಪಟ್ಟಿಯನ್ನು ಆಹ್ವಾನಿಸಲಾಗಿದೆ.

ಆಸಕ್ತಿಯುಳ್ಳ ಪೂರೈಕೆದಾರರು ಡಿಸೆಂಬರ್ 24ರ ಮಧ್ಯಾಹ್ನ 3 ಗಂಟೆಯೊಳಗೆ (ರಜೆ ದಿನಗಳನ್ನು ಹೊರತುಪಡಿಸಿ) ದರಪಟ್ಟಿಯನ್ನು ಸಲ್ಲಿಸತಕ್ಕದ್ದು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾದಿಕಾರಿಗಳ ಮೊಬೈಲ್ ಸಂಖ್ಯೆ 9480865004 ನ್ನು ಸಂಪರ್ಕಿಸಬಹುದಾಗಿದೆ ಎಂದು ಜಿ.ಪಂ. ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## "ಬ್ಯಾಡಗಿ ಮೆಣಸಿನಕಾಯಿ ಬೆಳೆಯ ಕ್ಷೇತ್ರೋತ್ಸವ"



**ಐ.ಸಿ.ಎ.ಆರ್:** ಕೆ.ಎಚ್.ಪಾಟೀಲ ಕೃಷಿ ವಿಜ್ಞಾನ ಕೇಂದ್ರ ಹುಲಕೋಟಿಯ ದತ್ತು ಗ್ರಾಮವಾದ ರೋಣ ತಾಲೂಕಿನ ಮಾಡಲಗೇರಿ ಗ್ರಾಮದಲ್ಲಿ ದಿನಾಂಕ 17-12-2024 ರಂದು ಬ್ಯಾಡಗಿ ಮೆಣಸಿನಕಾಯಿ ಬೆಳೆಯ ಕ್ಷೇತ್ರೋತ್ಸವವನ್ನು ಶ್ರೀ ಭರಮಗೌಡ ರಾಯನಗೌಡ್ರ ಇವರ ಹೊಲದಲ್ಲಿ ಏರ್ಪಡಿಸಲಾಗಿತ್ತು. ಐ.ಸಿ.ಎ.ಆರ್-ಕೆ.ಎಚ್.ಪಾಟೀಲ ಕೃಷಿ ವಿಜ್ಞಾನ ಕೇಂದ್ರ ಹುಲಕೋಟಿಯ 2024-25 ನೇ ಸಾಲಿನ ಮುಂಗಾರು ಹಂಗಾಮಿನ ಮುಂಚೂಣಿ ಪ್ರಾತ್ಯಕ್ಷಿಕೆ ಯೋಜನೆಯಡಿಯಲ್ಲಿ ಸಂಘಟಿಸಲಾದ ಈ ಕಾರ್ಯಕ್ರಮದಲ್ಲಿ ಕೃಷಿ ವಿಜ್ಞಾನ ಕೇಂದ್ರದ ಕೃಷಿ ಇಂಜಿನಿಯರಿಂಗ್ ವಿಜ್ಞಾನಿಗಳಾದ ಡಾ. ವಿನಾಯಕ ನಿರಂಜನ್ ಇವರು ಮಾತನಾಡಿ, ಕೇಂದ್ರದ ದತ್ತು ಗ್ರಾಮಗಳಾದ ಮುಂಡರಗಿ ತಾಲೂಕಿನ ಹಳ್ಳಿಗುಡಿ, ರೋಣ ತಾಲೂಕಿನ ಮಾಡಲಗೇರಿ ಹಾಗೂ ಗದಗ ತಾಲೂಕಿನ ಅಸುಂಡಿಯಲ್ಲಿ ಬ್ಯಾಡಗಿ ಮೆಣಸಿನಕಾಯಿ ಬೆಳೆಯಲ್ಲಿ ಅಧಿಕ ಇಳುವರಿ ಕೊಡುವ ಹಾಗೂ ರೋಗಗಳನ್ನು ತಡೆದುಕೊಳ್ಳುವ ರುದ್ರಾ ತಳಿಯನ್ನು ಪ್ರಾತ್ಯಕ್ಷಿಕೆ ಕೈಗೊಂಡ ತಾಕುಗಳಲ್ಲಿ ಸಮಗ್ರ ಬೆಳೆ ನಿರ್ವಹಣೆಯೊಂದಿಗೆ ಅಳವಡಿಸಲಾಗಿದೆ ಎಂದು ತಿಳಿಸಿದರು.

ಕೆವಿಕೆ ತೋಟಗಾರಿಕೆ ತಜ್ಞರಾದ ಹೇಮಾವತಿ ಹಿರೇಗೌಡರ ಇವರು ರುದ್ರಾ ತಳಿಯು ತೋಟಗಾರಿಕೆ ವಿಶ್ವವಿದ್ಯಾಲಯ ಬಾಗಲಕೋಟೆಯಿಂದ ಬಿಡುಗಡೆಯಾಗಿದ್ದು ಬ್ಯಾಡಗಿ ಡಬ್ಬಿಯನ್ನು ಹೋಲುತ್ತದೆ. ಕಾಯಿಗಳು ಒಣಗಿದಾಗ ಕಡು ಕೆಂಪು ಬಣ್ಣಕ್ಕೆ ತಿರುಗುತ್ತದೆ ಮತ್ತು ಎಕರೆಗೆ 8-10 ಒಣ ಮೆಣಸಿನಕಾಯಿ ಕೊಡುವ ಸಾಮರ್ಥ್ಯ ಹೊಂದಿದೆ. ಪ್ರಾತ್ಯಕ್ಷಿಕೆ ತಾಕುಗಳಲ್ಲಿ ಬೀಜಗಳನ್ನು ಬಿತ್ತುವ ಮುನ್ನ ಪ್ರತಿ ಒಂದು ಕಿಲೋ ಬೀಜಕ್ಕೆ 10 ಗ್ರಾಂ ಇಮಿಡಾಕ್ಲೋಪ್ರಿಡ್ 70 ಡಬ್ಲ್ಯೂ. ಎಸ್. ಕೀಟನಾಶಕದ ಜೊತೆಗೆ 4 ಗ್ರಾಂ ಟ್ರೈಕೋಡರ್ಮ ವಿರಿಡೆ ಜೈವಿಕ ಶಿಲಿಂದ್ರನಾಶಕದಿಂದ ಬೀಜೋಪಚಾರ ಮಾಡಿ ಬಿತ್ತಲಾಗಿದೆ. ರಸ ಹೀರುವ ಕೀಟಗಳನ್ನು ನಿರ್ವಹಣೆ ಮಾಡಲು ಹಳದಿ ಹಾಗೂ ನೀಲಿ ಅಂಟು ಬಲೆಗಳನ್ನು ಹಾಕುವುದರ ಜೊತೆಗೆ ಜೈವಿಕ ಕೀಟನಾಶಕಗಳಾದ ಲೇಖಾನಿಸಿಲಿಯಮ್ ಲೇಖಾನಿ ಹಾಗೂ ಬೆವೇರಿಯಾ ಬಾಸಿಯಾನಾವನ್ನು ಪ್ರತಿ ಲೀಟರ ನೀರಿಗೆ ತಲಾ 5 ಗ್ರಾಂ ನಂತೆ ಬೆರಸಿ ಸಿಂಪಡಿಸಲಾಗಿದೆ. ಇದರಿಂದ ಥ್ರಿಪ್ಸ್ ನುಶಿ ಹಾಗೂ ಜೇಡರ ನುಶಿಗಳ ಬಾಧೆ ಕಡಿಮೆಯಾಗಿದೆ. ಗೋವಿನ ಜೋಳವನ್ನು ಬದು ಬೆಳೆಯಾಗಿ ಹಾಗೂ ಪ್ರತಿ 16 ಮೆಣಸಿನ ಸಾಲುಗಳಿಗೆ ಒಂದು ಸಾಲು ಚಂಡು ಹೂವಿನ ಸಸಿಗಳನ್ನು ಬಲೆ ಬೆಳೆಯಾಗಿ ಬೆಳೆಸಲಾಗಿದೆ, ಇದರಿಂದ ಮುಟುರು ರೋಗ ಹಾಗೂ ಕೀಟಗಳ ಬಾಧೆ ಗಣನೀಯವಾಗಿ ಕಡಿಮೆಯಾಗಿದೆ ಎಂದು ತಿಳಿಸಿದರು. ಮುಂದುವರೆದು ಮಾತನಾಡುತ್ತಾ ಕಾಯಿ ಕೊರಕ ಕೀಟದ ಹತೋಟಿಗಾಗಿ ಮೋಹಕ ಬಲೆಗಳನ್ನು ಅಳವಡಿಸಲಾಗಿದೆ ಹಾಗೂ ಮೆಣಸಿನಕಾಯಿ ಚಿಬ್ಬು ರೋಗದ ಹತೋಟಿಗಾಗಿ 5 ಗ್ರಾಂ ಸ್ಯೂಡೋಮೊನಾಸ್ ಪ್ಲೋರೋಸೆನ್ಸ್ ಜೈವಿಕ ಶಿಲಿಂದ್ರನಾಶಕವನ್ನು ಪ್ರತಿ ಲೀಟರ ನೀರಿಗೆ ಬೆರಸಿ ಸಿಂಪಡಿಸಲಾಗಿದೆ ಎಂದು ಸಮಗ್ರ ಬೆಳೆ ನಿರ್ವಹಣಾ ಕ್ರಮಗಳನ್ನು ವಿವರಿಸಿದರು.

ಶ್ರೀ ಭರಮಗೌಡ ರಾಯನಗೌಡ್ರ ಇವರು ತಮ್ಮ ಹೊಲದಲ್ಲಿ ಕೈಗೊಂಡ ಪ್ರಾತ್ಯಕ್ಷಿಕೆಯಲ್ಲಿ ಅಳವಡಿಸಿದ ವಿವಿಧ ತಂತ್ರಜಾನಗಳ ಕುರಿತು ವಿವರಿಸಿದರು ಹಾಗೂ ರುದ್ರಾ ತಳಿಯು ಉತ್ತಮ ಇಳುವರಿ ಕೊಡುವುದರ ಜೊತೆಗೆ ಕೀಟ ಮತ್ತು ರೋಗಗಳ ಬಾಧೆ ಕಡಿಮೆ ಎಂದು ತಮ್ಮ ಅನುಭವವನ್ನು ಹಂಚಿಕೊಂಡರು. ಕ್ಷೇತ್ರೋತ್ಸವದಲ್ಲಿ ಗ್ರಾಮದ ಯುವಕರು ಮತ್ತು ಪ್ರಗತಿಪರ ರೈತರು ಉಪಸ್ಥಿತರಿದ್ದರು. ಸಮಾರಂಭದ ಪೂರ್ವದಲ್ಲಿ ಬ್ಯಾಡಗಿ ಮೆಣಸಿನಕಾಯಿ ಬೆಳೆಯ ವಿವಿಧ ಪ್ರಾತ್ಯಕ್ಷಿಕೆ ತಾಕುಗಳಿಗೆ ರೈತರ ಭೇಟ್ಟಿಯನ್ನು ಏರ್ಪಡಿಸಲಾಗಿತ್ತು.

## ಸಂಸ್ಥೆಗಳು ಸದೃಢವಾಗಲು ಸಂಘಟನೆ ಮುಖ್ಯ ವಿಧಾನ ಪರಿಷತ್ ಮಾಜಿ ಸದಸ್ಯ ಎಸ್.ರುದ್ರೇಗೌಡ






**ಶಿವಮೊಗ್ಗ:** ಸಂಸ್ಥೆಗಳು ಸದೃಢವಾಗಬೇಕಾದರೆ ಸಂಘಟನೆ ಮುಖ್ಯ. ಸಂಸ್ಥೆಗಳಲ್ಲಿ ಕ್ರಿಯಾಶೀಲತೆ, ಪ್ರಾಮಾಣಿಕತೆ ಹಾಗೂ ಶ್ರದ್ಧೆ, ಮುಂದಿನ ದೃಷ್ಟಿಕೋನ ಬಹಳ ಮುಖ್ಯ ಎಂದು ಶಾಂತಲಾ ಗ್ರೂಪ್ ಇಂಡಸ್ಟ್ರಿ ಚೇರ್ಮನ್, ವಿಧಾನ ಪರಿಷತ್ ಮಾಜಿ ಸದಸ್ಯ ಎಸ್. ರುದ್ರೇಗೌಡ ಹೇಳಿದರು.

ಮಾಚೇನಹಳ್ಳಿ ಕೈಗಾರಿಕಾ ಅಸೋಸಿಯೇಷನ್ ನೂತನ ಅಧ್ಯಕ್ಷ ಡಿ.ಜಿ.ಬೆನಕಪ್ಪ ಅವರ ಅಧಿಕಾರ ಸ್ವೀಕಾರ ಸಮಾರಂಭದಲ್ಲಿ ಮಾತನಾಡಿ, ಮಾಚೇನಹಳ್ಳಿ ಕೈಗಾರಿಕಾ ಸಂಸ್ಥೆ ಈಗಾಗಲೇ ಕೈಗಾರಿಕೆಗಳಿಗೆ ಪೂರಕವಾದ ಹಾಗೂ ಕಾರ್ಮಿಕರಿಗೆ ಮತ್ತು ಸದಸ್ಯರಿಗೆ ಬೇಕಾದ ಅಗತ್ಯವಾದ ಸಮಾಜಮುಖಿ ಕಾರ್ಯಗಳನ್ನು ಮಾಡುತ್ತಿದೆ ಎಂದು ತಿಳಿಸಿದರು.

» ಮಾಚೇನಹಳ್ಳಿ ಕೈಗಾರಿಕಾ ಅಸೋಸಿಯೇಷನ್ ಅಧ್ಯಕ್ಷರಾಗಿ ಡಿ.ಜಿ.ಬೆನಕಪ್ಪ ಅಧಿಕಾರ ಸ್ವೀಕಾರ

ಅಸೋಸಿಯೇಷನ್ ವತಿಯಿಂದ ಕೈಗಾರಿಕಾ ಸುರಕ್ಷತೆ ಬಗ್ಗೆ ಅಗತ್ಯವಾದ ಮಾಹಿತಿಗಳನ್ನು ನೀಡುವುದರ ಜೊತೆಗೆ ಅವರಿಗೆ ಕೌಶಲ್ಯ ಅಭಿವೃದ್ಧಿಯ ತರಬೇತಿಗಳನ್ನು ಸಹ ನೀಡುತ್ತಿದೆ. ಇದರಿಂದ ಸದಸ್ಯರ ಹಾಗೂ ಕಾರ್ಮಿಕರ ಸರ್ವತೋಮುಖ ಅಭಿವೃದ್ಧಿ ಆಗುತ್ತಿದೆ. ಸಂಸ್ಥೆ ಇನ್ನೂ ಎತ್ತರಕ್ಕೆ ಬೆಳೆದು ಸರ್ಕಾರದಿಂದ ಸಿಗುವ ಸೌಲಭ್ಯಗಳನ್ನು ಬಳಸಿಕೊಂಡು ರಸ್ತೆ, ನೀರು ಹಾಗೂ ಲೈಟ್, ಮೂಲಸೌಕರ್ಯ ಉತ್ತಮಗೊಳಿಸುವುದರ ಮುಖಾಂತರ ಕೈಗಾರಿಕಾ ವಸಹಾತು ರಾಜ್ಯದಲ್ಲಿ ಮಾದರಿಯಾಗಿ ಅಭಿವೃದ್ಧಿಯಾಗಬೇಕು ಎಂದರು.

ಇದೇ ಸಂದರ್ಭದಲ್ಲಿ ಮಾಜಿ ಅಧ್ಯಕ್ಷ ಎಂ.ರಾಜು ಅವರು ಮಾಚೇನಹಳ್ಳಿ ಕೈಗಾರಿಕಾ ಸಂಸ್ಥೆ ಬೆಳೆದು ಬಂದ ದಾರಿ ಹಾಗೂ ಆ ಸಂಸ್ಥೆಗೆ ದುಡಿದ ಹಲವಾರು ಮಾಜಿ ಅಧ್ಯಕ್ಷರ ಸಾಧನೆ ಮತ್ತು ಶ್ರಮದ ಬಗ್ಗೆ ವಿವರಿಸಿದರು. ಸಂಸ್ಥೆಯಿಂದ ಇನ್ನೂ ಹಲವಾರು ಅಭಿವೃದ್ಧಿ ಕಾರ್ಯಗಳು ಆಗುವುದು ಬಾಕಿ ಇದೆ. ಅವೆಲ್ಲವೂ ಸಕಾಲದಲ್ಲಿ ನೆರವೇರಬೇಕು ಎಂದರು.

ಮಾಜಿ ಅಧ್ಯಕ್ಷ ರಮೇಶ ಅವರು ತಮ್ಮ ಅಧಿಕಾರ ಅವಧಿಯಲ್ಲಿ ಮಾಡಿದ ಅಭಿವೃದ್ಧಿ ಕಾರ್ಯಗಳ ಬಗ್ಗೆ ಸವಿಸ್ತಾರವಾಗಿ ತಿಳಿಸಿದರು

ಡಿ.ಜಿ.ಬೆನಕಪ್ಪ ಅವರು ರಮೇಶ್ ಹೆಗಡೆ ಅವರಿಂದ ನೂತನ ತಂಡದೊಂದಿಗೆ ಅಧಿಕಾರ ಸ್ವೀಕರಿಸಿದರು. ಉಪಾಧ್ಯಕ್ಷರಾಗಿ ಚಂದ್ರಶೇಖರ್ ಎ.ಎಲ್., ಕಾರ್ಯದರ್ಶಿಯಾಗಿ ರಾಜೇಶ್. ಎಸ್.ಟಿ., ಖಜಾಂಚಿಯಾಗಿ ದಿನೇಶ್.ಹೆಚ್.ಎಲ್., ನಿರ್ದೇಶಕರಾಗಿ ನಂದನ್ ಮೂರ್ತಿ, ಸಂಜಯ್ ಪಾಟೀಲ್ ಎಂಜಿ, ಸಂತೋಷ್ ಎಂ, ಸೌರಭ ಡಿಕೆ, ಸುರೇಂದ್ರ ಎನ್., ವಿಶೇಷ ಆಹ್ವಾನಿತರಾಗಿ ಮದಕರ ಜೋಯಿಸ್, ಡಿಎಸ್ ಚಂದ್ರಶೇಖರ್, ಎಸ್ ರುದ್ರೇಗೌಡ, ಎಂ ಹಾಲಪ್ಪ ಅವರು ಅಧಿಕಾರ ವಹಿಸಿಕೊಂಡರು.

ಇದೇ ಸಂದರ್ಭದಲ್ಲಿ ನೂತನ ಅಧ್ಯಕ್ಷ ಡಿ.ಜಿ.ಬೆನಕಪ್ಪ ಅವರು ಮುಂದಿನ ಕಾರ್ಯಯೋಜನೆಗಳ ಬಗ್ಗೆ ವಿವರಿಸಿದರು. ಇದೇ ಸಂದರ್ಭದಲ್ಲಿ ಹೊಸ ಸಮಿತಿಯಿಂದ ಎಲ್ಲ ಮಾಜಿ ಅಧ್ಯಕ್ಷರಿಗೆ ಸನ್ಮಾನಿಸಿ ಗೌರವ ಸಮರ್ಪಿಸಲಾಯಿತು.

ಶಿವಮೊಗ್ಗ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಘದ ಅಧ್ಯಕ್ಷ ಬಿ.ಗೋಪಿನಾಥ್, ಕಾರ್ಯದರ್ಶಿ ಎ.ಎಂ.ಸುರೇಶ್, ಉಪಾಧ್ಯಕ್ಷ ಜಿ.ವಿಜಯಕುಮಾರ್, ಖಜಾಂಚಿ ವಿ.ಮನೋಹರ್, ಮಾಜಿ ಅಧ್ಯಕ್ಷ ಎನ್. ಗೋಪಿನಾಥ್, ನಿರ್ದೇಶಕರಾದ ಲಕ್ಷ್ಮೀದೇವಿ ಗೋಪಿನಾಥ್, ಪ್ರದೀಪ್ ಎಲಿ ಶುಭಕೋರಿದರು. ಡಿ.ಎಂ.ಶಂಕರಪ್ಪ, ಕಿರಣ್ ಮತ್ತಿತರರು ಉಪಸ್ಥಿತರಿದ್ದರು.

## ರೋಟರಿ ಕ್ಲಬ್ ಶಿವಮೊಗ್ಗ ಸೆಂಟ್ರಲ್‌ನಿಂದ ವಸ್ತ್ರದಾನ



**ಶಿವಮೊಗ್ಗ:** ದಾನಗಳು ಎಂದು ವಿಫಲವಾಗುವುದಿಲ್ಲ ಮತ್ತು ದಾನ ನಿಸ್ವಾರ್ಥವಾಗಿರುತ್ತದೆ. ದಾನ ಮತ್ತು ಧರ್ಮ ಒಂದಕ್ಕೊಂದು ಅವಿನಾಭಾವ ಸಂಬಂಧ ಹೊಂದಿದೆ, ನೀವು ಯಾವುದೇ ವಸ್ತುವನ್ನು ದಾನವಾಗಿ ನೀಡುವುದರಿಂದ ಸಮಾಜದಲ್ಲಿ ಏಕತೆ ಮತ್ತು ಶಕ್ತಿ ಹೆಚ್ಚುತದೆ ಎಂದು ರೋಟರಿ ಕ್ಲಬ್ ಶಿವಮೊಗ್ಗ ಸೆಂಟ್ರಲ್ ಅಧ್ಯಕ್ಷ ಕಿರಣ್ ಕುಮಾರ್.ಜಿ ಹೇಳಿದರು.

ರೋಟರಿ ಕ್ಲಬ್ ಶಿವಮೊಗ್ಗ ಸೆಂಟ್ರಲ್ ವತಿಯಿಂದ ಏರ್ಪಡಿಸಿದ್ದ ವಸ್ತ್ರದಾನ ಕಾರ್ಯಕ್ರಮದಲ್ಲಿ ಮಾತನಾಡಿ, ದಾನ ಮಾಡುವುದರಿಂದ ಆತ್ಮದ ಶುದ್ಧೀಕರಣ ಮತ್ತು ಸಂತೋಷ ಪಡೆಯಬಹುದು. ರಾಜು ಅವರು ಎರಡನೇ ಬಾರಿಗೆ ವಸ್ತ್ರದಾನ ಮಾಡುತ್ತಿದ್ದಾರೆ. ಕೈಗೆ ದಾನವೇ ಭೂಷಣ. ನಿರೀಕ್ಷೆ ಇಲ್ಲದೆ ಕೊಡುವುದು ಆರಾಧನೆ ಎಂದು ತಿಳಿಸಿದರು.

ವಸ್ತ್ರದಾನಕ್ಕೆ ತೂಕ ಮತ್ತು ಮಾಪನ ಇಲಾಖೆಯ ನಿರ್ದೇಶಕ ರಾಜು ಅವರು ನೆರವು ನೀಡಿದ್ದು, ರಾಜು ಅವರಂತಹ ದಾನಿಗಳು ಸಮಾಜದಲ್ಲಿ ಹೆಚ್ಚು ಹೆಚ್ಚು ಮುಂದೆ ಬರಬೇಕು. ರಾಜು ಅವರು ಮಾಡುತ್ತಿರುವ ಮಹತ್ಕಾರ್ಯ ಬೇರೆಯವರಿಗೆ ಸ್ಪೂರ್ತಿಯಾಗುತ್ತದೆ ಎಂದರು. ಕಾರ್ಯಕ್ರಮದಲ್ಲಿ 100ಕ್ಕೂ ಹೆಚ್ಚು ಜನರು ಕಾರ್ಯಕ್ರಮದ ಪ್ರಯೋಜನ ಪಡೆದುಕೊಂಡರು.

ಸೇವಾಕಾರ್ಯಕ್ಕೆ ನೆರವು ನೀಡಿದ ರಾಜು ಮಾತನಾಡಿ, ದಾನ ಮಾಡುವುದರಿಂದ ಆತ್ಮ ತೃಪ್ತಿ ಸಿಗುತ್ತದೆ. ದಾನವನ್ನು ಯಾವುದೇ ಪ್ರತಿಫಲಕ್ಷೆ ಇಲ್ಲದೆ ನೀಡಬೇಕು. ಮುಂದಿನ ದಿನಗಳಲ್ಲಿ ರೋಟರಿ ಸಂಸ್ಥೆಯೊಂದಿಗೆ ಇನ್ನು ಹೆಚ್ಚು ಹೆಚ್ಚು ಸಮಾಜಮುಖಿ ಕಾರ್ಯಕ್ರಮ ಮಾಡಬೇಕು ಎಂಬ ಮಹಾದಾಸೆ ಇದೆ ಎಂದು ಅನಿಸಿಕೆ ವ್ಯಕ್ತಪಡಿಸಿದರು. ಕಾರ್ಯಕ್ರಮದಲ್ಲಿ ರೋಟರಿ ಕ್ಲಬ್ ಶಿವಮೊಗ್ಗ ಸೆಂಟ್ರಲ್ ಕಾರ್ಯದರ್ಶಿ ಬಿ.ವಿ.ಈಶ್ವರ್, ಮಾಜಿ ಅಧ್ಯಕ್ಷ ರಮೇಶ್ ಎನ್ ಮತ್ತು ಕ್ಲಬ್ ಸದಸ್ಯರು ಉಪಸಿತರಿದ್ದರು.

## ಕೇಕ್ ಕತ್ತರಿಸಿ ಹಣ್ಣುಗಳನ್ನು ಹಂಚುವ ಮೂಲಕ ಕ್ರಿಸ್ಮಸ್ ಹಾಗೂ ಹೊಸ ವರ್ಷದ ಹಬ್ಬ ಆಚರಣೆ



**ಶಿವಮೊಗ್ಗ:** ನಗರದಲ್ಲಿರುವ ವಿದ್ಯಾನಗರದ ಬುದ್ಧಿಮಾಂದ್ಯ ಆಶಾಕಿರಣ ಮಕ್ಕಳ ಶಾಲೆಗೆ ಕ್ರೈಸ್ತ ಮುಖಂಡ ಹಾಗೂ ಜಿಲ್ಲಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಚಿನ್ನಪ್ಪರವರು ಪ್ರತಿವರ್ಷದಂತೆ ಈ ವರ್ಷವೂ ಕೇಕ್ ಕತ್ತರಿಸಿ ಹಣ್ಣುಗಳನ್ನು ಹಂಚುವ ಮೂಲಕ ಕ್ರಿಸ್ಮಸ್ ಹಾಗೂ ಹೊಸ ವರ್ಷದ ಹಬ್ಬವನ್ನು ಆಚರಿಸಲಾಯಿತು. ಈ ಸಂದರ್ಭದಲ್ಲಿ ಸೇಕ್ರೆಡ್ ಹಾರ್ಟ್ ಕೆಥಡ್ರಲ್ ನ ಪ್ರಧಾನ ಗುರುಗಳಾದ ಫಾದರ್ ಸ್ಟ್ಯಾನಿ ಡಿಸೋಜ, ಸಹಾಯಕ ಗುರುಗಳಾದ ಫಾದರ್ ಪೌಲ್ ಆನಂದ್, ಆಲಯ ಮೇಲ್ವಿಚಾರಕರಾದ ಶ್ರೀ ಚಂದ್ರಯ್ಯ, ನಾದನ್ ಎಂಪಿಎಂ, ರೋಷನ್, ಮಾರ್ಕ್ ಡಿಸೋಜಾ, ಆರೋಗ್ಯ ಸ್ವಾಮಿ PWD, ಸ್ನೇಹ ಮಹಿ ಸಂಘದ ಸದಸ್ಯರಾದ ಪವನ್, ರವಿ ಇನ್ನಿತರರು ಉಪಸ್ಥಿತರಿದ್ದರು

## ಸಾಲಿಗ್ರಾಮ ಗಣೇಶ್ ಶೆಣೈಯವರಿಗೆ "ಬಸವ ಭೂಷಣ" ರಾಜ್ಯ ಪ್ರಶಸ್ತಿ ಪ್ರದಾನ

**ದಾವಣಗೆರೆ:** ವಿಜಯಪುರದ ಬಸವನಬಾಗೇವಾಡಿಯ ಬಸವ ಜನ್ಮಭೂಮಿ ಪ್ರತಿಷ್ಠಾನದ ಆಶ್ರಯದಲ್ಲಿ ನಡೆಯುವ ರಾಜ್ಯ ಮಟ್ಟದ ವಚನ ವೈಭವ ಸಮಾರಂಭದಲ್ಲಿ ದಾವಣಗೆರೆಯ ಪತ್ರಿಕೋದ್ಯಮಿ,



ಛಾಯಾಗ್ರಹಣ ಸೇರಿದಂತೆ ಕಳೆದ ನಾಲ್ಕು ದಶಕಗಳಿಂದ ಕಲೆ, ಸಾಹಿತ್ಯ, ಸಂಗೀತ, ಯಕ್ಷಗಾನ ಹೀಗೆ ವಿವಿಧ ಕ್ಷೇತ್ರಗಳಲ್ಲಿ ಕಠಿಣ ಪರಿಶ್ರಮದಿಂದ ಸಾಧನೆ ಮಾಡುತ್ತಿರುವ ಸಾಲಿಗ್ರಾಮ ಗಣೇಶ್ ಶೆಣೈಯವರಿಗೆ "ಬಸವ ಭೂಷಣ" ರಾಜ್ಯ ಪ್ರಶಸ್ತಿಯನ್ನು ಡಿಸೆಂಬರ್ 25 ರಂದು ಬುಧವಾರ ವಿಜಯಪುರದ ಚೇತನಾ ಕಾಲೇಜು ಸಭಾಂಗಣದ ದಿವ್ಯ, ಭವ್ಯ ವೇದಿಕೆಯಲ್ಲಿ ಪ್ರದಾನ ಮಾಡಲಾಗುವುದೆಂದು ಪ್ರತಿಷ್ಠಾನದ ಸಂಚಾಲಕರಾದ ಮುರುಗೇಶ್ ಸಂಗಮ ತಿಳಿಸಿದ್ದಾರೆ. ಕಲಾಕುಂಚ, ಕಾವ್ಯಕುಂಚ, ಗಾನಕುಂಚ, ಯಕ್ಷರಂಗ, ಸಿನಿಮಾಸಿರಿ, ಕರ್ನಾಟಕ ಸಗಮ ಸಂಗೀತ ಪರಿಷತ್, ಕನ್ನಡ ಸಾಹಿತ್ಯ ಪರಿಷತ್, ಜಿಲ್ಲಾ ಛಾಯಾಗ್ರಾಹಕ ಸಂಘ, ಶ್ರೀ ಗಾಯತ್ರಿ ಪರಿವಾರ, ಸಮಾನ ಮನಸ್ಕರ ವೇದಿಕೆ ಸೇರಿದಂತೆ ವಿವಿಧ ಸಂಘಟನೆಗಳ ಸರ್ವ ಸದಸ್ಯರು, ಪದಾಧಿಕಾರಿಗಳು ಶೆಣೈಯವರಿಗೆ ಅಭಿಮಾನದಿಂದ ಅಭಿನಂದನೆ ಸಲ್ಲಿಸಿದ್ದಾರೆ.

## ವಿದ್ಯಾರ್ಥಿಗಳಿಂದ ಶುಲ್ಕ ಮರುಪಾವತಿಗಾಗಿ ಅರ್ಜಿ ಸಲ್ಲಿಸಲು ಅವಧಿ ವಿಸ್ತರಣೆ

**ಬೆಂ.ಗ್ರಾ. ಜಿಲ್ಲೆ:** ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ 2024-25ನೇ ಸಾಲಿಗೆ ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಂದ "ಶುಲ್ಕ ಮರುಪಾವತಿ" ಗಾಗಿ ಆನ್ಲೈನ್ ಮೂಲಕ ಅರ್ಜಿ ಸಲ್ಲಿಸಲು 2025 ಫೆಬ್ರವರಿ 15 ರ ವರೆಗೆ ಅವಧಿಯನ್ನು ವಿಸ್ತರಿಸಲಾಗಿದೆ. ರಾಜ್ಯ ವಿದ್ಯಾರ್ಥಿವೇತನ ವೆಬ್ ಸೈಟ್ https://ssp.postmatric.karnataka.gov.in ನಲ್ಲಿ ಅರ್ಜಿಯನ್ನು ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಇಲಾಖೆಯ ಸಹಾಯವಾಣಿ ಸಂಖ್ಯೆ: 8050770005 ಅಥವಾ ಇ-ಮೇಲ್ ವಿಳಾಸ: bcwdhelplinegmail.com ಅನ್ನು ಸಂಪರ್ಕಿಸಬಹುದಾಗಿದೆ.

## ಗ್ರಾಮ ಆಡಳಿತಾಧಿಕಾರಿ ತಾತ್ಕಾಲಿಕ ಆಯ್ಕೆ ಪಟ್ಟಿ ಪ್ರಕಟ

### ಜಿಲ್ಲೆಯ 683 ಅರ್ಹ ಅಭ್ಯರ್ಥಿಗಳು: ಜಿಲ್ಲಾಧಿಕಾರಿ ಡಾ.ಎನ್ ಶಿವಶಂಕರ



**ಬೆಂ.ಗ್ರಾ.ಜಿಲ್ಲೆ:** ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಕಂದಾಯ ಇಲಾಖೆಯಲ್ಲಿ ಖಾಲಿ ಇರುವ ಗ್ರಾಮ ಆಡಳಿತಾಧಿಕಾರಿ ಹುದ್ದೆಗಳ ಪೈಕಿ 34 ಗ್ರಾಮ ಆಡಳಿತಾಧಿಕಾರಿ ಹುದ್ದೆಗಳಿಗೆ ಭರ್ತಿ ಮಾಡಿಕೊಳ್ಳಲು ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಮೂಲಕ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಿ ದಿನಾಂಕ 2024 ರ ಅಕ್ಟೋಬರ್ 27 ರಂದು ಸ್ಪರ್ಧಾತ್ಮಕ ಪರೀಕ್ಷೆ ನಡೆಸಲಾಗಿದೆ.

ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಅಭ್ಯರ್ಥಿಗಳು ಪಡೆದ ಅಂಕಗಳ ತಾತ್ಕಾಲಿಕ ಅಂಕ ಪಟ್ಟಿಯನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ವೆಬ್ಸೈಟ್ ತಿತಿತಿ://ಇಜಚಿ.ಇಚಿಡಿ.ಟಿಛಿ.ಟಿ ನಲ್ಲಿ ದಿನಾಂಕ 2024 ರ ನವೆಂಬರ್ 27 ರಂದು ಪ್ರಕಟಿಸಿ ಆಕ್ಷೇಪಣೆಗಳನ್ನು ಆಹ್ವಾನಿಸಿ ನಿಗದಿತ ದಿನಾಂಕದವರೆಗೆ ಅಭ್ಯರ್ಥಿಗಳಿಂದ ಸ್ವೀಕೃತವಾದ ಆಕ್ಷೇಪಣೆಗಳನ್ನು ಪರಿಶೀಲಿಸಿ, ಅರ್ಹರಾದ ಅಭ್ಯರ್ಥಿಗಳ ಅಂತಿಮ ಅಂಕಪಟ್ಟಿಯನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ವೆಬ್ಸೈಟ್ ನಲ್ಲಿ ಪ್ರಕಟಿಸಲಾಗಿದೆ.

ಬೆಂಗಳೂರು ಗ್ರಾಮಾಂತರ ಜಿಲ್ಲೆಗೆ ಅರ್ಹರಾದ ಒಟ್ಟು 683 ಅಭ್ಯರ್ಥಿಗಳ ಅಂತಿಮ ಅಂಕಪಟ್ಟಿ ವಿವರ ಪ್ರಕಟಿಸಲಾಗಿದ್ದು ಈ ಕೆಳಕಂಡ ವೇಳಾಪಟ್ಟಿಯಂತೆ ಕರ್ನಾಟಕ ನಾಗರೀಕ ಸೇವಾ ನೇರ ನೇಮಕಾತಿ ಸಾಮಾನ್ಯ ಪ್ರಕ್ರಿಯೆಯನ್ನು ಪೂರ್ಣಗೊಳಿಸಲಾಗುವುದು.

2024 ಡಿಸೆಂಬರ್ 20 ರಿಂದ 24 ರವರೆಗೆ ಅಧಿಸೂಚನೆಯಲ್ಲಿ ನಿಗದಿಯಾಗಿರುವ ಹುದ್ದೆಗಳ ಎದುರಾಗಿ 1:3 ರ ಅನುಪಾತದಲ್ಲಿ ಅಭ್ಯರ್ಥಿಗಳ ಪಟ್ಟಿಯನ್ನು ದಾಖಲೆ ಪರಿಶೀಲನೆಗೆ ಪ್ರಕಟಿಸಲಾಗುವುದು.

ದಿನಾಂಕ 2025 ರ ಜನವರಿ 02 ರಿಂದ 2025 ಜನವರಿ 10 ರವರೆಗೆ 1:3 ಅನುಪಾತದಲ್ಲಿ ಅಭ್ಯರ್ಥಿಗಳ ದಾಖಲೆಗಳನ್ನು ಪರಿಶೀಲಿಸುವುದು ಮತ್ತು ವಿಕಲಚೇತನ ಅಭ್ಯರ್ಥಿಗಳ ದಾಖಲೆಗಳನ್ನು ಪರಿಶೀಲಿಸುವುದು ಹಾಗೂ ವಿಕಲಚೇತನ ಅಭ್ಯರ್ಥಿಗಳಿಗೆ ವೈದ್ಯಕೀಯ ಪರೀಕ್ಷೆ ನಡೆಸಲಾಗುವುದು.

ದಿನಾಂಕ 2025 ರ ಜನವರಿ 15 ರಂದು ತಾತ್ಕಾಲಿಕ 1:1 ಆಯ್ಕೆ ಪಟ್ಟಿ ಮತ್ತು ಹೆಚ್ಚುರಿ ಆಯ್ಕೆ ಪಟ್ಟಿ ಪ್ರಕಟಿಸಲಾಗುವುದು. 2025 ರ ಜನವರಿ 16 ರಿಂದ 23 ರವರೆಗೆ ತಾತ್ಕಾಲಿಕ ಆಯ್ಕೆ ಪಟ್ಟಿ ಮತ್ತು ಹೆಚ್ಚುವರಿ ಆಯ್ಕೆ ಪಟ್ಟಿಗೆ ಆಕ್ಷೇಪಣೆಗಳನ್ನು ಆಹ್ವಾನಿಸಲಾಗುವುದು.

2025 ಜನವರಿ 27 ರಂದು ಅಂತಿಮ ಆಯ್ಕೆ ಪಟ್ಟಿ ಮತ್ತು ಹೆಚ್ಚುವರಿ ಆಯ್ಕೆ ಪಟ್ಟಿಯನ್ನು ಪ್ರಕಟಿಸಲಾಗುವುದು. ಅಭ್ಯರ್ಥಿಗಳು ಹೆಚ್ಚಿನ ವಿವರಗಳಿಗಾಗಿ ರಜಾ ದಿನಗಳನ್ನು ಹೊರತುಪಡಿಸಿ ಕಚೇರಿ ವೇಳೆಯಲ್ಲಿ ಬೆಂಗಳೂರು ಗ್ರಾಮಾಂತರ ಜಿಲ್ಲಾಧಿಕಾರಿಗಳ ಕಚೇರಿಯನ್ನು ಸಂಪರ್ಕಿಸಬಹುದು.

ಗ್ರಾಮ ಆಡಳಿತ ಅಧಿಕಾರ ಹುದ್ದೆಗಳ ನೇಮಕಾತಿ ನಡೆಸುವ ಪ್ರತಿ ಹಂತದ ಪ್ರಕ್ರಿಯೆಯು ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಜಿಲ್ಲಾಧಿಕಾರಿಗಳ ಕಚೇರಿಯ ಸೂಚನಾ ಫಲಕದಲ್ಲಿ ಹಾಗೂ ಅಂತರ್ಜಾಲದಲ್ಲಿ ಪ್ರಚುರ ಪಡಿಸಲಾಗುವುದು ಎಂದು ಗ್ರಾಮ ಲೆಕ್ಕಾಧಿಕಾರಿಗಳ ನೇಮಕಾತಿ ಮತ್ತು ಆಯ್ಕೆ ಪ್ರಾಧಿಕಾರದ ಅಧ್ಯಕ್ಷರು ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲಾಧಿಕಾರಿ ಡಾ. ಎನ್. ಶಿವಶಂಕರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಅವರ ವಿರುದ್ಧದ ಸಿ.ಟಿ.ರವಿ ಹೇಳಿಕೆಗೆ ಮಹಿಳಾ ನಾಯಕಿ ಪಲ್ಲವಿ ಖಂಡನೆ



**ಮಂಡ್ಯ:** ಬೆಳಗಾವಿಯ ಸುವರ್ಣಸೌಧದಲ್ಲಿ ನಡೆಯುತ್ತಿರುವ ಚಳಿಗಾಲ ಅಧಿವೇಶನದಲ್ಲಿ ಗುರುವಾರ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಅವರ ಬಗ್ಗೆ ವಿಧಾನ ಪರಿಷತ್ ಸದಸ್ಯ ಸಿ.ಟಿ.ರವಿ ನೀಡಿರುವ ಆಕ್ಷೇಪಾರ್ಹ ಹೇಳಿಕೆಯನ್ನು ಎಪಿಎಂಸಿ ಮಾಜಿ ಅಧ್ಯಕ್ಷೆ ಹಾಗೂ ಸಚಿವರ ಆಪ್ತೆಯಾದ ಪಲ್ಲವಿ ಖಂಡಿಸಿದ್ದಾರೆ.

ವಿಧಾನ ಪರಿಷತ್‌ನಲ್ಲಿ ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಬಗ್ಗೆ ಕೇಂದ್ರ ಗೃಹ ಸಚಿವ ಅಮಿತ್ ಶಾ ನೀಡಿರುವ ವಿವಾದಾತ್ಮಕ ಹೇಳಿಕೆ ಬಗ್ಗೆ ಸದನದಲ್ಲಿ ಹೋರಾಟ ನಡೆಸುತ್ತಿದ್ದ ವೇಳೆ ಲಕ್ಷ್ಮಿ ಅವರ ವಿರುದ್ಧ ಬಿಜೆಪಿ ಹಿರಿಯ ಮುಖಂಡರು ಎನಿಸಿರುವ ಸಿ.ಟಿ.ರವಿ ಕೊಟ್ಟಿರುವ ಲಘು ಹೇಳಿಕೆ ಮಹಿಳಾ ಕುಲಕ್ಕೆ ಅಪಮಾನ ಎಂದು ಟೀಕಿಸಿದ್ದಾರೆ.

ಬಿಜೆಪಿ ಅವರಿಗೆ ಈ ಹಿಂದಿನಿಂದಲೂ ಮಹಿಳೆಯರ ಬಗ್ಗೆ ಗೌರವವಿಲ್ಲ. ಇದು ಹಲವು ಸಂದರ್ಭದಲ್ಲಿ ಸಾಬೀತಾಗಿದ್ದು, ಇದೀಗ ಮತ್ತೊಮ್ಮೆ ರುಜುವಾತಾಗಿದೆ. ಸಭಾಪತಿಗಳು ಈ ಬಗ್ಗೆ ಪರಿಶೀಲನೆ ಸಹ ನಡೆಸಿದ್ದು, ಸಿ.ಟಿ.ರವಿ ಅವರನ್ನು ಕೂಡಲೇ ಬಂಧಿಸಿ ಅವರ ವಿರುದ್ಧ ಸೂಕ್ತ ರೀತಿಯ ಕಾನೂನು ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿದ್ದಾರೆ.

ತಾನೊಬ್ಬ ಮಹಾನ್ ಮೇಧಾವಿ, ವಾಗ್ಮಿ ಎನ್ನುವ ಸಿ.ಟಿ.ರವಿ, ಸಚಿವೆಯೂ ಆಗಿರುವ ಒಬ್ಬ ಮಹಿಳೆ ಬಗ್ಗೆ ಈ ರೀತಿ ಮಾತನಾಡುವುದು ಸರಿಯಲ್ಲ. ಈ ಬಗ್ಗೆ ಪಕ್ಷಾತೀತವಾಗಿ ಖಂಡನೆಯಾಗಬೇಕು ಎಂದು ಕಾಂಗ್ರೆಸ್ ಮಹಿಳಾ ಮುಖಂಡೆ ಪಲ್ಲವಿ ಖಂಡಿಸಿದ್ದಾರೆ.

## ಪ್ರಶಾಸನ್ ಗಾಂವ್ ಕೀ ಓರ್ ವಿಶೇಷ ಆಂದೋಲನ

**ಬೆಂ.ಗ್ರಾ. ಜಿಲ್ಲೆ:** 'ಪ್ರಶಾಸನ್ ಗಾಂವ್ ಕಿ ಓರ್' ಅಭಿಯಾನದ ಡಿ.19 ರಿಂದ 24 ರವರೆಗೆ ಉತ್ತಮ ಆಡಳಿತ ವಾರದ ಕಾರ್ಯಕ್ರಮ ಹಮ್ಮಿಕೊಂಡಿದ್ದು ಈ ಸಂದರ್ಭದಲ್ಲಿ ಜಿಲ್ಲಾ, ತಾಲ್ಲೂಕು, ಗ್ರಾಮ ಮಟ್ಟದ ಎಲ್ಲಾ ಅಧಿಕಾರಿಗಳು ಕಚೇರಿಗಳಲ್ಲಿ ಹಾಜರಿದ್ದು ಸಾರ್ವಜನಿಕರ ಅಹವಾಲುಗಳನ್ನು ಸ್ವೀಕಾರ ಮಾಡಿ ತ್ವರಿತವಾಗಿ ವಿಲೇವಾರಿ ಮಾಡಲು ಕ್ರಮ ಕೈಗೊಳ್ಳುವರು.

» ವಿವಿಧ ಯೋಜನೆಗಳ ಸೌಲಭ್ಯ ಒದಗಿಸಲು ಕ್ರಮ ವಹಿಸಿ

ಇದರ ಅಂಗವಾಗಿ ಡಿಸೆಂಬರ್ 21 ರ ಶನಿವಾರದಂದು ಜಿಲ್ಲೆಯ ಎಲ್ಲಾ ಸರ್ಕಾರಿ ಕಚೇರಿಗಳಲ್ಲಿ ವಿಶೇಷ ಆಂದೋಲನ ಹಮ್ಮಿಕೊಳ್ಳಲಾಗಿದೆ. ಜಿಲ್ಲಾ ಮಟ್ಟದ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳು ಕಚೇರಿಗಳಲ್ಲಿ ಹಾಜರಿದ್ದು ವಿಶೇಷ ಆಂದೋಲನದ ರೀತಿಯಲ್ಲಿ ಸಾರ್ವಜನಿಕರಿಗೆ ಸೇವೆ ನೀಡುವರು.

ಸಾರ್ವಜನಿಕರು ಈ ವಿಶೇಷ ಆಂದೋಲನದಲ್ಲಿ ಭಾಗಿಯಾಗಿ ಕುಂದುಕೊರತೆಗಳ ಅಹವಾಲುಗಳನ್ನು ಸಲ್ಲಿಸಿ ಕಾರ್ಯಕ್ರಮದ ಸದುಪಯೋಗ ಪಡಿಸಿಕೊಳ್ಳಲು ಜಿಲ್ಲಾಧಿಕಾರಿ ಡಾ. ಎನ್ ಶಿವಶಂಕರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮುಸ್ಸಂಜೆ



## ಅದ್ದೂರಿ ಕನ್ನಡ ರಾಜ್ಯೋತ್ಸವ ಆಚರಣೆ

**ಶಿವಮೊಗ್ಗ:** ಡಿ.21ನೇ ಶನಿವಾರದಂದು ಅಶೋಕ್ ನಗರ ಮುಖ್ಯ ರಸ್ತೆಯಲ್ಲಿ ಅದ್ದೂರಿ ಕನ್ನಡ ರಾಜ್ಯೋತ್ಸವ ಆಚರಿಸಲಾಗುತ್ತಿದೆ ಎಂದು ಕರವೇ ಸ್ವಾಭಿಮಾನಿ ಬಣ ಜಿಲ್ಲಾಧ್ಯಕ್ಷರು ಕಿರಣ್ ಕುಮಾರ್.ಎಚ್.ಎಸ್ ತಿಳಿಸಿದರು.



ಅಂದು ಭುವನಗಿರಿಯಿಂದ ಕನ್ನಡ ಜ್ಯೋತಿಯನ್ನು ತಂದು ಕಾರ್ಯಕ್ರಮ ಉದ್ಘಾಟನೆ ಮಾಡಲಾಗುವುದು, ಈ ಕಾರ್ಯಕ್ರಮದಲ್ಲಿ ಉದ್ಘಾಟನೆಯನ್ನು ರಾಜ್ಯಾಧ್ಯಕ್ಷರಾದ ಪಿ ಕೃಷ್ಣೆಗೌಡರು. ಗಾರಾ ಶ್ರೀನಿವಾಸ್ ಹಾಗೂ ಟಿ.ಕೆ.ಅನಿಲ್ ಕುಮಾರ್ ಉದ್ಘಾಟಿಸಲಿದ್ದಾರೆ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಬಿ.ವೈ.ರಾಘವೇಂದ್ರ ಸಂಸದರು ಶಾಸಕರಾದ ಚನ್ನಬಸಪ್ಪ ಜೆಡಿಎಸ್‌ನ ರಾಜ್ಯ ಉಪಾಧ್ಯಕ್ಷರು ಹಾಗೂ ಮಾಜಿ ಶಾಸಕರಾದ ಕೆ.ಬಿ.ಪ್ರಸನ್ನ ಕುಮಾರ್ ಕಾಂಗ್ರೆಸ್ ಮುಖಂಡರಾದ ಎಮ್ ಶ್ರೀಕಾಂತ್ ಹಾಗೂ ಸೂರ್ಯನರ್ಸಿಂಗ್ ಕಾಲೇಜ್ ಟಿ.ನೇತ್ರಾವತಿ ಕ್ಷೇತ್ರ ಶಿಕ್ಷಣಾಧಿಕಾರಿಗಳು ಶಾಲಾ ಶಿಕ್ಷಣ ಇಲಾಖೆಯ ರಮೇಶ್, ವಿಶೇಷ ಆಹ್ವಾನಿಕರಾಗಿ ರಘುರಾಜ್ ಮಲ್ನಾಡ್ ಭಾಗವಹಿಸಲಿದ್ದಾರೆ ಹಾಪ್ ಕಾಮ್ಸ್ ಅಧ್ಯಕ್ಷರಾದ ವಿಜಯಕುಮಾರ್ ದನಿ ಹಾಗೂ ರೋಟರಿ ಸೆಂಟ್ರಲ್ ಅಧ್ಯಕ್ಷರಾದ ಕಿರಣ್ ಕುಮಾರ್ ಜಿ. ಕಾರ್ಯಕ್ರಮದಲ್ಲಿ ಸೇವ ರತ್ನ ಪ್ರಶಸ್ತಿಯನ್ನು ನೀಡಲಾಗುತ್ತಿದ್ದು ಹಾಗೂ ಕನ್ನಡದಲ್ಲಿ ಅತಿ ಹೆಚ್ಚು ಅಂಕವನ್ನು ತೆಗೆದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಸನ್ಮಾನಿಸಿ ಗೌರವಿಸಲಾಗುವುದು. ಈ ಎಲ್ಲಾ ಕಾರ್ಯಕ್ರಮದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕರು ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸಿಕೊಡುವಂತೆ ಪ್ರಕಟಣೆಯಲ್ಲಿ ಮನವಿ ಮಾಡಿದ್ದಾರೆ.

## ಮಹಿಳೆಯರು ಮತ್ತು ಮಕ್ಕಳ ಮೇಲೆನ ಲೈಂಗಿಕ ದೌರ್ಜನ್ಯ ತಡೆಗಟ್ಟಲು ಕಾನೂನು ಅರಿವು ಅವಶ್ಯಕವಾಗಿದೆ

**ಚಿಕ್ಕಮಗಳೂರು:** ಮಹಿಳೆಯರು ಮತ್ತು ಮಕ್ಕಳ ಮೇಲೆನ ಲೈಂಗಿಕ ದೌರ್ಜನ್ಯ ತಡೆಗಟ್ಟಲು ಕಾನೂನು ಅರಿವು ಅವಶ್ಯಕವಾಗಿದೆ. ಪ್ರತಿಯೊಬ್ಬರು ಕಾನೂನು ತಿಳಿದು ಸಬಲರಾಗಿ ಎಂದು ಜಿಲ್ಲಾ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ಮಹಾಂತೇಶ್ ಭಜಂತ್ರಿ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಜಿಲ್ಲಾ ಮಕ್ಕಳ ರಕ್ಷಣ ಘಟಕದ ವತಿಯಿಂದ ನಗರದ ತಾಲ್ಲೂಕು ಪಂಚಾಯತಿ ಸಾಮರ್ಥ್ಯ ಸೌಧ ಸಭಾಂಗಣದಲ್ಲಿ ಆಯೋಜಿಸಿದ್ದ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಎಲ್ಲಾ ತಾಲ್ಲೂಕು ಮಟ್ಟದ ಅಧಿಕಾರಿಗಳು ಮತ್ತು ಎಲ್ಲಾ ವಸತಿ ನಿಲಯಗಳ ನಿಲಯ ಪಾಲಕರುಗಳಿಗೆ ಮಹಿಳೆಯರು ಮತ್ತು ಮಕ್ಕಳ ಸಂರಕ್ಷಣೆಗೆ ಸಂಬಂಧಿಸಿದ ಕಾನೂನುಗಳ ಕುರಿತು ಮಾಹಿತಿ ಕಾರ್ಯಾಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಸಮಾಜದಲ್ಲಿ ಪ್ರತಿಯೊಬ್ಬರಿಗೂ ಸ್ವತಂತ್ರ್ಯವಾಗಿ ಜೀವಿಸುವ ಹಕ್ಕಿದೆ. ಯಾವುದೇ ವ್ಯಕ್ತಿ ಮತ್ತೊಬ್ಬ ವ್ಯಕ್ತಿಯ ಸ್ವಾತಂತ್ರ್ಯ ಮತ್ತು ಹಕ್ಕನ್ನು ಕಸಿದು ಕೊಂಡಲ್ಲಿ ಅವುಗಳ ರಕ್ಷಣೆ ಹಾಗೂ ಅವರ ಪೋಷಣೆಗೆ ಅನೇಕ ಸಂವಿಧಾನಾತ್ಮಕ ಕಾಯ್ದೆ ಕಾನೂನುಗಳಿವೆ ಇವುಗಳನ್ನು ತಿಳಿದು ತಮಗೆ ದೊರಕಬೇಕಾಗಿರುವ ಸೌಲಭ್ಯಗಳನ್ನು ಸದುಪಯೋಗ ಪಡಿಸಿಲೊಳ್ಳಬೇಕು ಎಂದರು.



ಯಾವುದೇ ಸರ್ಕಾರಿ ಅಥವಾ ಖಾಸಗಿ ಕಛೇರಿಗಳಲ್ಲಿ ಕರ್ತವ್ಯ ನಿರ್ವಹಿಸುತ್ತುರುವ 10ಕ್ಕಿಂತ ಹೆಚ್ಚಿನ ಸಿಬ್ಬಂದಿಗಳು ಇದ್ದಲ್ಲಿ ಕಡ್ಡಾಯವಾಗಿ ಆಂತರಿಕ ದೂರು ನಿರ್ವಹಣಾ ಕಮಿಟಿಯನ್ನು ರಚಿಸಿಕೊಳ್ಳಬೇಕು. ಕೆಲಸದ ಸ್ಥಳದಲ್ಲಿ ಮಹಿಳೆಯರ ಮೇಲೆ ನಡೆಯುವಂತಹ ಲೈಂಗಿಕ ದೌರ್ಜನ್ಯವನ್ನು ತಡೆಗಟ್ಟಲು ಇದು ಸಹಕಾರಿಯಾಗಿದೆ ಎಂದ ಅವರು ಮಹಿಳೆಯರು ಮತ್ತು ಮಕ್ಕಳ ಮೇಲೆ ನಡೆಯುತ್ತಿರುವ ದೌರ್ಜನ್ಯವನ್ನು ತಡೆಯುವ ಕಾಯ್ದೆಗಳು, ಪೋಕ್ಸೋ ಕಾಯ್ದೆ, ಬಾಲ ನ್ಯಾಯ ಕಾಯ್ದೆ, ಬಾಲ ಕಾರ್ಮಿಕರ ರಕ್ಷಣೆ ಮತ್ತು, ಮಕ್ಕಳ ಸಹಾಯವಾಣಿ–1098 ರ ಕುರಿತು ಮಾಹಿತಿ ನೀಡಿದರು. ಕಡ್ಡಾಯವಾಗಿ ಮಕ್ಕಳಾ ರಕ್ಷಣಾ ಸಮಿತಿ ರಚನೆ ಮಾಡಿಕೊಳ್ಳಬೇಕು. ವಸತಿ ನಿಲಯದ ಮಕ್ಕಳು ಸಹ ಕೆಲವು ದುಶ್ಚಟಗಳಿಗೆ ದಾಸರಾಗುವ ಸಂಭವ ಹೆಚ್ಚಿರುವುದರಿಂದ ಪ್ರತಿಯೊಂದು ವಿದ್ಯಾರ್ಥಿಯ ಮೇಲೆ ವಿಷೇಶ ನಿಗಾ ಇಡುವುದು ಅವಶ್ಯಕತೆ. ಒಂದು ವೇಳೆ ಅಂತಹ ಮಕ್ಕಳು ಕಂಡು ಬಂದಲ್ಲಿ ಆಪ್ತಸಮಾಲೋಚನೆಗೆ ಒಳಪಡಿಸಬೇಕು ಎಂದು ತಿಳಿಸಿದ ಅವರು ಮಹಿಳಾ ಸಹಾಯವಾಣಿ–181ರ ಬಳಸಿಕೊಳ್ಳುವಂತೆ ಮತ್ತು ವರದಕ್ಷಿಣೆ ನಿಷೇಧ ಮುಂತಾದ ಇಲಾಖಾ ಯೋಜನೆಗಳ ಕುರಿತು ಮಾಹಿತಿಯನ್ನು ನೀಡಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು ಮಂಜುನಾಥ್, ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಎಸ್ ಆರ್ ಬಡಿಗೇರ್ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಅಧಿಕಾರಿ ಸಂತೋಷ ಡಿ, ಸೇರಿದಂತೆ ತಾಲ್ಲೂಕು ಮಟ್ಟದ ಅಧಿಕಾರಿಗಳು ಮತ್ತು ವಸತಿ ನಿಲಯಗಳ ನಿಲಯ ಪಾಲಕರು ಉಪಸ್ಥಿತರಿದ್ದರು.

## ನೇಮಕ



**ಶಿವಮೊಗ್ಗ:** ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ನಿವೃತ್ತ ಅಧಿಕಾರಿ ಹಾಗೂ ಅನೇಕ ಸಹಕಾರಿ ಮತ್ತು ಸಂಘ ಸಂಸ್ಥೆಗಳ ಪದಾಧಿಕಾರಿಯಾಗಿ ಸೇವೆ ಸಲ್ಲಿಸುತ್ತಿರುವ ಹೆಚ್.ಎನ್. ಛಾಯಾಪತಿ ಶಿವಮೊಗ್ಗ ಇವರನ್ನು ಬ್ರಾಹ್ಮಿನ್ ಆರ್ಗನೈಸೇಶನ್ ಆಫ್ ಇಂಡಿಯಾ ಸಂಘಟನೆಯ ಕರ್ನಾಟಕ ರಾಜ್ಯ ಸಮಿತಿಗೆ ನಿರ್ದೇಶಕರನ್ನಾಗಿ ನೇಮಕ ಮಾಡಲಾಗಿದೆ. ಈ ನೇಮಕ ಆದೇಶವನ್ನು ಕರ್ನಾಟಕ ರಾಜ್ಯ ಘಟಕದ ಅಧ್ಯಕ್ಷ ರವೀಂದ್ರ ಕುಲಕರ್ಣಿಯವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜ.5 ರಂದು ದಾವಣಗೆರೆಯಲ್ಲಿ ನಡೆಯಲಿರುವ ಭಕ್ತ ಕನಕದಾಸ ಜಯಂತ್ಯೋತ್ಸವ ಯಶಸ್ವಿಗೆ ಕೈಜೋಡಿಸಿ



**ಜಗಳೂರು:** ದಾವಣಗೆರೆಯಲ್ಲಿ ಜ.5 ರಂದು ನಡೆಯಲಿರುವ 537 ನೇ ಜಯಂತ್ಯೋತ್ಸವ ಕಾರ್ಯಕ್ರಮಕ್ಕೆ ಅಧಿಕ ಸಂಖ್ಯೆಯಲ್ಲಿ ಆಗಮಿಸಿ ಯಶಸ್ವಿಗೊಳಿಸುವಂತೆ ಕುರುಬ ಸಮಾಜದ ಮುಖಂಡ ಮಾಜಿಮೇಯರ್ ಗೋಣೆಪ್ಪ ಕರೆ ನೀಡಿದರು.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಅವರು ಮಾತನಾಡಿದರು.

ತಾಲೂಕಿನಾದ್ಯಂತ ಪ್ರವಾಸ ಕೈಗೊಂಡು ಕುರುಬ ಸಮಾಜದ ಬಂಧುಗಳಿಗೆ ಆಹ್ವಾನಿಸಲಾಗಿದೆ. ಕಾರ್ಯಕ್ರಮಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸೇರಿದಂತೆ ವಿವಿಧ ಗಣ್ಯರುಗಳು ಭಾಗವಹಿಸಲಿದ್ದಾರೆ. ಶೋಷಿತ ಸಮುದಾಯಗಳ ಜನಜಾಗೃತಿ ಸಮಾವೇಶ ಜರುಗಲಿದೆ ಎಂದು ಹೇಳಿದರು.

ಕೆಪಿಸಿಸಿ ಎಸ್ ಟಿ ಘಟಕದ ರಾಜ್ಯ ಮುಖಂಡ ಕೆಪಿ ಪಾಲಯ್ಯ ಮಾತನಾಡಿ, ಶೋಷಿತ ವರ್ಗಗಳು ಜಾಗೃತರಾಗಬೇಕಿದೆ.ಭಕ್ತ ಕನಕದಾಸರು ಜಾತಿಗೆ ಸೀಮಿತವಲ್ಲ ಪ್ರತಿಯೊಬ್ಬರೂ ದಾರ್ಶನಿಕ ಆದರ್ಶಗಳನ್ನು ಜೀವನದಲ್ಲಿ ಮೈಗೂಡಿಸಿಕೊಳ್ಳಬೇಕು ಎಂದು ತಿಳಿಸಿದರು.

ಸಂದರ್ಭದಲ್ಲಿ ತಾಲೂಕು ಕುರುಬರ ಸಂಘದ ಅಧ್ಯಕ್ಷರಾದ ಬಿಳಿಚೋಡು ಒಮ್ಮಣ್ಣ, ಎಸ್ ಟಿ ಘಟಕದ ರಾಜ್ಯಾಧ್ಯಕ್ಷರಾದ ಕೆಪಿ ಪಾಲಯ್ಯ, ಮದ್ರಳ್ಳಿ ರೇವಣಸಿದ್ದಪ್ಪ, ಎಸ್ ಎಲ್ ಆನಂದಪ್ಪ, ಹದಡಿ ಜಿ ಸಿ ನಿಂಗಪ್ಪ ಹಾಲೇಕಲ್ಲು ಎಸ್ ಟಿ ಅರವಿಂದ್ ಇಟಿಗುಡಿ ಮಂಜುನಾಥ್ ಬಿ ಲಿಂಗರಾಜ್ ಕೆ ರೇವಣ್ಣ ಹಾಲೇಕಲ್ಲು ಗೋಣೆಪ್ಪ ಮಂಜು ಕೊಗ್ಗನೂರು, ವಿನಯ್ ಜೋಗಪ್ಪರ ನವೀನ್ ಕುಮಾರ್ ಬಿಎಚ್ ಸೇರಿದಂತೆ ಇದ್ದರು.

## ಸಾರ್ವಜನಿಕರ ಕುಂದು ಕೊರತೆ ಪರಿಹಾರಕ್ಕೆ ವಿಶೇಷ ಶಿಬಿರ ಆಯೋಜನೆ

**ಚಿತ್ರದುರ್ಗ:** ಭಾರತ ಸರ್ಕಾರದ ಆಡಳಿತ ಸುಧಾರಣೆಗಳು ಮತ್ತು ಸಾರ್ವಜನಿಕ ಕುಂದುಕೊರತೆಗಳ ಇಲಾಖೆ ನಿರ್ದೇಶನದಂತೆ 2024ನೇ ಡಿಸೆಂಬರ್ 19 ರಿಂದ 24 ರ ಅವಧಿಯಲ್ಲಿ "ಪುಶಾಸನ್ ಗಾಂವ್ ಕಿ ಓರ್" ಅಭಿಯಾನದ ಆಚರಣೆಗಳಿಗಾಗಿ ವಾರದ ಕಾರ್ಯಕ್ರಮಗಳನ್ನು ಆಯೋಜಿಸಲಾಗುವುದು.

ಕೇಂದ್ರ ಮತ್ತು ರಾಜ್ಯ ಸರ್ಕಾರದ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಇಲಾಖೆಗಳು ಅಭಿಯಾನದ ಕಾರ್ಯಕ್ರಮದಲ್ಲಿ ಸಕ್ರಿಯವಾಗಿ ಭಾಗವಹಿಸಿ ಸಾರ್ವಜನಿಕರ ಕುಂದು ಕೊರತೆಗಳನ್ನು ಪರಿಹರಿಸುವ ನಿಟ್ಟಿನಲ್ಲಿ ವಿಶೇಷ ಶಿಬಿರಗಳನ್ನು ಆಯೋಜಿಸಿ ಸಾರ್ವಜನಿಕ ಕುಂದುಕೊರತೆಯ ಅಹವಾಲನ್ನು ಸ್ವೀಕರಿಸಿ ಇತ್ಯರ್ಥಪಡಿಸಬೇಕಾಗಿರುವುದರಿಂದ ಜಿಲ್ಲಾಮಟ್ಟದ ಎಲ್ಲಾ ಇಲಾಖೆಯ ಅಧಿಕಾರಿಗಳು ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳು ಕಾರ್ಯಕ್ರಮದಲ್ಲಿ ಸಕ್ರಿಯವಾಗಿ ಯಶಸ್ವಿಗೊಳಿಸಬೇಕು. ಸಾರ್ವಜನಿಕರು ಈ ಕಾರ್ಯಕ್ರಮದ ಉದ್ದೇಶವನ್ನು ಸದುಪಯೋಗ ಪಡೆದುಕೊಳ್ಳಬೇಕು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ತಿಳಿಸಿದ್ದಾರೆ.

## ಡಿ. 27: ನಿಧಿ ಆಪ್ಕೆ ನಿಕಟ್ ಕಾರ್ಯಕ್ರಮ

**ಶಿವಮೊಗ್ಗ:** ಪ್ರಾದೇಶಿಕ ಭವಿಷ್ಯ ನಿಧಿ ಕಚೇರಿ ವತಿಯಿಂದ ನಿಧಿ ಆಪ್ಕೆ ನಿಕಟ್ 2.0 ಕಾರ್ಯಕ್ರಮವನ್ನು ಶಿವಮೊಗ್ಗ ಮತ್ತು ದಾವಣಗೆರೆ ಜಿಲ್ಲೆಗಳಲ್ಲಿ ಡಿ. 27 ರಂದು ಆಯೋಜಿಸಲಾಗಿದೆ. ಶಿವಮೊಗ್ಗ ಜಿಲ್ಲೆಯಲ್ಲಿ ಸಾಗರ ತಾಲೂಕು ಹೊನ್ನೇಸರ ಭೀಮಕೋಣೆಯಲ್ಲಿರುವ ಚರಕ ಮಹಿಳಾ ವಿವಿಧೋದ್ದೇಶ ಕೈಗಾರಿಕಾ ಸಹಕಾರಿ ಸಂಘ ನಿ., ದಲ್ಲಿ ಹಾಗೂ ದಾವಣಗೆರೆ ಜಿಲ್ಲೆಯ ಯಂತ್ರಪುರ ಇಂಡಸ್ಟ್ರೀಯಲ್ ಎಸ್ಟೇಟ್, ಪ್ಲಾಟ್ ನಂ. ಎನ್–7, ಪ್ರದೀಪ್ ಎಂಟರ್‌ಪ್ರೈಸಸ್‌ನಲ್ಲಿ ನಿಧಿ ಆಪ್ಕೆ ನಿಕಟ್ ಕಾರ್ಯಕ್ರಮ ನಡೆಯಲಿದೆ.

ಉದ್ಯೋಗದಾತರು ಮತ್ತು ಉದ್ಯೋಗಿಗಳಿಗೆ ಬೆಳಿಗ್ಗೆ 10 ರಿಂದ ಮಧ್ಯಾಹ್ನ 1 ಗಂಟೆ ಹಾಗೂ ಪಿಂಚಣಿದಾರರಿಗೆ ಮಧ್ಯಾಹ್ನ 2.30 ರಿಂದ ಸಂಜೆ 4 ಗಂಟೆವರೆಗೆ ನಿಧಿ ಆಪ್ಕೆ ನಿಕಟ್ ಕಾರ್ಯಕ್ರಮ ನಡೆಯಲಿದ್ದು, ಉದ್ಯೋಗದಾತರು ಮತ್ತು ಉದ್ಯೋಗಿಗಳು ಮತ್ತು ಪಿಂಚಣಿದಾರರು ಈ ಕಾರ್ಯಕ್ರಮದ ಸದುಪಯೋಗ ಪಡೆದುಕೊಳ್ಳುವಂತೆ ಪ್ರಾದೇಶಿಕ ಕಚೇರಿಯ ಸಹಾಯಕ ಭವಿಷ್ಯ ನಿಧಿ ಆಯುಕ್ತರು ತಿಳಿಸಿದ್ದಾರೆ.

## ಚರ್ಮದ ಬ್ರಾಂಡೆಡ್ ಉತ್ಪನ್ನಗಳು ರಿಯಾಯತಿ ದರದಲ್ಲಿ ಮಾರಾಟ

**ಚಿತ್ರದುರ್ಗ:** ಜಿಲ್ಲೆಯ ಡಾ.ಬಾಬು ಜಗಜೀವನ್ ರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದ ವತಿಯಿಂದ ಲಿಡ್ಕರ್ ಲೆದರ್ ಎಂಪೋರಿಯಂ ಮಾರಾಟ ಮಳಿಗೆಯಲ್ಲಿ ಇದೇ ಡಿ. 20 ರಿಂದ ಜನವರಿ 05 ರವರೆಗೆ ಕ್ರಿಸ್‌ಮಸ್ ಮತ್ತು 2025ನೇ ಹೊಸ ವರ್ಷದ ಪ್ರಯುಕ್ತ ಶೇ.20 ಮತ್ತು ಆಯ್ದ ದಾಸ್ತಾನುಗಳಿಗೆ ಶೇ.40 ರವರೆಗೆ ಅತ್ಯುತ್ತಮ ಗುಣಮಟ್ಟದ ಅಪ್ಪಟ ಚರ್ಮದ ಬ್ರಾಂಡೆಡ್ ಉತ್ಪನ್ನಗಳು ರಿಯಾಯಿತಿ ದರದಲ್ಲಿ ದೊರೆಯುತ್ತವೆ.

ಗ್ರಾಹಕರು ಇದರ ಸದುಪಯೋಗ ಪಡೆದುಕೊಳ್ಳಬೇಕು. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 08194–226651, 9449181136 ಗೆ ಸಂಪರ್ಕಿಸಬಹುದು ಎಂದು ಚಿತ್ರದುರ್ಗ ಲಿಡ್ಕರ್ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಪರಿಚಿತ ಮೃತ ಗಂಡಸ್ಸಿನ ವಾರಸ್ಸುದಾರರ ಪತ್ತೆಗೆ ಮನವಿ

**ಶಿವಮೊಗ್ಗ:** ಶಿವಮೊಗ್ಗ ಮತ್ತು ಭದ್ರಾವತಿ ರೈಲು ನಿಲ್ದಾಣಗಳ ಮಧ್ಯೆ ಬರುವ ರೈಲ್ವೆ ಹಳಿಗಳ ಮೇಲೆ ಸುಮಾರು 45–50 ವರ್ಷ ವಯಸ್ಸಿನ ಗಂಡಸ್ಸಿನ ಶವ ಪತ್ತೆಯಾಗಿದ್ದು, ಈತನ ಹೆಸರು, ವಿಳಾಸ ಹಾಗೂ ವಾರಸ್ಸುದಾರರ ಬಗ್ಗೆ ಯಾವುದೇ ಸುಳಿವು ದೊರಕಿರುವುದಿಲ್ಲ.

ಮೃತ ವ್ಯಕ್ತಿಯ ಚಹರೆ ಸುಮಾರು 5.2 ಅಡಿ ಎತ್ತರ, ಸಾಧಾರಣ ಮೈಕಟ್ಟು, ಕಪ್ಪು ಮೈಬಣ್ಣ ಹೊಂದಿದ್ದು, ತಲೆಯ ಅರ್ಧ ಭಾಗ ಮಾತ್ರ ಉಳಿದಿದೆ. ಮೈಮೇಲೆ ಕಪ್ಪು ಗೆರೆಗಳುಳ್ಳ ಬಿಳಿ ಬಣ್ಣದ ಉದ್ದ ತೋಳಿನ ಶರ್ಟ್ ಮತ್ತು ಕಪ್ಪು ಬಣ್ಣದ ಪ್ಯಾಂಟ್ ಧರಿಸಿರುತ್ತಾರೆ.

ಈ ಮೃತ ವ್ಯಕ್ತಿಯ ವಾರಸ್ಸುದಾರರು ಯಾರಾದರೂ ಇದ್ದಲ್ಲಿ ಶೀವಮೊಗ್ಗ ರೈಲ್ವೆ ಪೊಲೀಸ್ ಠಾಣೆಗೆ ಖುದ್ದಾಗಿ ಅಥವಾ ದೂ.ಸಂ.: 08182–222974/ 9480802124 ಗಳನ್ನು ಸಂಪರ್ಕಿಸಿ ಮಾಹಿತಿ ನೀಡುವಂತೆ ರೈಲ್ವೆ ಪೊಲೀಸ್ ಪ್ರಕಟಣೆ ತಿಳಿಸಿದೆ.

## ರಾಷ್ಟ್ರೀಯ ಲೋಕ ಅದಾಲತ್: 254 ಕೋಟಿ ರೂ.ಗಳಿಗೆ ಹೆಚ್ಚು ಮೊತ್ತ ವಸೂಲು: 1,44,565 ಪ್ರಕರಣ ಇತ್ಯರ್ಥ

**ರಾಮನಗರ:** ನವದೆಹಲಿಯ ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ನಿರ್ದೇಶನದಂತೆ ಇತ್ತೀಚೆಗೆ ಜಿಲ್ಲೆಯ ನ್ಯಾಯಾಲಯಗಳಲ್ಲಿ ರಾಜಿ ಸಂಧಾನದ ಮೂಲಕ ಇತ್ಯರ್ಥವಾಗಬಹುದಾದ ಪ್ರಕರಣಗಳನ್ನು ಲೋಕ್ ಅದಾಲತ್ ನಲ್ಲಿ ವಿಚಾರಣೆ ಕೈಗೊಳ್ಳಲಾಯಿತು.



ಜಿಲ್ಲೆಯ ರಾಮನಗರ, ಚನ್ನಪಟ್ಟಣ, ಕನಕಪುರ ಹಾಗೂ ಮಾಗಡಿ ನ್ಯಾಯಾಲಯಗಳು ಸೇರಿದಂತೆ ಒಟ್ಟು 20 ಪೀಠಗಳಲ್ಲಿ ರಾಷ್ಟ್ರೀಯ ಲೋಕ ಅದಾಲತ್ ಅನ್ನು ಆಯೋಜಿಸಲಾಗಿತ್ತು. ಈ ಲೋಕ ಅದಲಾತ್‌ಗೆ ಜಿಲ್ಲೆಯಾದ್ಯಂತ ವಿಚಾರಣೆಗೆ ಬಾಕಿ ಇರುವ ಒಟ್ಟು 55,739 ಪ್ರಕರಣಗಳಲ್ಲಿ 3,234 ಪ್ರಕರಣಗಳನ್ನು ಹಾಗೂ 1,41,331 ವ್ಯಾಜ್ಯ ಪೂರ್ವ ಪ್ರಕರಣಗಳು ಸೇರಿದಂತೆ ಒಟ್ಟಾರೆ 1,44,565 ಪ್ರಕರಣಗಳನ್ನು ರಾಜಿ ಸಂಧಾನದ ಮೂಲಕ ಇತ್ಯರ್ಥಪಡಿಸಲಾಯಿತು. ಈ ಸಂದರ್ಭದಲ್ಲಿ ಒಟ್ಟು 254,28,68,027 ರೂ.ಗಳನ್ನು ವಸೂಲಿ ಮಾಡಿಕೊಳ್ಳಲಾಯಿತು.

**ರಾಮನಗರ ನಗರ ಜಿಲ್ಲೆಯಾದ್ಯಂತ ರಾಷ್ಟ್ರೀಯ ಲೋಕ ಅದಾಲತ್‌ನಲ್ಲಿ ರಾಜಿ ಸಂದಾನದ ಮೂಲಕ ಇತ್ಯರ್ಥಗೊಂಡ ಪ್ರಕರಣಗಳ ವಿವರ:**

48 ರಾಜಿಯಾಗಬಲ್ಲ ಕ್ರಿಮಿನಲ್ ಪ್ರಕರಣಗಳು, 136 ನೆಗೋಷಬಲ್ ಇನ್ಸ್ಟ್ರುಮೆಂಟ್ ಕಾಯಿದೆ (ಎನ್‌ಐ ಆಕ್ಟ್) ಪ್ರಕರಣಗಳು, 27 ಸಾಲ ವಸೂಲಾತಿ ಪ್ರಕರಣಗಳು, 53 ಮೋಟಾರು ವಾಹನ ಅಪಘಾತ ಪ್ರಕರಣ, 16 ಕಾರ್ಮಿಕ ವಿವಾದ ಪ್ರಕರಣಗಳು, 6 ಗಣಿ ಮತ್ತು ಭೂ ವಿಜ್ಞಾನ ಪ್ರಕರಣಗಳು, 6 ವೈವಾಹಿಕ ಪ್ರಕರಣಗಳು, 85 ಆಸ್ತಿ ವಿಭಾಗ ಪ್ರಕರಣಗಳು, 41 ನಿರ್ದಿಷ್ಟ ಪ್ರಕರಣಗಳು, 6 ಅಂತಿಮ ಡಿಕ್ರಿ ಕಾರ್ಯಾಚರಣೆ ಪ್ರಕರಣಗಳು, 10 ಜಾರಿ ಪ್ರಕರಣಗಳು, 12 ಎಂವಿಸಿ ಎಕ್ಸಿಕ್ಯೂಷನ್ ಪ್ರಕರಣಗಳು, 37 ಹಕ್ಕು ಘೋಷಣೆ, ಶಾಶ್ವತ ನಿರ್ಬಂದಕಾಜ್ಞೆ ಹಾಗೂ ಇತರೆ, 73 ಜನನ ಹಾಗೂ ಮರಣ ಪ್ರಮಾಣಪತ್ರಕ್ಕೆ ಸಂಬಂಧಿಸಿದ ಪ್ರಕರಣಗಳು, 2,576 ಲಘು ವ್ಯಾಜ್ಯ ಪ್ರಕರಣಗಳು, 37 ಇತರೆ ಕ್ರಿಮಿನಲ್ ಪ್ರಕರಣಗಳು, 7 ಬ್ಯಾಂಕ್ ಮೊಕದ್ದಮೆ, 125–ಸಿಆರ್.ಪಿಸಿ ಪ್ರಕರಣಕ್ಕೆ ಸಂಬಂಧಿಸಿದ 13 ಪ್ರಕರಣಗಳು, 1,41,331 ಪೂರ್ವ ದಾವೆ (ಪ್ರೀ ಲಿಟಿಗೇಷನ್) ಪ್ರಕರಣಗಳನ್ನು ಇತ್ಯರ್ಥಪಡಿಸಲಾಯಿತು.

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ನ್ಯಾ. ಬಿ.ವಿ. ರೇಣುಕಾ ಅವರು ಮೇಲುಸ್ತುವಾರಿಯಲ್ಲಿ ರಾಷ್ಟ್ರೀಯ ಲೋಕ ಅದಾಲತ್‌ಅನ್ನು ನಿರ್ವಹಿಸಲಾಯಿತು ಎಂದು ರಾಮನಗರ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಸವಿತ ಪಿ.ಆರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಭೋಳಚಟ್ಟಿ ಶ್ರೀ ಚೌಡೇಶ್ವರಿ ದೇವಿ ಹಾಗೂ ಕಾಲಭೈರವ ದೇವರ ಕಾರ್ತಿಕ ಮಹೋತ್ಸವ



**ದಾವಣಗೆರೆ:** ನಗರದ ವೀರಶೈವ ರುದ್ರಭೂಮಿ ಎದುರಿನ ಭೋಳಚಟ್ಟಿ ಶ್ರೀ ಚೌಡೇಶ್ವರಿ ದೇವಿ ಹಾಗೂ ಶ್ರೀ ಕಾಲಭೈರವ ದೇವಸ್ಥಾನ ಸೇವಾ ಸಮಿತಿ ವತಿಯಿಂದ ದೇವಿ ದೇವಳದ ಪದ್ಧತಿಯಂತೆ ಅನಾದಿ ಸನಾತನ ಕಾಲದಿಂದ ಪ್ರತಿ ವರ್ಷ ಆಚರಿಸಿಕೊಂಡು ಬಂದಿರುವ ಶಕ್ತಿಶಾಲಿಯಾದ ಭೋಳಚಟ್ಟಿ ಶ್ರೀ ಚೌಡೇಶ್ವರಿ ದೇವಿ ಹಾಗೂ ಶ್ರೀ ಕಾಲಭೈರವ ದೇವರ ಕಡೇ ಕಾರ್ತಿಕೋತ್ಸವ ಮಹೋತ್ಸವ ದಿನಾಂಕ: 24–12–2024ರ ಮಂಗಳವಾರದಂದು ರಾತ್ರಿ 8–00ಕ್ಕೆ ಸರಿಯಾಗಿ ಮಹಾ ಮಂಗಳಾರತಿ ಕಾರ್ಯಕ್ರಮದೊಂದಿಗೆ ನಡೆಯಲಿದೆ.

ಗೌಡ್ರು, ರೈತರು, ಬಾಣಕರರು, ಬಾರಿಕರರು, ಕುಂಬಾರ, ಬಾಬುದಾರರು ಹಾಗೂ ದೇವಸ್ಥಾನದ ಧರ್ಮದರ್ಶಿಗಳು ಸಕಲ ಭಕ್ತಾಧಿಗಳು ಆಗಮಿಸಿ ಶ್ರೀ ಚೌಡೇಶ್ವರಿ ದೇವಿಯ ಕೃಪೆಗೆ ಪಾತ್ರರಾಗಬೇಕೆಂದು ದೇವಸ್ಥಾನ ಸೇವಾ ಸಮಿತಿ ಕಾರ್ಯದರ್ಶಿ ಕೆ. ಸಂತೋಷ್ ಗೌಡ್ರು ಕೋರಿದ್ದಾರೆ.

## ಅವಧಿ ವಿಸ್ತರಣೆ

**ಶಿವಮೊಗ್ಗ:** ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯು 2024–25ನೇ ಸಾಲಿನ ಡ್ರೋನ್ ಆಧಾರಿತ ಫೋಟೋಗ್ರಫಿ ಮತ್ತು ವಿಡಿಯೋಗ್ರಫಿ ಮೂಲಕ ಸಾಮಾಜಿಕ ಜಾಲತಾಣಗಳಲ್ಲಿ ಉದ್ಯೋಗ ಪಡೆಯಲು ಪರಿಶಿಷ್ಟ ಪಂಗಡದ ಯುವಕ/ ಯುವತಿಯರಿಗೆ ಡ್ರೋನ್ ತರಬೇತಿ ನೀಡಲು ಅರ್ಜಿ ಆಹ್ವಾನಿಸಿದ್ದು, ಅರ್ಜಿ ಸಲ್ಲಿಸುವ ಕೊನೆಯ ದಿನಾಂಕವನ್ನು ಡಿ. 24 ರವರೆಗೆ ವಿಸ್ತರಿಸಲಾಗಿದೆ ಎಂದು ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ. ಹೆಚ್ಚಿನ ಮಾಹಿತಿಗಾಗಿ ಇಲಾಖೆ ಕಚೇರಿಯನ್ನು ಖುದ್ದಾಗಿ ಅಥವಾ ದೂ.ಸಂ.:08182–200266 / 9482762350 ಗಳನ್ನು ಸಂಪರ್ಕಿಸುವುದು.

## 23 ಕ್ಕೆ ಜಯಕರ್ನಾಟಕ ಸಂಘಟನೆ ವತಿಯಿಂದ ಜಯಕರ್ನಾಟಕ ಕಪ್ ಕ್ರಿಕೆಟ್ ಟೂರ್ನಿ: ರವಿ



**ದೇವನಹಳ್ಳಿ:** ಡಿಸೆಂಬರ್ 23 ರಂದು ದೇವನಹಳ್ಳಿ ಸಮೀಪದ ಬ್ರಿಗೇಡ್ ಆರ್ಚರ್ಡ್ಸ್ ನಲ್ಲಿ ಜಯಕರ್ನಾಟಕ ಸಂಘಟನೆ ವತಿಯಿಂದ ಟೆನ್ನಿಸ್ ಬಾಲ್ ಕ್ರಿಕೆಟ್ ಟೂರ್ನಮೆಂಟ್ ಆಯೋಜಿಸಿದ್ದು ಒಟ್ಟು 8 ತಂಡಗಳು ಭಾಗಿಯಾಗಲಿದ್ದು ಜಯಕರ್ನಾಟಕ ಸಂಘಟನೆಯ ಆಜೀವ ಸದಸ್ಯತ್ವ ಹೊಂದಿರುವ ಪದಾಧಿಕಾರಿಗಳು ಮಾತ್ರ ಈ ಕ್ರಿಕೆಟ್ ಟೂರ್ನಿಯಲ್ಲಿ ಭಾಗವಹಿಸಲು ಅರ್ಹರು ಎಂದು ಜಯಕರ್ನಾಟಕ ಸಂಘಟನೆಯ ಬೆಂಗಳೂರು ಗ್ರಾಮಾಂತರ ಜಿಲ್ಲಾಧ್ಯಕ್ಷ ರವಿ ತಿಳಿಸಿದರು.

ದೇವನಹಳ್ಳಿ ರಾಣಿ ಕ್ರಾಸ್ ಬಳಿಯ ಅಪ್ಪು ಭಾವಚಿತ್ರದ ಮುಂಭಾಗ ಬೆಂಗಳೂರು ಗ್ರಾಮಾಂತರ ಜಿಲ್ಲಾ ತಂಡದ ಅಪ್ಪು ವಾರಿಯರ್ಸ್ ಜರ್ಸಿಯನ್ನು ಬಿಡುಗಡೆ ಮಾಡಿ ಮಾತನಾಡಿ, ಬೆಂಗಳೂರು ಗ್ರಾಮಾಂತರ ಜಿಲ್ಲೆ ವತಿಯಿಂದ ಆಯೋಜಿಸಿರುವ ಸ್ನೇಹ ಸೌಹಾರ್ದಯುತ ಟೂರ್ನಿಯಲ್ಲಿ ಬೆಂಗಳೂರು ಗ್ರಾಮಾಂತರ ಜಿಲ್ಲಾ ತಂಡ, ದೇವನಹಳ್ಳಿ ತಾಲ್ಲೂಕು ತಂಡ, ದೊಡ್ಡಬಳ್ಳಾಪುರ ತಾಲ್ಲೂಕು ತಂಡ, ಹೊಸಕೋಟೆ ತಾಲ್ಲೂಕು ತಂಡ, ನೆಲಮಂಗಲ ತಾಲೂಕು ತಂಡ, ಬೆಂಗಳೂರು ನಗರ, ಮುತ್ತಪ್ಪ ರೈ ತಂಡಗಳು ಭಾಗಿಯಾಗಲಿದ್ದು ಇದರಲ್ಲಿ ವಿಜೇತರಾದ ತಂಡಗಳಿಗೆ ಪ್ರಥಮ ಬಹುಮಾನ ಒಂದು ಲಕ್ಷ ಹಾಗೂ ಆಕರ್ಷಕ ಟ್ರೋಫಿ, ದ್ವಿತೀಯ ಬಹುಮಾನ ಐವತ್ತು ಸಾವಿರ ಹಾಗೂ ಆಕರ್ಷಕ ಟ್ರೋಫಿ ನೀಡಲಾಗುತ್ತದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಜಯಕರ್ನಾಟಕ ಸಂಘಟನೆಯ, ಜಿಲ್ಲಾ ಕಾರ್ಯಾಧ್ಯಕ್ಷ ಹೇಮಂತ್, ಪ್ರಧಾನ ಕಾರ್ಯದರ್ಶಿ ಮನೋಹರ್, ಉಪಾಧ್ಯಕ್ಷ ಚೇತನ್,ಹೊಸಕೋಟೆ ಅರುಣ್, ತಾಲ್ಲೂಕು ಕಾರ್ಯಾಧ್ಯಕ್ಷ ಗೋಪಿನಾಥ್, ಅಭಿಶೇಕ್, ಮೂರ್ತಿ ಹಾಗೂ ಇನ್ನು ಹಲವು ಪದಾಧಿಕಾರಿಗಳು ಇದ್ದರು.

## ಮಾಳಿಗೇನಹಳ್ಳಿ ಗ್ರಾಮದ ಜಮೀನು ವಿವಾದಕ್ಕೆ ತಹಸೀಲ್ದಾರ್ ಸ್ಥಳಕ್ಕೆ ಭೇಟಿ

### ಜಾನುವಾರುಗಳು ನೀರುಕುಡಿಯಲು ಮತ್ತು ಚೆಕ್ ಡ್ಯಾಂ ಇರುವ ಕಾರಣ ಜಾಗವನ್ನು ಬಿಡಲು ಮನವಿ

**ದೇವನಹಳ್ಳಿ:** ತಾಲೂಕಿನ ಕಸಬಾ ಹೋಬಳಿಯ ಮಾಳಿಗೇನಹಳ್ಳಿ ಗ್ರಾಮಸ್ಥರಿಗೂ ಹಾಗೂ ಪೊಲೀಸ್ ಅಕಾಡಮಿ ಇಬ್ಬರ ನಡುವೆ ವ್ಯತ್ಯಾಸ ಸರಿಪಡಿಸಲು ಸ್ಥಳಕ್ಕೆ ತಹಸೀಲ್ದಾರ್ ಭೇಟಿ ನೀಡಿದರು.

ಬಿದಲೂರು ಗ್ರಾಮ ಪಂಚಾಯತಿ ವ್ಯಾಪ್ತಿಯ ಮಾಳಿಗೇನಹಳ್ಳಿ ಗ್ರಾಮದ ಸರ್ವೆ ನಂಬರ್ 5 ರಲ್ಲಿ 1998 ರಲ್ಲಿ ಆಶ್ರಯ ಯೋಜನೆಯಡಿ ನೀಡಿರುವ ಹಕ್ಕುಪತ್ರ ನಿವೇಶನಗಳು ಮತ್ತು ಸಾರ್ವಜನಿಕ ಅನುಭವದ ಆಧಾರದ ಜಾಗಗಳು ಮತ್ತು 94cc ಅಡಿಯಲ್ಲಿ ಸರ್ಕಾರಿ ಜಾಗದಲ್ಲಿ ಅಕ್ರಮ ಕಟ್ಟಡಗಳ ಸಕ್ರಮೀಕರಣ ಹಕ್ಕುಪತ್ರಗಳ ಆಧಾರದ ಮೇಲೆ ಸಾರ್ವಜನಿಕರಿಗೆ ಸೇರಿದ ಜಾಗ ಪೊಲೀಸ್ ಅಕಾಡಮಿಗೆ ಸೇರಿದೆ ಎನ್ನುವ ಗೊಂದಲದ ನಿವಾರಣೆಗೆ ತಹಸೀಲ್ದಾರ್ ಬಾಲಕೃಷ್ಣ ಸ್ಥಳಕ್ಕಾಗಮಿಸಿ ಸಾರ್ವಜನಿಕರ ಮತ್ತು ಇಲಾಖೆಯ ಉನ್ನತ ಅಧಿಕಾರಿಗಳೊಂದಿಗೆ ಮಾತನಾಡಿ ಸಮಸ್ಯೆ ಬಗೆಹರಿಸುವ ಕೆಲಸ ಮಾಡಿದರು.



ಬಿದಲೂರು ಗ್ರಾಮ ಪಂಚಾಯತಿ ಸದಸ್ಯ ಪ್ರಕಾಶ್ ಮಾತನಾಡಿ, ಸರ್ವೆ ನಂಬರ್ 5 ಗ್ರಾಮಕ್ಕೆ ಹೊಂದಿಕೊಂಡಿರುವುದರಿಂದ ಹಿತ್ತಲ ಜಾಗ, ತಿಪ್ಪೆ ಜಾಗ ಎಂದು 98 ರಲ್ಲೇ ಸ್ಥಳೀಯ ಗ್ರಾಮ ಪಂಚಾಯತಿಯಲ್ಲಿ ಖಾತೆ ಮಾಡಿದೆ, ಆದರೆ ಕಂದಾಯ ಇಲಾಖೆ ಮಂಜೂರಾಗಿರುವ ಜಾಗವನ್ನು ಹೊರತುಪಡಿಸಿ ಮಾಡದೇ ಪೊಲೀಸ್ ಇಲಾಖೆಗೆ ಮಾಡಬೇಕಿತ್ತು ಈಗ ಆರ್.ಟಿ.ಸಿ ಯಂತೆ ಗಡಿ ತೋರಿಸಲು ಬಂದಾಗ ಗ್ರಾಮಸ್ಥರು ವಿರೋಧಿಸಿ ಗ್ರಾಮಸ್ಥರಿಗೆ ಮಂಜೂರಾದ ಜಾಗ ಗ್ರಾಮಸ್ಥರಿಗೇ ಉಳಿಯಬೇಕೆನ್ನುವುದು ಒತ್ತಾಯ ಎಂದು ತಿಳಿಸಿದರು. ದೇವನಹಳ್ಳಿ ತಾಲ್ಲೂಕು ದಂಡಾಧಿಕಾರಿ ಬಾಲಕೃಷ್ಣ ಮಾತಮಾಡಿ, ಪೊಲೀಸ್ ಅಕಾಡಮಿಯವರು ಸರ್ವೆ ನಂಬರ್ 6 ರಲ್ಲಿ ಗಡಿ ಫೋಕ್ಸ್ ಮಾಡುತ್ತಿದ್ದಾರೆ ಸರ್ವೆ ನಂಬರ್ 5 ರಲ್ಲಿ ಜೀವದಾರುಗಳು ನೀರುಕುಡಿಯಲು ಮತ್ತು ಚೆಕ್ ಡ್ಯಾಂ ಇರುವ ಕಾರಣ ಆ ಜಾಗವನ್ನು ಬಿಟ್ಟು ಮಾಡಲು ನಿರ್ದೇಶನ ನೀಡಿದ್ದೇನೆ ಅದಕ್ಕೆ ಅವರು ಒಪ್ಪಿದ್ದಾರೆ. ಆ ಜಾಗದ ಬದಲು ಸರ್ಕಾರದ ವತಿಯಿಂದ ಬೇರೆಡೆ ನೀಡಲು ಅವಕಾಶವಿದೆ ಅದಕ್ಕೆ ವ್ಯವಸ್ಥೆ ಮಾಡುತ್ತೇವೆ, ಆದರೆ ಇಲ್ಲಿನ ಮುಖ್ಯ ಸಮಸ್ಯೆ ಆಶ್ರಯ ಯೋಜನೆಯಲ್ಲಿನೀಡಿರುವ ಜಾಗದ ಕಲ್ಲನ್ನು ಕಿತ್ತು ಹಾಕಿದ್ದಾರೆ ರೈತರಿಗೆ ಮಂಜೂರಾದ ಜಾಗವನ್ನು ಇಲಾಖೆಗೆ ಹೇಗೆ ಮಂಜೂರು ಮಾಡಿದ್ದಾರೆ ಎನ್ನುವುದನ್ನು ಪರಿಶೀಲಿಸಿ ಯಾರಿಗೂ ಸಮಸ್ಯೆಯಾಗದಂತೆ ಬಗೆಹರಿಸುತ್ತೇನೆ ಎಂದು ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಗ್ರಾಮದ ಮುಖಂಡರಾದ ನಾಗೇಗೌಡ, ಸೇರಿದಂತೆ ಗ್ರಾಮಸ್ಥರು ಪೊಲೀಸ್ ಇಲಾಖಾಧಿಕಾರಿಗಳು ಇದ್ದರು.

## ಯುವನಿಧಿ ಯೋಜನೆಯ ನೋಂದಣಿ ಪ್ರಕ್ರಿಯೆಯ ಪೋಸ್ಟರ್, ಬ್ಯಾನರ್ ಬಿಡುಗಡೆ

**ರಾಮನಗರ:** ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ, ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆ ವತಿಯಿಂದ ಯುವ ಜನತೆಯ ಉಜ್ವಲ ಭವಿಷ್ಯಕ್ಕಾಗಿ ಕರ್ನಾಟಕ ಸರ್ಕಾರದ ಗ್ಯಾರಂಟಿ ಯೋಜನೆಯಾದ ಯುವನಿಧಿ ಯೋಜನೆಯ ನೋಂದಣಿ ಪ್ರಕ್ರಿಯೆ ಆರಂಭದ ಕುರಿತು ಜಿಲ್ಲಾಧಿಕಾರಿ ಯಶವಂತ್ ವಿ. ಗುರುಕರ್ ಅವರು ಡಿ. 20ರ ಶುಕ್ರವಾರ ನಗರದ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಪೋಸ್ಟರ್ ಹಾಗೂ ಬ್ಯಾನರ್ ಬಿಡುಗಡೆ ಮಾಡಿದರು.




ಈ ಸಂದರ್ಭದಲ್ಲಿ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಕೆ.ರಾಜು, ತಾಲ್ಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ವಿ.ಹೆಚ್.ರಾಜು, ಜಿಲ್ಲಾ ಉದ್ಯೋಗಾಧಿಕಾರಿ ಎಂ.ಆರ್. ಗೋವಿಂದರಾಜು, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯ ಸಹಾಯಕ ನಿರ್ದೇಶಕರಾದ ಲತಾ ಹಾಗೂ ಇತರರು ಉಪಸ್ಥಿತರಿದ್ದರು.

## ಇಂದು ಗ್ರಾಹಕರ ಕುಂದು ಕೊರತೆ ಸಭೆ

**ರಾಮನಗರ:** ಬೆಸ್ಕಾಂ ವತಿಯಿಂದ ಡಿ. 21ರ ಶನಿವಾರ ಮಧ್ಯಾಹ್ನ 3 ಗಂಟೆಗೆ ಗ್ರಾಹಕರ ಕುಂದು ಕೊರತೆ ಸಭೆಯನ್ನು ರಾಮನಗರ ನಗರ ಉಪವಿಭಾಗದ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ (ವಿ) ಕಚೇರಿಯಲ್ಲಿ ಹಮ್ಮಿಕೊಳ್ಳಲಾಗಿದೆ.

ರಾಮನಗರ ನಗರ ಗ್ರಾಹಕರು ಇದರ ಸದುಪಯೋಗ ಪಡಿಸಿಕೊಳ್ಳುವಂತೆ ಬೆಸ್ಕಾಂನ ರಾಮನಗರ ನಗರ ಉಪವಿಭಾಗದ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ (ವಿ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.





# ಜನವರಿಯಿಂದ ಬದಲಾಗಲಿದೆ ಪ್ರೈಮ್ ರೂಲ್

prime video

ಅಮೆಜಾನ್ ಪ್ರೈಮ್ ವಿಡಿಯೋ ತನ್ನ ಸೇವಾ ನಿಯಮಗಳನ್ನು ಬದಲಾಯಿಸುತ್ತಿದೆ. ಜನವರಿಯಿಂದ, ಒಂದಕ್ಕಿಂತ ಹೆಚ್ಚು ಟಿವಿಗಳಲ್ಲಿ ಏಕಕಾಲದಲ್ಲಿ ಸ್ಟ್ರೀಮಿಂಗ್ ಅನ್ನು ಮಿತಿ ಮಾಡುವುದಾಗಿ ತಿಳಿಸಿದೆ. ಎರಡಕ್ಕಿಂತ ಹೆಚ್ಚು ಟಿವಿಗಳಲ್ಲಿ ಪ್ರೈಮ್ ವಿಡಿಯೋ ನೋಡಲು ಹೊಸ ಸಂಪರ್ಕ ಖರೀದಿ ಮಾಡಬೇಕು ಎಂದು ತಿಳಿಸಿದೆ.

ಕೊರೊನಾ ನಂತರ ಭಾರತದಲ್ಲಿ ಒಟಿಟಿ ಮಾರುಕಟ್ಟೆ ಬೆಳೆದಿದೆ. ಅನೇಕ ಚಿತ್ರಗಳು ನೇರವಾಗಿ ಒಟಿಟಿ ವೇದಿಕೆಗಳಲ್ಲಿ ಬಿಡುಗಡೆಯಾಗುತ್ತಿವೆ, ಇದರಿಂದ ಒಟಿಟಿ ಬಳಕೆದಾರರು ಹೆಚ್ಚಾಗಿದ್ದಾರೆ.

ಅಮೆಜಾನ್ ಪ್ರೈಮ್ ಕಂಟೆಂಟ್ ಸ್ಟ್ರೀಮಿಂಗ್ ಮತ್ತು ಶಾಪಿಂಗ್ ಪ್ರಯೋಜನಗಳನ್ನು ನೀಡುತ್ತದೆ. ಕಂಪನಿಯು ಜನವರಿಯಿಂದ ಪ್ರೈಮ್ ವಿಡಿಯೋದ ನಿಯಮಗಳನ್ನು ಪರಿಷ್ಕರಣೆ ಮಾಡಲಿದ್ದು, ಈ ಬಗ್ಗೆ ಚಂದಾದಾರಿಗೆ ಈ ಮೇಲ್ ಮೂಲಕ ಮಾಹಿತಿ ನೀಡುತ್ತಿದೆ.

ಪ್ರಸ್ತುತ, ಪ್ರೈಮ್ ಸದಸ್ಯರು ಯಾವುದೇ ರೀತಿಯ ಐದು ಸಾಧನಗಳನ್ನು ಬಳಸಬಹುದು. ಆದರೆ, ಅಮೆಜಾನ್ ಈಗ ಏಕಕಾಲದಲ್ಲಿ ಸ್ಟ್ರೀಮ್ ಮಾಡಬಹುದಾದ ಟಿವಿಗಳ ಸಂಖ್ಯೆಯನ್ನು ಮಿತಿಗೊಳಿಸುತ್ತಿದೆ.

ಎರಡಕ್ಕಿಂತ ಹೆಚ್ಚು ಟಿವಿಗಳಲ್ಲಿ ಏಕಕಾಲದಲ್ಲಿ ಪ್ರೈಮ್ ವಿಡಿಯೋ ನೋಡಲು, ಬಳಕೆದಾರರಿಗೆ ಹೆಚ್ಚುವರಿ ಸಂಪರ್ಕದ ಅಗತ್ಯವಿದೆ. ಸೆಟ್ಟಿಂಗ್‌ಗಳಲ್ಲಿ 'ನಿರ್ವಹಣೆ' ಆಯ್ಕೆಯ ಮೂಲಕ ಸಾಧನಗಳನ್ನು ನಿರ್ವಹಿಸಬಹುದು.

ಅಮೆಜಾನ್ ಪ್ರೈಮ್‌ನ ವಾರ್ಷಿಕ ಚಂದಾದಾರಿಕೆ ₹1499. ತ್ರೈಮಾಸಿಕ ಮತ್ತು ಮಾಸಿಕ ಆಯ್ಕೆಗಳಿವೆ. ಸ್ಟ್ರೀಮಿಂಗ್ ಸಮಯದಲ್ಲಿ ಜಾಹೀರಾತುಗಳೊಂದಿಗೆ ಪ್ರೈಮ್ ಲೈಟ್ ಯೋಜನೆಯನ್ನು ಸಹ ನೀಡಲಾಗುತ್ತದೆ. ಶಾಪಿಂಗ್ ಮಾತ್ರ ವಾರ್ಷಿಕ ಯೋಜನೆ ₹399.

# ನಾಳೆ 'ಮ್ಯಾಕ್ಸ್' ಟ್ರೈಲರ್ ಬಿಡುಗಡೆ

ಸುದೀಪ್ ಅವರು ಪೂರ್ಣ ಪ್ರಮಾಣದ ನಾಯಕರಾಗಿ ನಟಿಸಿದ ಸಿನಿಮಾ ಒಂದು ಬಿಡುಗಡೆ ಆಗಿ ಎರಡೂವರೆ ವರ್ಷವಾಗಿದೆ. ಸುದೀಪ್ ವೃತ್ತಿ ಜೀವನದಲ್ಲಿಯೇ ಇಷ್ಟು ದೊಡ್ಡ ಗ್ಯಾಪ್ ಅನ್ನು ಅವರು ತೆಗೆದುಕೊಂಡಿಲ್ಲ. ಬಿಗ್‌ಬಾಸ್ ಸೇರಿದಂತೆ ಇನ್ನಿತರೆ ಕಾರಣಗಳಿಗಾಗಿ ಸುದೀಪ್ ಅವರ ಸಿನಿಮಾ ತಡವಾಗಿದೆ. ಆದರೆ ತಡವಾದರೂ ಭರ್ಜರಿಯಾಗಿ ಪ್ರೇಕ್ಷಕರ ಮುಂದೆ ಬರಲು ಕಿಚ್ಚ ರೆಡಿಯಾಗಿದ್ದಾರೆ.

ಸುದೀಪ್ ಅವರ 'ಮ್ಯಾಕ್ಸ್' ಸಿನಿಮಾ ಕೆಲವೇ ದಿನಗಳಲ್ಲಿ ಬಿಡುಗಡೆ ಆಗಲಿದ್ದು, ಸಿನಿಮಾದ ಟ್ರೈಲರ್ ಬಿಡುಗಡೆ ದಿನಾಂಕ ಘೋಷಿಸಲಾಗಿದೆ. 'ಮ್ಯಾಕ್ಸ್' ಸಿನಿಮಾದ ಟ್ರೈಲರ್ ನಾಳೆ ಅಂದರೆ ಡಿಸೆಂಬರ್ 22 ರಂದು ಬಿಡುಗಡೆ ಆಗಲಿದೆ. ಬೆಳಗ್ಗೆ 11:08 ನಿಮಿಷಕ್ಕೆ ಟ್ರೈಲರ್ ಬಿಡುಗಡೆ ಆಗಲಿದೆ. ಸಿನಿಮಾದ ಟ್ರೈಲರ್ ಬಿಡುಗಡೆ ಸುದ್ದಿಯನ್ನು ಹಂಚಿಕೊಂಡಿರುವ ಸುದೀಪ್, 'ಮ್ಯಾಕ್ಸ್' ಸಿನಿಮಾದ ಬಿಡುಗಡೆ ಪೂರ್ವ ಅಬ್ಬರಕ್ಕೆ ತಯಾರಾಗಿ ಎಂದಿದ್ದಾರೆ.

ಪೋಸ್ಟರ್ ಒಂದನ್ನು ಸುದೀಪ್ ಹಂಚಿಕೊಂಡಿದ್ದು, ದೊಡ್ಡ ವಾಹನವೊಂದರ ಮೇಲೆ ರಕ್ತ ಸಿಕ್ತರಾಗಿರುವ ಸುದೀಪ್ ಒಂದು ಕೈಯಲ್ಲಿ ಬಂದೂಕು ಇನ್ನೊಂದು ಕೈಯಲ್ಲಿ ಬಿಯರ್ ಗ್ಲಾಸ್ ಹಿಡಿದ ಚಿತ್ರ ಪೋಸ್ಟರ್‌ನಲ್ಲಿದೆ.

'ಮ್ಯಾಕ್ಸ್' ಸಿನಿಮಾ ಒಂದು ರಾತ್ರಿಯಲ್ಲಿ ನಡೆಯುವ ಕತೆಯನ್ನು ಹೊಂದಿದ್ದು, ಸಿನಿಮಾದಲ್ಲಿ ಸುದೀಪ್




ಪೊಲೀಸ್ ಅಧಿಕಾರಿಯ ಪಾತ್ರದಲ್ಲಿ ನಟಿಸಿದ್ದಾರೆ. ಒಂದು ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಒಂದೇ ರಾತ್ರಿಯಲ್ಲಿ ನಡೆಯುವ ಕತೆಯನ್ನು ಈ ಸಿನಿಮಾ ಒಳಗೊಂಡಿದೆ ಎನ್ನಲಾಗುತ್ತಿದೆ.

ಸಿನಿಮಾದ ಟೀಸರ್, ಕೆಲವು ಸಣ್ಣ ಪುಟ್ಟ ತುಣುಕುಗಳು ಈಗಾಗಲೇ ಬಿಡುಗಡೆ ಆಗಿದ್ದು, ಸಿನಿಮಾದ ಬಗ್ಗೆ ಈಗಾಗಲೇ ಕುತೂಹಲ ಮೂಡಿಸಿವೆ.

ಸುದೀಪ್ ನಟನೆಯ 'ಮ್ಯಾಕ್ಸ್' ಸಿನಿಮಾವನ್ನು ವಿಜಯ್ ಕಾರ್ತಿಕೇಯ ನಿರ್ದೇಶನ ಮಾಡಿದ್ದಾರೆ. ತಮಿಳಿನ ಖ್ಯಾತ ನಿರ್ಮಾಪಕ ಕಲೈಪುಲಿ ಎಸ್ ತನು ಅವರು ನಿರ್ಮಾಣ ಮಾಡಿದ್ದಾರೆ.

ಕಲೈಪುಲಿ ಅವರು ರಜನೀಕಾಂತ್, ವಿಜಯ್ ಸೇರಿದಂತೆ ಹಲವು ಸೂಪರ್ ಸ್ಟಾರ್ ನಟರ ಹಲವು ಬ್ಲಾಕ್ ಬಸ್ಟರ್ ಸಿನಿಮಾಗಳನ್ನು ನಿರ್ಮಾಣ ಮಾಡಿದ್ದಾರೆ. ಸಿನಿಮಾಕ್ಕೆ ಅಜನೀಶ್ ಲೋಕನಾಥ್ ಸಂಗೀತ ನೀಡಿದ್ದು, ಕೆಆರ್?ಜಿ ಅವರು ವಿತರಣೆ ಮಾಡುತ್ತಿದ್ದಾರೆ. ಸಿನಿಮಾ ಡಿಸೆಂಬರ್ 25ಕ್ಕೆ ತೆರೆಗೆ ಬರಲಿದೆ.




# ಕಣ್ಣೀರು ಹಾಕಿದ ಕೊಹ್ಲಿ!



ವಿರಾಟ್ ಕೊಹ್ಲಿ ವಿಶ್ವ ಕ್ರಿಕೆಟ್‌ನಲ್ಲಿ ರನ್ ಮೆಷಿನ್ ಎಂದು ಹೆಸರುವಾಸಿಯಾದ ಸ್ಟಾರ್ ಆಟಗಾರ. ಕ್ರಿಕೆಟ್‌ನಲ್ಲಿ ಹಲವಾರು ದಾಖಲೆಗಳನ್ನು ಬರೆದಿದ್ದಾರೆ. ಕ್ರಿಕೆಟ್ ದಂತಕಥೆ ಆಟಗಾರರ ಪಟ್ಟಿಯಲ್ಲಿ ಸೇರಿದ್ದಾರೆ. ಆದರೆ, ವಿರಾಟ್ ಬಗ್ಗೆ ಬಾಲಿವುಡ್ ನಟ ವರುಣ್ ಧವನ್ ಹಂಚಿಕೊಂಡ ಒಂದು ವಿಷಯ ಈಗ ವೈರಲ್ ಆಗಿದೆ.

ವಿರಾಟ್ ಕೊಹ್ಲಿ ಪ್ರಸ್ತುತ ಆಸ್ಟ್ರೇಲಿಯಾ ಪ್ರವಾಸದಲ್ಲಿದ್ದಾರೆ. ಅವರ ಪತ್ನಿ ಅನುಷ್ಕಾ ಶರ್ಮಾ ಕೂಡ ಜೊತೆಯಲ್ಲಿದ್ದಾರೆ. ಬಾರ್ಡರ್–ಗವಾಸ್ಕರ್ ಟ್ರೋಫಿಯ ಮೊದಲ ಟೆಸ್ಟ್ ಪಂದ್ಯದಲ್ಲೇ ಶತಕ ಬಾರಿಸುವ ಮೂಲಕ ಫಾರ್ಮ್‌ನಲ್ಲಿದ್ದೇನೆ ಎಂದು ಬ್ಯಾಟ್‌ನಿಂದ ಸಾಬೀತುಪಡಿಸಿದರು. ಆದರೆ ಎರಡನೇ ಮತ್ತು ಮೂರನೇ ಟೆಸ್ಟ್ ಪಂದ್ಯಗಳಲ್ಲಿ ನಿರೀಕ್ಷಿತ ಮಟ್ಟದಲ್ಲಿ ರನ್ ಗಳಿಸಲು ಸಾಧ್ಯವಾಗಲಿಲ್ಲ.

ಇದರಿಂದ ವಿರಾಟ್ ಕೊಹ್ಲಿ ಆಟದ ಬಗ್ಗೆ ಮತ್ತೆ ಪ್ರಶ್ನೆಗಳು ಎದ್ದಿವೆ. ಅಷ್ಟೇ ಅಲ್ಲ, ನಿವೃತ್ತಿ ತೆಗೆದುಕೊಳ್ಳಬೇಕೆಂದು ಕೆಲವರು ಕಾಮೆಂಟ್ ಮಾಡುತ್ತಿದ್ದಾರೆ. ಇದರಿಂದ ಕ್ರಿಕೆಟ್ ವಲಯದಲ್ಲಿ ಕಿಂಗ್ ಕೊಹ್ಲಿ ಬಿಸಿಬಿಸಿ ಚರ್ಚೆಯ ವಿಷಯವಾಗಿದ್ದಾರೆ. ಈ ಸಂದರ್ಭದಲ್ಲಿ ಬಾಲಿವುಡ್ ನಟ ವರುಣ್ ಧವನ್ ವಿರಾಟ್ ಕೊಹ್ಲಿ ಕ್ರಿಕೆಟ್ ಮೇಲಿನ ಪ್ರೀತಿ, ಹುಚ್ಚಿಗೆ ಸಂಬಂಧಿಸಿದ ಒಂದು ಭಾವುಕ ಘಟನೆಯನ್ನು ಹೇಳಿದ್ದಾರೆ.



ವರುಣ್ ಧವನ್ ಯೂಟ್ಯೂಬ್ ಕಂಟೆಂಟ್ ಕ್ರಿಯೇಟರ್ ರಣವೀರ್ ಅಲ್ಲಾಬಾದಿಯಾ ಪಾಡ್‌ಕ್ಯಾಸ್ಟ್‌ನಲ್ಲಿ ಮಾತನಾಡುತ್ತಾ ಅನುಷ್ಕಾ ಶರ್ಮಾ ಅವರನ್ನು ಹೊಗಳಿದ್ದಾರೆ. ಅಲ್ಲದೆ, ವಿರಾಟ್ ಕೊಹ್ಲಿ ಯಶಸ್ಸಿನಲ್ಲಿ ಅವರ ಪಾತ್ರ ಎಷ್ಟು ಮುಖ್ಯ ಎಂದು ಹೇಳಿದ್ದಾರೆ. ಅಲ್ಲದೆ, 2018 ರಲ್ಲಿ ನಾಟಿಂಗ್‌ಹ್ಯಾಮ್ ಟೆಸ್ಟ್ ಸರಣಿಯಲ್ಲಿ ವಿರಾಟ್ ಕೊಹ್ಲಿ ಅಳುತ್ತಿದ್ದ ಘಟನೆ, ತಂಡದ ನಾಯಕನಾಗಿದ್ದಾಗ ನಡೆದ ಆಘಾತಕಾರಿ ಘಟನೆಯನ್ನು ಧವನ್ ವಿವರಿಸಿದ್ದಾರೆ.

ಅನುಷ್ಕಾ ಜೊತೆ ಸೂಯಿ ಧಾಗಾ ಚಿತ್ರೀಕರಣ ಮಾಡುವಾಗ ವಿರಾಟ್ ಕೊಹ್ಲಿ ಬಗ್ಗೆ ಚರ್ಚೆ ನಡೆಯಿತು ಎಂದು ಧವನ್ ಹೇಳಿದ್ದಾರೆ. 2018 ರ ನಾಟಿಂಗ್‌ಹ್ಯಾಮ್ ಟೆಸ್ಟ್ ಸರಣಿ ಸೋಲಿಗೆ ವಿರಾಟ್ ತನ್ನನ್ನು ತಾನೇ ದೂಷಿಸಿಕೊಂಡಿದ್ದ ವಿಷಯವನ್ನು ವರುಣ್ ಧವನ್ ಜೊತೆ ಅನುಷ್ಕಾ ಹಂಚಿಕೊಂಡಿದ್ದರು ಎಂದು ತಿಳಿಸಿದ್ದಾರೆ. "ವಿರಾಟ್ ಕೊಹ್ಲಿ ಪ್ರಸ್ತುತ ಕೆಟ್ಟ ಫಾರ್ಮ್‌ನಲ್ಲಿದ್ದಾರೆ. ವಿರಾಟ್ ತುಂಬಾ ನೋವು ಅನುಭವಿಸಿದ್ದಾರೆ. ಅವರು ಫಾರ್ಮ್‌ನಲ್ಲಿ ಇಲ್ಲದಿದ್ದಾಗ, ಅವರ ಮಾನಸಿಕ ಸ್ಥಿತಿಯ ಬಗ್ಗೆ ಅನುಷ್ಕಾ ನನ್ನ ಜೊತೆ ಹಂಚಿಕೊಂಡರು" ಎಂದು ಆಸಕ್ತಿದಾಯಕ ವಿಷಯಗಳನ್ನು ಹೇಳಿದ್ದಾರೆ.

"ಬಹುಶಃ ಅದು ನಾಟಿಂಗ್‌ಹ್ಯಾಮ್ ಟೆಸ್ಟ್ ಆಗಿರಬಹುದು. ಭಾರತ ತಂಡ ಸೋಲನ್ನು ಅನುಭವಿಸಬೇಕಾಯಿತು. ಆ ದಿನ ಪಂದ್ಯ ನೋಡಲು ಅನುಷ್ಕಾ ಹೋಗಿರಲಿಲ್ಲ. ಆದರೆ ಪಂದ್ಯ ಮುಗಿದ ನಂತರ ವಾಪಸ್ ಬಂದಾಗ ವಿರಾಟ್ ಕೊಹ್ಲಿ ಎಲ್ಲಿದ್ದಾರೆಂದು ಅವರಿಗೆ ತಿಳಿದಿರಲಿಲ್ಲ. ಅವರು ಕೋಣೆಗೆ ಪ್ರವೇಶಿಸಿದಾಗ ತುಂಬಾ ಬೇಸರವಾಯಿತು. ಏಕೆಂದರೆ ವಿರಾಟ್ ಕೊಹ್ಲಿ ಆ ಕೋಣೆಯಲ್ಲಿ ಅಳುತ್ತಿದ್ದರು. ವಿರಾಟ್ ವಿಫಲವಾದ್ದರಿಂದ ತಂಡ ಸೋಲನ್ನು ಅನುಭವಿಸಬೇಕಾಯಿತು ಎಂದು ಭಾವಿಸಿದ್ದರು. ಆದರೆ ವಿರಾಟ್ ಅತಿ ಹೆಚ್ಚು ರನ್ ಗಳಿಸಿದ್ದರು. ಆದರೆ, ಅವರು ತಂಡದ ನಾಯಕರೂ ಆಗಿದ್ದರು" ಎಂದು ವರುಣ್ ಧವನ್ ವಿವರಿಸಿದ್ದಾರೆ.

ಇಂಗ್ಲೆಂಡ್ ಪ್ರವಾಸದ 2018 ರ ನಾಟಿಂಗ್‌ಹ್ಯಾಮ್ ಟೆಸ್ಟ್‌ನಲ್ಲಿ ವಿರಾಟ್ ಕೊಹ್ಲಿ ಎರಡೂ ಇನ್ನಿಂಗ್ಸ್‌ಗಳಲ್ಲಿ ಕ್ರಮವಾಗಿ 149 ಮತ್ತು 51 ರನ್ ಗಳಿಸಿದ್ದರು. ಆದರೆ ಇಂಗ್ಲೆಂಡ್ ಬೌಲಿಂಗ್ ದಾಳಿಗೆ ಭಾರತ ಸೋತಿತ್ತು. ಆ ಸಮಯದಲ್ಲಿ ಭಾರತ ತಂಡದ ನಾಯಕ ವಿರಾಟ್ ಕೊಹ್ಲಿ.ಆದರೆ, ಕೊಹ್ಲಿ 2021 ರ ಪ್ರವಾಸದಲ್ಲಿ ಇಂಗ್ಲೆಂಡ್‌ನಲ್ಲಿ ಭಾರತಕ್ಕೆ ಅದ್ಭುತ ಗೆಲುವುಗಳನ್ನು ತಂದುಕೊಟ್ಟರು. ಓವಲ್ ಮತ್ತು ಲಾರ್ಡ್ಸ್‌ನಲ್ಲಿ ಸ್ಮರಣೀಯ ಗೆಲುವುಗಳೊಂದಿಗೆ ಸರಣಿಯ ಮೊದಲ ನಾಲ್ಕು ಟೆಸ್ಟ್ ಪಂದ್ಯಗಳಲ್ಲಿ 2–1 ಮುನ್ನಡೆ ಸಾಧಿಸಿತ್ತು ಭಾರತ. ಆದರೆ, ಆ ಸರಣಿಯ ಕೊನೆಯ ಪಂದ್ಯ ಕೋವಿಡ್ ಹರಡುವಿಕೆಯಿಂದ ಮುಂದೂಡಲ್ಪಟ್ಟಿತು. ಆ ಪಂದ್ಯವನ್ನು ಪೂರ್ಣಗೊಳಿಸಲು ಭಾರತ ಇಂಗ್ಲೆಂಡ್‌ಗೆ ಮರಳಿ ಬರುವ ಹೊತ್ತಿಗೆ ಕೊಹ್ಲಿ ನಾಯಕತ್ವದಿಂದ ಕೆಳಗಿಳಿದಿದ್ದರು

# ನೀನು ಹೊರಗೆ ಮಾತ್ರ ಸ್ಟಾರ್.. ಆದ್ರೆ ಮನೇಲಿ...





ನಾಗ ಚೈತನ್ಯ–ಸಮಂತಾ ಬೇರೆ ಆಗಿ ಮೂರು ವರ್ಷ ಆಗಿದೆ. ಇತ್ತೀಚೆಗೆ ನಾಗ ಚೈತನ್ಯ ಎರಡನೇ ಮದುವೆ ಕೂಡ ಆಗಿದೆ. ನಟಿ ಶೋಭಿತಾ ಧೂಳಿಪಾಲ ಜೊತೆ ಅವರು ಏಳು ಹೆಜ್ಜೆ ಇಟ್ಟಿದ್ದಾರೆ. ಎರಡು ವರ್ಷಕ್ಕೂ ಹೆಚ್ಚು ಕಾಲ ಶೋಭಿತಾ ಜೊತೆ ಸಂಬಂಧ ಇದ್ದ ನಾಗ ಚೈತನ್ಯ ಅವರನ್ನೇ ಮದುವೆ ಆದರು.

ನಾಗ ಚೈತನ್ಯ–ಸಮಂತಾ ಬೇರೆ ಆಗಿ ಮೂರು ವರ್ಷ ಆಗಿದೆ. ಇತ್ತೀಚೆಗೆ ನಾಗ ಚೈತನ್ಯ ಎರಡನೇ ಮದುವೆ ಕೂಡ ಆಗಿದೆ. ನಟಿ ಶೋಭಿತಾ ಧೂಳಿಪಾಲ ಜೊತೆ ಅವರು ಏಳು ಹೆಜ್ಜೆ ಇಟ್ಟಿದ್ದಾರೆ. ಎರಡು ವರ್ಷಕ್ಕೂ ಹೆಚ್ಚು ಕಾಲ ಶೋಭಿತಾ ಜೊತೆ ಸಂಬಂಧ ಇದ್ದ ನಾಗ ಚೈತನ್ಯ ಅವರನ್ನೇ ಮದುವೆ ಆದರು.

ನಾಗ ಚೈತನ್ಯಗೆ ಮದುವೆ ಆದ್ರೂ ಸಮಂತಾ ಜೊತೆ ಇದ್ದ ಸಂಬಂಧ, ಪ್ರೀತಿ, ಮದುವೆ, ಜಗಳಗಳ ಬಗ್ಗೆ ಸುದ್ದಿಗಳು ಸೋಶಿಯಲ್ ಮೀಡಿಯಾದಲ್ಲಿ ಸದಾ ವೈರಲ್ ಆಗ್ತಾನೇ ಇರುತ್ತೆ. ಮನೇಲಿ ತನ್ನ ಜೊತೆ ನಾಗ ಚೈತನ್ಯ ಹೇಗೆ ಇರ್ತಿದ್ರು ಅಂತ ಒಂದು ಸಂದರ್ಭದಲ್ಲಿ ಸಮಂತಾ ಹೇಳಿದ್ರು.

ಮದುವೆಗೆ ಮುಂಚೆಯೇ ಸಮಂತಾ ದಕ್ಷಿಣ ಭಾರತದ ಸ್ಟಾರ್ ನಟಿಯರಲ್ಲಿ ಒಬ್ಬರು. ತೆಲುಗು ಮತ್ತು ತಮಿಳು ಚಿತ್ರರಂಗದಲ್ಲಿ ದೊಡ್ಡ ಹೆಸರು ಮಾಡಿದ್ರು. ಎಲ್ಲಾ ದೊಡ್ಡ ನಟರ ಜೊತೆ ಸಮಂತಾ ನಟಿಸಿದ್ದಾರೆ. ಸಮಂತಾಗೆ ಹಿಟ್ ಪರ್ಸೆಂಟೇಜ್ ಜಾಸ್ತಿ. ಅವರನ್ನ ಲಕ್ಕಿ ಚಾರ್ಮ್ ಅಂತ ನಿರ್ದೇಶಕರು ಮತ್ತು ನಿರ್ಮಾಪಕರು ಭಾವಿಸ್ತಿದ್ರು. ನಾಗ ಚೈತನ್ಯ ಜೊತೆಗೆ ಓಖಿಖ ಜೊತೆ ಕೂಡ ಸಮಂತಾ ಹೆಚ್ಚು ಸಿನಿಮಾಗಳಲ್ಲಿ ನಟಿಸಿದ್ದಾರೆ.

ಮದುವೆ ಆದ್ಮೇಲೂ ಸಮಂತಾ ಸಿನಿಮಾಗಳಲ್ಲಿ ನಟಿಸಿದ್ರು. ಬೋಲ್ಡ್ ಪಾತ್ರಗಳನ್ನೂ ಮಾಡಿದ್ರು. 'ದಿ ಫ್ಯಾಮಿಲಿ ಮ್ಯಾನ್ 2' ಸೀರೀಸ್ ನಂತರ ಸಮಂತಾ ಬಾಲಿವುಡ್‌ನಲ್ಲೂ ಫೇಮಸ್ ಆದ್ರು. ಶೂಟಿಂಗ್ ಮುಗಿಸಿ ಮನೆಗೆ ಬಂದ ಸಮಂತಾ ಜೊತೆ ನಾಗ ಚೈತನ್ಯ ಹೀಗೆ ವರ್ತಿಸ್ತಿದ್ರಂತೆ. ಸಮಂತಾ ಹೇಳಿದ್ರು, "ನೀನು ಹೊರಗೆ ಸ್ಟಾರ್. ಆದ್ರೆ ಮನೇಲಿ ನೀನು ಸಾಮಾನ್ಯ ಗೃಹಿಣಿ. ಮನೆಗೆ, ಅಡುಗೆಗೆ ಬೇಕಾದ ವಸ್ತುಗಳು ಇದೆಯಾ ಇಲ್ವಾ ಅಂತ ನೋಡ್ಕೋಬೇಕು. ವಾರಾಂತ್ಯದ ಪ್ಲಾನ್ ಮಾಡ್ಕೋಬೇಕು ಅಂತ ಹೇಳ್ತಿದ್ರು" ಅಂತ.

ಸಮಂತಾ ಮಾತು ಕೇಳಿದ್ರೆ ನಾಗ ಚೈತನ್ಯ ಅವರ ಮೇಲೆ ಸ್ವಲ್ಪ ಹಿಡಿತ ಸಾಧಿಸ್ತಿದ್ರು ಅನ್ಸುತ್ತೆ. ಆದ್ರೆ ನಾಗ ಚೈತನ್ಯ ಮೇಲೆ ಸಮಂತಾ ಯಾವ ಆರೋಪವನ್ನೂ ಮಾಡಿಲ್ಲ. ನಗುತ್ತಾ ಮನೇಲಿ ಇಬ್ಬರ ಮಾತು, ಕೆಲಸ ಹೇಗಿರುತ್ತೆ ಅಂತ ಹೇಳಿದ್ರು. ವಿಚ್ಛೇದನ ಪಡೆದ ಸಮಂತಾ ಒಬ್ಬರೇ ಇದ್ದಾರೆ. ಇತ್ತೀಚೆಗೆ ಅವರ ಬಗ್ಗೆ ಪ್ರೀತಿಯ ಸುದ್ದಿಗಳು ಬಂದವು. 'ದಿ ಫ್ಯಾಮಿಲಿ ಮ್ಯಾನ್ 2' ಖ್ಯಾತಿಯ ರಾಜ್‌ರನ್ನ ಪ್ರೀತಿಸ್ತಿದ್ದಾರೆ ಅಂತ ಬಾಲಿವುಡ್ ಮೀಡಿಯಾದಲ್ಲಿ ಸುದ್ದಿ ಬಂದಿತ್ತು.

ಈ ಸುದ್ದಿಗಳ ಬಗ್ಗೆ ಸಮಂತಾ ಏನೂ ಹೇಳಿಲ್ಲ. ಸಮಂತಾ 'ಟ್ರಾಲಾ ಮೂವಿಂಗ್ ಪಿಕ್ಚರ್ಸ್' ಅಂತ ಒಂದು ಬ್ಯಾನರ್ ಶುರು ಮಾಡಿದ್ರು. 'ಮಾ ಇಂಟಿ ಬಂಗಾರು' ಅಂತ ಒಂದು ಪ್ರಾಜೆಕ್ಟ್ ಅನೌನ್ಸ್ ಮಾಡಿದ್ರು. ಇದರ ಬಗ್ಗೆ ಬೇರೆ ಅಪ್ಡೇಟ್ ಇಲ್ಲ. ಸಮಂತಾ ನಟಿಸಿರುವ ಆಕ್ಷನ್ ಚಿತ್ರ 'ಸಿಟಾಡೆಲ್' ಈಗ ಅಮೆಜಾನ್ ಪ್ರೈಮ್‌ನಲ್ಲಿ ಸ್ಟ್ರೀಮ್ ಆಗ್ತಿದೆ. ವರುಣ್ ಧವನ್ ಇನ್ನೊಂದು ಮುಖ್ಯ ಪಾತ್ರದಲ್ಲಿ ನಟಿಸಿದ್ದಾರೆ.

ಪ್ರಕಾಶಕ– ಸಂಪಾದಕ ಹಾಗೂ ಮಾಲೀಕ ಲಕ್ಷ್ಮೀಪ್ರಸನ್ನ ಆರ್.ಹೆಚ್. ಅವರಿಂದ #1652/6, 20ನೇ ತಿರುವು, 8ನೇ ಮುಖ್ಯರಸ್ತೆ, ಸಿ ಬ್ಲಾಕ್, ಸಹಕಾರ ನಗರ, ಬೆಂಗಳೂರು–560092 ಇಲ್ಲಿ ಪ್ರಕಟಗೊಂಡು, ಮುದ್ರಣ: ಪಿ.ಎನ್.ಪ್ರಿಂಟರ್ಸ್, ನರಸಿಪಾಳ್ಯ, ಅರಿಶಿಣಕುಂಟೆ(ಪೋ.), ನೆಲಮಂಗಲ, ಬೆಂಗಳೂರು–562123 ಇಲ್ಲಿ ಮುದ್ರಿಸಲ್ಪಟ್ಟಿದೆ. **RNI.KAR/KAN/2009/31934,** ದೂರವಾಣಿ: **9448074878**
Edited, Published and Owned by Laxmiprasanna R.H, #1652/6, 20th Cross, 8th Main, C Block, SahakarNagar, Bangalore-560092. Printed by P N Printers, Narasipalya, Arishinakunte(Post), Kasaba(hobali), Nelamangala, Bengaluru-562123
**RNI.KAR/KAN/2009/31934.**VOLUME-16/ISSUE-30 Email-mussanje2010@gmail.com, Phone: **9448074878**